ಸಂಪುಟ: 04 ಸಂಚಿಕೆ: 240 ಪುಟಗಳು: 08 ಬುಧವಾರ 13 ನವೆಂಬರ್ 2024
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**

ಪ್ರತಿಯೊಬ್ಬರೂ ಜಗತ್ತನ್ನೇ ಬದಲಾಯಿಸಬೇಕು ಎಂದು ಆಲೋಚಿಸುತ್ತಾರೆ ಆದರೆ ಯಾರೊಬ್ಬರೂ ತಮ್ಮನ್ನು ತಾವು ಬದಲಾಯಿಸಿಕೊಳ್ಳಬೇಕು ಎಂದು ಚಿಂತಿಸುವುದಿಲ್ಲ

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

# ಕಸಕ್ಕೂ ಕೊಡ್ಬೇಕು ಕಾಸು!



- ಬೆಂಗಳೂರಿಗರಿಗೆ ಹೊಸ ಶಾಕ್
- ಹೆಚ್ಚು ಕಸ ಉತ್ಪಾದಿಸುವವರಿಗೆ ಬಿಸಿ ಮುಟ್ಟಿಸಲು ಬಿಬಿಎಂಪಿ ಮುಂದು
- ಪ್ರತಿ ಕೆಜಿಗೂ 12 ರೂಪಾಯಿ ಸೆಸ್
- ನಿತ್ಯವೂ 100 ಕೆಜಿಗಿಂತಲೂ ಹೆಚ್ಚಿನ ಕಸ ಉತ್ಪತ್ತಿ
- ಜೇಬಿಗೆ ಕತ್ತರಿ ಹಾಕಲು ಮುಂದಾಗಲಿದೆ ಪಾಲಿಕೆ




> ಈ ಸಂಬಂಧ ಆರು ತಿಂಗಳು ಹಿಂದೆಯೇ ನೋಟಿಸ್ ಜಾರಿ ಮಾಡಲಾಗಿದೆ. ಹೆಚ್ಚು ಕಸ ಉತ್ಪಾದನೆ ಮಾಡುವವರಿಗೆ ನೀವೇ ಕಸ ವಿಲೇವಾರಿ ಮಾಡಿಕೊಳ್ಳಿ ಎಂದು ಸೂಚನೆಯನ್ನೂ ಕೊಡಲಾಗಿತ್ತು. ಆದರೆ, ಬಹುತೇಕರು ಹೆಚ್ಚು ಕಸ ಉತ್ಪಾದನೆಯ (ಕಾಂಪೋಸ್ಟ್ ಮಾಡುವುದು) ವಿಲೇವಾರಿ ಮಾಡುವುದಕ್ಕೆ ಯಾವುದೇ ಕ್ರಮ ತೆಗೆದುಕೊಂಡಿಲ್ಲ. ಹೀಗಾಗಿ, ಈ ರೀತಿ ಮಾಡುವವರಿಗೆ ಪ್ರತಿ ಕೆ.ಜಿ. ಕಸಕ್ಕೆ 12 ರೂಪಾಯಿ ಸೆಸ್ ವಿಧಿಸಲು ಉದ್ದೇಶಿಸಲಾಗಿದೆ. ಈ ಪ್ರಸ್ತಾವನೆಯನ್ನು ಈಗಾಗಲೇ ಸರ್ಕಾರಕ್ಕೆ ಸಲ್ಲಿಕೆ ಮಾಡಲಾಗಿದೆ
>
> -ತುಷಾರ್ ಗಿರಿನಾಥ್, ಬಿಬಿಎಂಪಿ ಮುಖ್ಯ ಆಯುಕ್ತ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಲ್ಲಿ ದಿನ ಒಂದಿಲ್ಲೊಂದು ತೆರಿಗೆ (ಟ್ಯಾಕ್ಸ್) ಹೊರೆ ಜನರಿಗೆ ಬೀಳುತ್ತಲ್ಲೇ ಇದೆ. ಇದೀಗ ಕಸದ ಸಂಗ್ರಹದಲ್ಲೂ ಟ್ಯಾಕ್ಸ್ (ಸೆಸ್) ಹಾಕುವುದಕ್ಕೆ ಬಿಬಿಎಂಪಿ (ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ) ಮುಂದಾಗಿದೆ. ಬೆಂಗಳೂರಿನಲ್ಲಿ ಕಸ ಸಂಗ್ರಹದಲ್ಲಿ ಕೆಜಿ ಲೆಕ್ಕದ ಮೇಲೆ ಸೆಸ್ ಹಾಕುವುದಕ್ಕೆ ಬಿಬಿಎಂಪಿ ಮುಂದಾಗಿದೆ. ಆದರೆ, ಈ ವಿಷಯದಲ್ಲಿ ಸಣ್ಣ ವಿನಾಯಿತಿಯನ್ನು ಸಹ ನೀಡುತ್ತಿದೆ. ಹಾಗಾದರೆ ಈ ಕಸದ ಸೆಸ್ ಯಾರಿಗೆ ಅನ್ವಯವಾಗಲಿದೆ, ಎಷ್ಟು ಕೆಜಿ ಕಸಕ್ಕೆ ಎಷ್ಟು ಪಾವತಿ ಮಾಡಬೇಕು ಎನ್ನುವ ವಿವರ ಇಲ್ಲಿದೆ. ಬೆಂಗಳೂರಿನಲ್ಲಿ ಮೊದಲ ಹಂತದಲ್ಲಿ ಹೆಚ್ಚು ಕಸ ಉತ್ಪಾದಿಸುವವರಿಗೆ ಬಿಸಿ ಮುಟ್ಟಿಸಲು ಬಿಬಿಎಂಪಿ ಮುಂದಾಗಿದೆ. ಇದರ ಭಾಗವಾಗಿ ಹೆಚ್ಚು ಕಸ ಉತ್ಪಾದಿಸುವವರು (ಹೆಚ್ಚು ಕಸವನ್ನು ಕಸದ ಗಾಡಿಗೆ ಕೊಡುವವರು) ಪ್ರತಿ ಕೆಜಿಗೂ 12 ರೂಪಾಯಿ ಸೆಸ್ (ದರ) ವಿಧಿಸಲು ಬಿಬಿ ಎಂಪಿ ಮುಂದಾಗಿದೆ. ಇದಕ್ಕೆ ಬಿಬಿಎಂಪಿ, ಅದರ ಅಂಗಸಂಸ್ಥೆ ನೀಡಿರುವ ಕಾರಣ ಬೆಂಗಳೂರಲ್ಲಿ ಹೆಚ್ಚು ಕಸ ಉತ್ಪಾದನೆಯಾಗುತ್ತಿದೆ ಎನ್ನುವುದು. ಈ ಬಗ್ಗೆ ಬಿಬಿಎಂಪಿಯ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅವರು, ಬೆಂಗಳೂರಿನಲ್ಲಿ ಕೆಲವು ಭಾಗದಲ್ಲಿ ಅತಿ ಹೆಚ್ಚು ಕಸ ಉತ್ಪತ್ತಿಯಾಗುತ್ತಿದೆ. ಬೆಂಗಳೂರು ನಗರದಲ್ಲಿ ಕೆಲವು ವಸತಿ ಸಮುಚ್ಚಯಗಳು, ಹೋಟೆಲ್‌ಗಳು, ಮಾಲ್‌ಗಳಿಂದ ನಿತ್ಯವೂ 100 ಕೆಜಿಗಿಂತಲೂ ಹೆಚ್ಚಿನ ಕಸ ಉತ್ಪತ್ತಿಯಾಗುತ್ತಿದೆ. ಈ ಕಸವನ್ನು ದಿನ ಬಿಬಿಎಂಪಿ ಕಾಂಪ್ಯಾಕ್ಟರ್‌ಗಳಿಗೆ ಕೊಡಲಾಗ್ತಿದೆ. ಈ ರೀತಿ ಕಸ ಉತ್ಪಾದನೆಯಾಗುತ್ತಿರುವುದರಿಂದ ಕಸ ವಿಲೇವಾರಿ, ನಿರ್ವಹಣೆಯ ಮೇಲೆ ಭಾರಿ ಹೊಡೆತ ಬೀಳುತ್ತಿದೆ ಎಂದಿದ್ದಾರೆ.




- ಪ್ರತಿ ಕೆ.ಜಿ. ಕಸಕ್ಕೆ 12 ರೂಪಾಯಿ ಸೆಸ್ ವಿಧಿಸಲು ಉದ್ದೇಶಿಸಲಾಗಿದೆ.
- 6 ತಿಂಗಳ ಹಿಂದೆಯೇ ನೋಟಿಸ್ ನೀಡಲಾಗಿದೆ
- ಇನ್ನು ಬೆಂಗಳೂರಿನಲ್ಲಿ ಹೆಚ್ಚು ಕಸ ಉತ್ಪಾದನೆ
- ಕೆಜಿ ಲೆಕ್ಕದ ಮೇಲೆ ಸೆಸ್ ಹಾಕುವುದಕ್ಕೆ ಬಿಬಿಎಂಪಿ ಮುಂದಾಗಿದೆ.

**ಸರ್ಕಾರಕ್ಕೆ ಪ್ರಸ್ತಾವನೆ:** ಬೆಂಗಳೂರಿನಲ್ಲಿ ಹೆಚ್ಚು ಕಸ ಉತ್ಪಾದನೆ ಮಾಡುವವರಿಂದ ಪ್ರತ್ಯೇಕ ಸೆಸ್ ಸಂಗ್ರಹ ಮಾಡುವುದಕ್ಕೆ ಸಂಬಂಧಿಸಿದಂತೆ ಈಗಾಗಲೇ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಬಿಬಿಎಂ ಪಿಯ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅವರು ಹೇಳಿದ್ದಾರೆ.

ಬೆಂಗಳೂರಿನಲ್ಲಿ ಹೆಚ್ಚು ಕಸ ಉತ್ಪಾದನೆ ಮಾಡುವವರಿಂದ ಕಸ ಹೆಚ್ಚಾಗಿ ಸಂಗ್ರಹವಾಗುತ್ತಿದ್ದು, ಇದರಿಂದ ಕಸ ಸಂಗ್ರಹ ಮಾಡುವ ವ್ಯವಸ್ಥೆಯ ಮೇಲೆ ಗಂಭೀರ ಪರಿಣಾಮ ಬೀರುತ್ತಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಈ ರೀತಿ ಕಸ ಹೆಚ್ಚಾಗುತ್ತಿರುವುದರಿಂದ ಪಾಲಿಕೆಗೆ ಆರ್ಥಿಕ ಹೊರೆಯೂ ಆಗಿದೆ ಎನ್ನಲಾಗಿದೆ. ಕಸ ಸಂಗ್ರಹ ಹೆಚ್ಚಾದಂತೆ ಅದರ ವಿಲೇವಾರಿ ಮಾಡುವುದು ಸಹ ಸವಾಲಿನ ಕೆಲಸವಾಗುತ್ತದೆ ಎಂದೇ ವಿಶ್ಲೇಷಣೆ ಮಾಡಲಾಗಿದೆ. ಇನ್ನು ಬೆಂಗಳೂರಿನಲ್ಲಿ ಸಗಟು (ಹೆಚ್ಚು) ಕಸ ಉತ್ಪಾದನೆ ಮಾಡುವವರಿಂದ ಸಮಸ್ಯೆ ಆಗುತ್ತಿದೆ.

ಇದಕ್ಕೆ ಸಂಬಂಧಿಸಿದಂತೆ ಎಲ್ಲಾರಿಗೂ ಆರು ತಿಂಗಳು ಮುಂಚೆಯೇ ನೋಟಿಸ್ ಹಾಗೂ ಮಾಹಿತಿ ಸಹ ಕೊಡಲಾಗಿತ್ತು ಎಂದು ತುಷಾರ್ ಗಿರಿನಾಥ್ ಹೇಳಿದ್ದಾರೆ. ನಗರದಲ್ಲಿ ಕೆಲವು ಅನಧಿಕೃತ ಹೋಟೆಲ್‌ಗಳು ಸೇರಿದಂತೆ ಕೆಲವು ಭಾಗದಿಂದ ಹೆಚ್ಚು ಕಸ ಉತ್ಪತ್ತಿಯಾಗುತ್ತಿದೆ. ಬೆಂಗಳೂರಲ್ಲಿ ಕಸ ವಿಲೇವಾರಿ ಮಾಡುವುದು ನಮ್ಮ ಜವಾಬ್ದಾರಿ ನಿಜ. ಆದರೆ, ಹೆಚ್ಚು ಕಸ ಉತ್ಪತ್ತಿಸುವವರು ಅವರ ಜವಾಬ್ದಾರಿ ನಿರ್ವಹಿಸಬೇಕು.

## ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚನೆ



ದಕ್ಷಿಣ ವಲಯ ವ್ಯಾಪ್ತಿಯಲ್ಲಿ ನಾಗರೀಕರಿಂದ ಬರುವ ದೂರುಗಳಿಗೆ ತ್ವರಿತವಾಗಿ ಸ್ಪಂದಿಸಬೇಕು. ಸಹಾಯ 2.0 ತಂತ್ರಾಂಶದಲ್ಲಿ ಬರುವ ದೂರುಗಳಿಗೆ ಹೆಚ್ಚು ಆದ್ಯತೆ ನೀಡಿ ನಿಗದಿತ ಸಮಯದೊಳಗಾಗಿ ಸಮಸ್ಯೆಗಳನ್ನು ಇತ್ಯರ್ಥಪಡಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಿದರು. ಅಹವಾಲು ಸ್ವಿಕಾರದ ವೇಳೆ ಪಾದಚಾರಿ ಮಾರ್ಗ ಒತ್ತುವರಿ, ರಸ್ತೆ ಬದಿ ತ್ಯಾಜ್ಯ ಬಿಸಾಡುವ, ಅನಧಿಕೃತ ಕಟ್ಟಡಗಳ ನಿರ್ಮಾಣ ಸಂಬಂಧಿಸದಿದಂತೆ ಹೆಚ್ಚು ದೂರುಗಳು ಬಂದಿದ್ದು, ಹೆಚ್ಚು ದೂರುಗಳು ಬಂದಿರುವ ಬಗ್ಗೆ ಗಮನ ಹರಿಸಿ ಅವುಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಿದರು. ಎಂದು ವಿದ್ಯುತ್ ವಿಭಾಗದ ಕಾರ್ಯಪಾಲಕ ಅಭಿಯಂತರರು ಕೋರಿರುತ್ತಾರೆ.

## ಹೆಚ್ಚು ಕಸ ಹಾಕಿದರೆ ಜೋಕೆ

ಬೆಂಗಳೂರಿನ ಬದುಕು ಬಲು ದುಬಾರಿ ಇಲ್ಲಿ ಜೀವನ ನಡೆಸೋದ್ ಹೇಗ್ ಸ್ವಾಮಿ ಅನ್ನೋದೇ ಎಲ್ಲರ ಪ್ರಶ್ನೆ.. ಊಟ, ಬಟ್ಟೆ, ಹಣ್ಣು ತರಕಾರಿ, ದಿನಸಿ, ಪೆಟ್ರೋಲ್, ಡೀಸೇಲ್ ಹೀಗೆ ಎಲ್ಲವೂ ತುಟ್ಟಿಯಾಗಿದೆ. ಅಂಥದ್ದರಲ್ಲಿ ಇದರ ಮಧ್ಯೆಯೇ ನಗರವಾಸಿಗಳ ಜೇಬಿಗೆ ಕತ್ತರಿ ಹಾಕಲು ಮುಂದಾಗಿದೆ. ಹೌದು, ನಗರದಲ್ಲಿ ಬೃಹತ್ ಪ್ರಮಾಣದಲ್ಲಿ ತ್ಯಾಜ್ಯ ಉತ್ಪಾದಿಸುವವರಿಗೆ ಸೆಸ್ ವಿಧಿಸಲು ಮುಂದಾಗಿದೆ. ಪ್ರತಿ ಕೆಜಿ ಕಸಕ್ಕೆ 12 ರೂಪಾಯಿ ಸೆಸ್ ವಿಧಿಸಲು ಚಿಂತನೆ ನಡೆಸಿದೆ. ಈ ಬಗ್ಗೆ ಸುದ್ದಿಗಾರರೊಂದಿಗೆ ಮಾತನಾಡಿರುವ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್, ಅಪಾರ್ಟಮೆಂಟ್‌ಗಳು, ಹೋಟೆಲ್ ಮತ್ತು ಮಾಲ್‌ಗಳು ಪ್ರತಿನಿತ್ಯ 100 ಕೆಜಿಗೂ ಅಧಿಕ ತ್ಯಾಜ್ಯವನ್ನು ಉತ್ಪಾದಿಸಿ, ಪಾಲಿಕೆ ಕಾಂಪ್ಯಾಕ್ಟರ್‌ಗಳಿಗೆ ಕಳಿಸುತ್ತಿವೆ. ಹೀಗಾಗಿ ಕಸ ಸಂಗ್ರಹ ವ್ಯವಸ್ಥೆಯ ಮೇಲೆ ಹೊರೆಯಾಗುತ್ತಿದ್ದು, ಇದನ್ನು ನಿಯಂತ್ರಿಸಲು ಉದ್ದೇಶಿತ ಸೆಸ್ ಪ್ರಸ್ತಾವನ್ನು ಸರ್ಕಾರದ ಮುಂದಿಟ್ಟಿದ್ದೇವೆ ಎಂದರು. 6 ತಿಂಗಳ ಹಿಂದೆಯೇ ಸಗಟು ತ್ಯಾಜ್ಯ ಉತ್ಪಾದಕರಿಗೆ ನೋಟಿಸ್ ನೀಡಲಾಗಿತ್ತು. ಕಸ ವಿಲೇವಾರಿಗೆ ಕ್ರಮ ಕೈಗೊಳ್ಳಲು ಸೂಚಿಸಿದ್ದರೂ ಕ್ರಮ ಕೈಗೊಳ್ಳದ ಕಾರಣ ಸ್ವಂತ ವ್ಯವಸ್ಥೆ ಮಾಡಿಕೊಳ್ಳದ ಸಗಟು ತ್ಯಾಜ್ಯ ಉತ್ಪಾದಕರಿಂದ ಕಸ ಸಂಗ್ರಹಿಸಿಲು ಪ್ರತಿ ಕೆ.ಜಿ.ಗೆ 12 ರೂಪಾಯಿ ನಿಗದಿಪಡಿಸಲಾಗಿದೆ.

## ಕೆಂಗೇರಿ ಚಿತಾಗಾರ ತಾತ್ಕಾಲಿಕವಾಗಿ ಸ್ಥಗಿತ

ರಾಜರಾಜೇಶ್ವರಿನಗರ ವಲಯ ವ್ಯಾಪ್ತಿಯ ಕೆಂಗೇರಿ ವಿದ್ಯುತ್ ಚಿತಾಗಾರದಲ್ಲಿ ತುರ್ತ ನಿರ್ವಹಣೆ ಕಾಮಗಾರಿಯನ್ನು ಕೈಗೊಳ್ಳಬೇಕಾಗಿರುವುದರಿಂದ ದಿನಾಂಕ: 18-11- 2024 ವರೆವಿಗೂ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗುತ್ತಿದ್ದು, ಈ ಚಿತಾಗಾರಕ್ಕೆ ಮೃತ ದೇಹಗಳನ್ನು ದಹನ ಕ್ರಿಯೆಗಾಗಿ ತರುವ ಸಾರ್ವಜನಿಕರು ಸಮೀಪದಲ್ಲಿರುವ ಸುಮ್ಮನಹಳ್ಳಿ, ಮೇಡಿ ಅಗ್ರಹಾರ ಅಥವಾ ಪೀಣ್ಯ ವಿದ್ಯುತ್ ಚಿತಾಗಾರವನ್ನು ಉಪಯೋಗಿಸಿಕೊಳ್ಳಬಹುದಾಗಿರುತ್ತದೆ

## ಸಿದ್ದುದು ಟಿಪ್ಪು ಸಂಸ್ಕೃತಿ, ಮುಸ್ಲಿಂರು ಏನೇ ಕೇಳಿದರು ಕೊಟ್ಟು ಬಿಡ್ತಾನೆ

• ಉದಯವಾಹಿನಿ, ದಾವಣಗೆರೆ

ಸಿದ್ದರಾಮಯ್ಯನದ್ದು ಟಿಪ್ಪು ಸಂಸ್ಕೃತಿ, ಮುಸ್ಲಿಮರು ಏನೇ ಕೇಳಿದರು ಕೊಟ್ಟುಬಿಡುತ್ತಾನೆ ಎಂದು ಸಿಎಂ ಸಿದ್ದರಾಮಯ್ಯ ವಿರುದ್ಧ ವಿಪಕ್ಷ ನಾಯಕ ಆರ್. ಅಶೋಕ್ ಏಕವಚನದಲ್ಲಿ ವಾಗ್ದಾಳಿ ನಡೆಸಿದ್ದಾರೆ.

ದಾವಣಗೆರೆಯಲ್ಲಿ ಆರ್ ಅಶೋಕ್ ಮಾಧ್ಯಮಗಳೊಂದಿಗೆ ಮಾತನಾಡಿ, ಸಿಎಂ ಸಿದ್ದರಾಮಯ್ಯ ಮುಸ್ಲಿಂರು ನಾಲ್ಕು ಕೇಳಿದರೆ ಎಂಟು ಕೊಡುತ್ತಾನೆ. ಉತ್ತರ ಕರ್ನಾಟಕದ ಅವನ್ಯಾರು ಮಾಜಿ ಸಚಿವ ಹೇಳಿದ್ದಾನಲ್ಲ ಸಿದ್ದರಾಮಯ್ಯ ಸಿಎಂ ಆಗಿದ್ದಾಗಲೇ ಎಲ್ಲವನ್ನು ಬಾಚಿ ಕೊಳ್ಳಿ ಎಂದು ಹಾಗಾಗಿ ಸಿದ್ದರಾಮಯ್ಯ ಮುಸ್ಲಿಮರು ನಾಲ್ಕು ಕೇಳಿದರೆ ಎಂಟು ಕೊಡುತ್ತಾನೆ ಎಂದು ಏಕವಚನದಲ್ಲಿ ವಾಗ್ದಾಳಿ ಮಾಡಿದರು.

## ನಮ್ಮಪ್ಪ ಕುರುಬರೆಲ್ಲರೂ ಕಾನೂನು ಓದೋಕೆ ಆಗಲ್ಲ ಅಂದಿದ್ರು: ಸಿಎಂ

• ಉದಯವಾಹಿನಿ, ಮೈಸೂರು

ನಮ್ಮ ತಂದೆ ನಮ್ಮ ಊರಿನ ಜನರ ಮಾತನ್ನು ಕೇಳಿ, ಕುರುಬರೆಲ್ಲರು ಕಾನೂನು ಓದೋಕೆ ಆಗಲ್ಲ ಅಂತ ಹೇಳಿದ್ದರು. ಆದರೆ ನಾನು ಮಾತ್ರ ಹಠ ಬಿಡದೆ ಛಲದಿಂದ ಓದಿ ಲಾಯರ್ ಆದೆ, ಬಳಿಕ ಎರಡು ಬಾರಿ ಮುಖ್ಯಮಂತ್ರಿಯು ಆದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು. ಮೈಸೂರು ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ವತಿಯಿಂದ ಆಯೋಜಿಸಿದ್ದ ಹೆಚ್.ಡಿ.ಕೋಟೆ ವಿಧಾನಸಭಾ ಕ್ಷೇತ್ರದಲ್ಲಿನ 443.64 ಕೋಟಿ ವೆಚ್ಚದ ಕಾಮಗಾರಿ ಉದ್ಘಾಟನೆ ಮತ್ತು ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಿದ್ಯೆ ಯಾರೊಬ್ಬರ ಸ್ವತ್ತಲ್ಲ. ವಾಲ್ಮೀಕಿ, ವ್ಯಾಸ, ಕನಕದಾಸ ಎಲ್ಲರೂ ಶೂದ್ರ, ದಲಿತ ಸಮುದಾಯದವರು. ಮೇಲ್ವರ್ಗಕ್ಕೆ ಮಾತ್ರ ಶಿಕ್ಷಣ ಎನ್ನುವುದು ತಪ್ಪು ಎಂದರು. ಮಹಾಭಾರತ ಬರೆದ ವ್ಯಾಸರು ಬೆಸ್ತರು, ರಾಮಾಯಣ ಬರೆದ ವಾಲ್ಮೀಕಿ ಬೇಡ ಸಮುದಾಯದವರು, ಶಾಕುಂತಲ ಬರೆದ ಕಾಳಿದಾಸರು ಕುರುಬ ಸಮುದಾಯದವರು. ವಿದ್ಯೆ ಯಾರೊಬ್ಬರ ಸ್ವತ್ತು ಅಲ್ಲ. ಅವಕಾಶಗಳು ಸಿಗಬೇಕು ಅಷ್ಟೇ. ನಮ್ಮ ಜೀವನವನ್ನು ರೂಪಿಸಿಕೊಳ್ಳುವ ಶಿಲ್ಪಿ ನಾವೇ. ಆದ್ದರಿಂದ ವಿದ್ಯೆ ಕಲಿಯಲೇಬೇಕು. ಶೂದ್ರ ಜಾತಿಯ ಕನಕದಾಸರು ದಾಸ ಶ್ರೇಷ್ಠರಾದರು. ಆದ್ದರಿಂದ ವಿದ್ಯಾವಂತರಾಗಲು ಜಾತಿ ಅಡ್ಡಿ ಬರುವುದಿಲ್ಲ ಎಂದರು.

## ಉಪ ಚುನಾವಣೆ ವೇಳೆಯಲ್ಲೇ ಗೃಹಲಕ್ಷ್ಮೀ ಹಣ ಬಿಡುಗಡೆ ನೀತಿ ಸಂಹಿತೆ ಉಲ್ಲಂಘನೆ

• ಉದಯವಾಹಿನಿ, ಹಾವೇರಿ

ಪ್ರತಿ ಬಾರಿಯೂ ಚುನಾವಣೆಯ ಮುಂಚೆ ಮಹಿಳೆಯರ ಅಕೌಂಟ್‌ಗೆ ಗೃಹಲಕ್ಷ್ಮೀ ಯೋಜನೆಯ ಎರಡು ಸಾವಿರ ರೂಪಾಯಿಯನ್ನು ಹಾಕುವುದು ನೀತಿ ಸಂಹಿತೆಯ ವಿರುದ್ಧವಾಗಿದೆ. ಚುನಾವಣಾ ಆಯೋಗ ತಕ್ಷಣ ತಡೆ ಹಿಡಿಯಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಚುನಾವಣೆ ಪಾರದರ್ಶಕವಾಗಿರಬೇಕು. ರಾಜ್ಯ ಸರ್ಕಾರ ಪ್ರತಿ ಬಾರಿಯೂ ಚುನಾವಣೆಗೆ ಮುನ್ನ ಸರ್ಕಾರದ ಹಣದಲ್ಲಿ ತಮ್ಮ ರಾಜಕೀಯ ರೊಟ್ಟಿ ಸುಟ್ಟುಕೊಳ್ಳುವ ಕೆಲಸ ಮಾಡುತ್ತಿದೆ. ಇದು ಅತ್ಯಂತ ಖಂಡನೀಯ. ಚುನಾವಣಾ ಆಯೋಗ ಕಣ್ಣು ಮುಚ್ಚಿ ಕುಳಿತಿದೆ. ಹಾವೇರಿ ಜಿಲಾಧಿಕಾರಿಗಳು ಕಣ್ಣು ಮುಚ್ಚಿ ಕುಳಿತಿದ್ದಾರೆ. ಇದನ್ನು ಕೂಡಲೆ ನಿಲ್ಲಿಸಬೇಕು ಎಂದು ಆಗ್ರಹಿಸಿದ್ದಾರೆ. ಚುನಾವಣೆಗೆ ಸರ್ಕಾರದ ಹಣ ಬಳಕೆಯಾಗುತ್ತಿರುವುದು ಸ್ಪಷ್ಟ. ಸಿಎಂ ಸಿದ್ದರಾಮಯ್ಯ ಅವರು ಪ್ರಜಾಪ್ರಭುತ್ವ, ಸಂವಿಧಾನದ ಬಹಳ ಬಗ್ಗೆ ಮಾತನಾಡುತ್ತಾರೆ.

ಇಡೀ ಸರ್ಕಾರವೇ ಸರ್ಕಾರಿ ದುಡ್ಡಿನಲ್ಲಿ ರಾಜಕೀಯ ಭ್ರಷ್ಟಾಚಾರ ಮಾಡುತ್ತಿದೆ. ಶಿಗ್ಗಾಂವಿ ಸವಣೂರು ಕ್ಷೇತ್ರದ ಜನರು ಯಾವುದೇ ಆಸೆ ಆಮಿಷಗಳಿಗೆ ಒಳಗಾಗದೇ ನಿರಂತರವಾಗಿ ನಡೆಯುತ್ತಿರುವ ಈ ಕ್ಷೇತ್ರದ ಅಭಿವೃದ್ಧಿಯನ್ನು ನೋಡಿ ಎಲ್ಲಾ ವರ್ಗದ ಜನರು ಈಗಾಗಲೇ ಏನು ತೀರ್ಮಾನ ಮಾಡಿದ್ದಿರಿ, ಅದನ್ನು ಯಾವುದೇ ಕಾರಣಕ್ಕೂ ಬದಲಾಯಿಸದೇ ಮತದಾನ ಮಾಡುವಂತೆ ಮನವಿ ಮಾಡಿದ್ದಾರೆ.

## ಹೆಚ್‌ಡಿಕುಮಾರಸ್ವಾಮಿ ಕರಿಯಣ್ಣ ಎಂದಿದ್ದಕ್ಕೆ ಸಚಿವ ಜಮೀರ್ ಕ್ಷಮೆಯಾಚನೆ

• ಉದಯವಾಹಿನಿ, ಮೈಸೂರು

ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ಅವರನ್ನು ಕರಿಯಣ್ಣ ಎಂದಿದ್ದಕ್ಕೆ ಜೆಡಿಎಸ್ ಕಾರ್ಯಕರ್ತರು, ಮುಖಂಡರು ಸಚಿವ ಜಮೀರ್ ಅಹ್ಮದ್ ವಿರುದ್ಧ ಮುಗಿ ಬಿದ್ದಿದ್ದರು. ಅಲ್ಲದೇ ಜನಾಂಗೀಯ ನಿಂದನೆಯ ಹೇಳಿಕೆ ನೀಡಿದ್ದಂತ ಜಮೀರ್ ವಿರುದ್ಧ ಕಿಡಿಕಾರಿದ್ದರು. ಈ ಬೆನ್ನಲ್ಲೇ ಎಚ್ಚೆತ್ತುಕೊಂಡಿರುವಂತ ಅವರು, ನಾನು ಮೊದಲಿನಿಂದಲೇ ಕರಿಯಣ್ಣ ಅಂತಾನೇ ಕರೆಯೋದು. ಇದಕ್ಕೆ ನೋವಾಗಿದ್ದರೇ ಕ್ಷಮೆ ಕೇಳುವೆ ಎಂದಿದ್ದಾರೆ. ಇಂದು ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದಂತ ಅವರು ನಾನು ಹೆಚ್.ಡಿ ಕುಮಾರಸ್ವಾಮಿ ಅವರನ್ನು ಮೊದಲಿನಿಂದಲೂ ಕುಮಾರಣ್ಣ ಅಂತಾನೇ ಕರೆಯೋದು. ಅವರು ನನ್ನ ಕುಳ್ಳ ಅಂತ ಕರೆಯುತ್ತಾರೆ. ಆ ಕಾರಣದಿಂದಲೇ ನಾನು ಕರಿಯಣ್ಣ ಅಂತ ಕುಮಾರಸ್ವಾಮಿ ಕರೆದಿದ್ದು ಎಂಬುದಾಗಿ ಸ್ಪಷ್ಟಪಡಿಸಿದರು. ಜೆಡಿಎಸ್ ಮುಖಂಡರಿಗೆ ನಾನು ಕುಮಾರಸ್ವಾಮಿ ಅವರನ್ನು ಕರಿಯಣ್ಣ ಅಂತ ಕರೆದಿದ್ದರಿಂದ ನೋವಾಗಿದೆ ಎಂಬುದಾಗಿ ತಿಳಿದು ಬಂದಿದೆ. ನನ್ನ ಕರಿಯಣ್ಣ ಹೇಳಿಕೆಯಿಂದ ನೋವಾಗಿದ್ದರೇ ದಯವಿಟ್ಟು ಕ್ಷಮಿಸಿ ಎಂಬುದಾಗಿ ಕ್ಷಮೆಯನ್ನು ಕೋರಿದರು.

## ಜಮೀರ್ ಪದಪುಂಜಗಳು ಪುಟ್ ಪಾತ್ ಪೋಕರಿಗಳೂ ನಾಚಿಸುವಂತಿದೆ: ಬಿ.ವೈ ವಿಜಯೇಂದ್ರ



• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಉಪಚುನಾವಣೆಯ ಕಣ ರಂಗೇರಿದ್ದು, ರಾಜಕೀಯ ನಾಯಕರ ಮಾತು ಭರಾಟೆ ಜೋರಾಗಿದೆ. ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ ಯೋಗೇಶ್ವರ ಪರ ಪ್ರಚಾರ ಮಾಡುತ್ತಿರುವ ವೇಳೆ ಸಚಿವ ಜಮೀರ್ ಅಹ್ಮದ್ ಹೆಚ್‌ಡಿ ಕುಮಾರಸ್ವಾಮಿ ಅವರನ್ನು ನಿಂದಿಸುವ ಭರದಲ್ಲಿ ಕರಿಯ ಕುಮಾರಸ್ವಾಮಿ ಎನ್ನುವ ಪದವನ್ನು ಬಳಸಿದ್ದಾರೆ.

ಜಮೀರ್ ಅವರ ಹೇಳಿಕೆಯನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಖಂಡಿಸಿದ್ದಾರೆ. ದಿನಕ್ಕೊಂದು ವಿವಾದಗಳನ್ನು ಸೃಷ್ಟಿಸಿ ಕರ್ನಾಟಕವನ್ನು ಗೊಂದಲದ ಗೂಡನ್ನಾಗಿಸಲು ಪಣತೊಟ್ಟಂತೆ ವರ್ತಿಸುತ್ತಿರುವ ಸಚಿವ ಜಮೀರ್ ಅಹ್ಮದ್ ಇದೀಗ ಕೇಂದ್ರ ಸಚಿವರಾದ ಕುಮಾರಸ್ವಾಮಿ ಅವರನ್ನು ವ್ಯಕ್ತಿಗತವಾಗಿ ನಿಂದಿಸುವ ಭರದಲ್ಲಿ ಸಂಸ್ಕೃತಿ ಹೀನರಂತೆ ವರ್ತಿಸಿದ್ದಾರೆ ಎಂದರು.

ನಾಗರಿಕ ಪರಿಭಾಷೆಯ ಪರಿಚಯವೇ ಇಲ್ಲದಂತೆ ಮಾತನಾಡುವ ಜಮೀರ್ ಅವರ ವರ್ತನೆ ಅತ್ಯಂತ ಖಂಡನೀಯ. ಚನ್ನಪಟ್ಟಣದಲ್ಲಿ ಭಾಷಣ ಮಾಡುವ ವೇಳೆ ಅವರು ಬಳಸಿರುವ ಪದಪುಂಜಗಳು ಪುಟ್ ಪಾತ್ ಪೋಕರಿಗಳೂ ನಾಚಿಸುವಂತಿದೆ.

ಇಂಥವರನ್ನು ಸಚಿವರನ್ನಾಗಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರೂ ಸಹ ಇತ್ತೀಚೆಗೆ ತಮ್ಮ ಹತಾಶೆಯ ಮನಸ್ಥಿತಿಯಿಂದ ಭಂಡ ಸಮರ್ಥನೆಗಿಳಿದು ಮಾಧ್ಯಮದವರ ಮೇಲೆ ಎರಗಿ ಬೀಳುತ್ತಿದ್ದಾರೆ ಎಂದು ಹೇಳಿದರು.

## ನಾಗರೀಕ ಕಾಮಗಾರಿಯಲ್ಲಿ ಮುಸ್ಲಿಮರಿಗೆ ಶೇ.4ರಷ್ಟು ಮೀಸಲಾತಿ

• ಉದಯವಾಹಿನಿ, ಬೆಂಗಳೂರು

ನಾಗರೀಕ ಕಾಮಗಾರಿಗಳ ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಶೇ.4ರಷ್ಟು ಮೀಸಲಾತಿ ನೀಡುವ ವಿಚಾರ ವಿವಾದ ಸ್ವರೂಪ ಪಡೆದುಕೊಳ್ಳುತ್ತಿದ್ದಂತೆಯೇ ಎಚ್ಚೆತ್ತ ರಾಜ್ಯ ಸರ್ಕಾರ ಮಂಗಳವಾರ ಸ್ಪಷ್ಟನೆ ನೀಡಿದೆ.

ರಾಜ್ಯದಲ್ಲಿ ಗುತ್ತಿಗೆ ಕಾಮಗಾರಿಗಳಲ್ಲಿ ಅಲ್ಪಸಂಖ್ಯಾತರ ಪ್ರವರ್ಗ 2 ಬಿ ಗೆ ಶೇ.4 ರಷ್ಟು ಮೀಸಲಾತಿಯನ್ನು ನೀಡಲು ಸಿಎಂ ಸಿದ್ದರಾಮಯ್ಯ ಅನುಮೋದನೆ ನೀಡಿದ್ದಾರೆ ಎಂಬ ವಿಚಾರ ವಿವಾದಕ್ಕೆ ಕಾರಣವಾಗಿತ್ತು. ಮೀಸಲಾತಿ ನೀಡುವಂತೆ ಮುಸ್ಲಿಂ ಶಾಸಕರ ನಿಯೋಗ ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿತ್ತು. ಈ ಹಿನ್ನೆಲೆಯಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (2ನೇ ತಿದ್ದುಪಡಿ) ಕಾಯ್ದೆಗೆ ತಿದ್ದುಪಡಿ ತರಲು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆಗೆ ಸೂಚನೆ ನೀಡಿದೆ ಎಂದು ಹೇಳಲಾಗುತ್ತಿತ್ತು. ಈ ಕುರಿತಾಗಿ ಕೆಲವು ಮಾಧ್ಯಮಗಳಲ್ಲಿ ವರದಿಯಾಗಿದ್ದು, ಈ ವಿಚಾರ ವಿವಾದಕ್ಕೆ ದಾರಿ ಮಾಡಿಕೊಟ್ಟಿತ್ತು. ಇದೀಗ ಮುಖ್ಯಮಂತ್ರಿಗಳ ಕಚೇರಿ ಸ್ಪಷ್ಟನೆ ನೀಡಿದ್ದು, ಮೀಸಲಾತಿ ಬೇಡಿಕೆ ಇರುವುದು ನಿಜ, ಆದರೆ ಇದಕ್ಕೆ ಒಪ್ಪಿಗೆ ನೀಡಲಾಗಿದೆ ಎಂಬ ವರದಿ ಸುಳ್ಳು ಎಂದು ಹೇಳಿದೆ.

ಕಾಮಗಾರಿಯಲ್ಲಿ ಮುಸ್ಲಿಮರಿಗೆ ಮೀಸಲಾತಿ ನೀಡುವ ಪ್ರಸ್ತಾವನೆ ಸರ್ಕಾರದ ಮುಂದೆ ಎಂಬ ವರದಿ ಕೆಲ ಮಾಧ್ಯಮಗಳಲ್ಲಿ ಪ್ರಕಟವಾಗಿದೆ. ಮೀಸಲಾತಿ ನೀಡಬೇಕೆಂಬ ಬೇಡಿಕೆ ಬಂದಿರುವುದು ನಿಜ. ಆದರೆ, ಈ ಕುರಿತು ಸರ್ಕಾರದ ಮುಂದೆ ಯಾವುದೇ ಪ್ರಸ್ತಾವನೆ ಇಲ್ಲ ಎಂದು ಸ್ಪಷ್ಟನೆ ನೀಡಿದೆ.


## ರಾಜ್ಯ ಸರ್ಕಾರದ ಆದೇಶ ಕೇವಲ ಜನರ ಕಣ್ಣೊರೆಸುವ ತಂತ್ರ: ಪ್ರಹ್ಲಾದ್ ಜೋಶಿ

• ಉದಯವಾಹಿನಿ, ದಾವಣಗೆರೆ

**ಎಲ್ಲಾ ನೋಟಿಸ್ ರದ್ದು ಪಡಿಸಬೇಕು**

ವಕ್ಫ್ ಆಸ್ತಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದ ನ.9ರ ಆದೇಶ ಕೇವಲ ಜನರ ಕಣ್ಣೊರೆಸುವ ತಂತ್ರ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಆಕ್ರೋಶ ವ್ಯಕ್ತಪಡಿಸಿದರು. ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನ.9 ರಂದು ರಾಜ್ಯ ಸರ್ಕಾರ ಕೂಡಲೇ ವಕ್ಫ್ ಆಸ್ತಿಗೆ ಸಂಬಂಧಿಸಿದಂತೆ ಜಾರಿ ಮಾಡಿರುವ ನೋಟಿಸ್ ಹಿಂದಕ್ಕೆ ಪಡೆಯಬೇಕು ಎಂಬ ಆದೇಶ ಹೊರಡಿಸಿದೆ. ಆದರೆ, ಅದು ಈಗಾಗಲೇ ವಕ್ಫ್ ಆಸ್ತಿ ಎಂಬುದಾಗಿ ಸ್ವಾಧೀನ ಪಡಿಸಿಕೊಂಡಿದ್ದರೆ ಮತ್ತು ಆರ್‌ಟಿಸಿಯಲ್ಲಿ ವಕ್ಫ್ ಆಸ್ತಿ ಎಂದು ನಮೂದಾಗಿದ್ದರೆ ನ. 9 ರ ಆದೇಶ ಅನ್ವಯವಾಗುವುದೇ ಇಲ್ಲ ಎಂದು ತಿಳಿಸಿದರು. ಮತಾಂಧರಂತೆ ವರ್ತಿಸುತ್ತಿರುವ ಸಚಿವ ಜಮೀರ್ ಅಹಮ್ಮದ್ ಈಗಾಗಲೇ ಎಲ್ಲಾ ಕಡೆ ವಕ್ಫ್ ಅದಾಲತ್ ನಡೆಸಿ ಅನೇಕರ ಜಮೀನಿನ ಪಹಣಿಯಲ್ಲಿ ವಕ್ಫ್ ಆಸ್ತಿ ಎಂಬುದಾಗಿ ನಮೂದಾಗುವಂತೆ ನೋಡಿಕೊಂಡಿದ್ದಾರೆ.

ಅಂತಹ ಆಸ್ತಿಗಳ ಬಗ್ಗೆ ರಾಜ್ಯ ಸರ್ಕಾರದ ನ.9ರ ಆದೇಶದಲ್ಲಿ ಯಾವುದೇ ಸ್ಪಷ್ಟನೆಯೇ ಇಲ್ಲ. ಇಂತಹ ಕಾರಣದಿಂದ ಈವರೆಗೆ ವಕ್ಫ್ ಆಸ್ತಿ ಶೇ. 3 ರಷ್ಟು ಹೆಚ್ಚಾಗಿದೆ. ಆಸ್ತಿಯನ್ನು ಸ್ವಾಧೀನಪಡಿಸಿಕೊಂಡ ನಂತರ ವಕ್ಫ್ ಅದಾಲತ್‌ನಲ್ಲಿ ಹಾಜರಾಗಬೇಕು ಎಂಬುದು ಎಷ್ಟು ಸರಿ. ಹಾಗಾಗಿ ಕೂಡಲೇ ಪಹಣಿಯಲ್ಲಿ ವಕ್ಫ್ ಎಂಬುದಾಗಿ ನಮೂದು ಮಾಡಿರುವುದರ ಜೊತೆಗೆ ಎಲ್ಲಾ ನೋಟಿಸ್ ರದ್ದುಪಡಿಸಬೇಕು ಎಂದು ಒತ್ತಾಯಿಸಿದರು.



# ಮುಖ್ಯಮಂತ್ರಿ ಸಿದ್ಧರಾಮಯ್ಯ ಭ್ರಷ್ಟಾಚಾರದ ಕೂಪದಲ್ಲಿ ಕುಳಿತಿದ್ದಾರೆ: ಛಲವಾದಿ ನಾರಾಯಣಸ್ವಾಮಿ

## ಮುಖ್ಯಮಂತ್ರಿಗಳ ಕುಟುಂಬವು ಮುಡಾದ 14 ನಿವೇಶನ ವಾಪಸ್ ಮಾಡಿದ್ದು, ಪ್ರಿಯಾಂಕ್ ಖರ್ಗೆಯವರು 5 ಎಕರೆ ವಾಪಸ್ ಮಾಡಿದ್ದರಿಂದ ಭ್ರಷ್ಟಾಚಾರ ಸಾಬೀತಾ

• ಉದಯವಾಹಿನಿ, ಬೆಂಗಳೂರು




ಕಾಂಗ್ರೆಸ್ ಸರಕಾರವು 38 ಇಲಾಖೆಗಳಲ್ಲಿ ಭ್ರಷ್ಟಾಚಾರದಲ್ಲಿ ಮುಳುಗಿದೆ. ಇದೆಲ್ಲವನ್ನೂ ನಮ್ಮ ಮುಖಂಡರು ಒಂದೊಂದಾಗಿ ಬೆಳಕಿಗೆ ತರುತ್ತಿದ್ದಾರೆ. ಮುಖ್ಯಮಂತ್ರಿಗಳು ಭ್ರಷ್ಟಾಚಾರದ ಕೂಪದಲ್ಲಿ ಕುಳಿತಿದ್ದಾರೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಆರೋಪಿಸಿದರು.

ನಗರದ ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಂಗಳವಾರ ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿಗಳ ಕುಟುಂಬವು ಮುಡಾದ 14 ನಿವೇಶನ ವಾಪಸ್ ಮಾಡಿದ್ದು, ಪ್ರಿಯಾಂಕ್ ಖರ್ಗೆಯವರು 5 ಎಕರೆ ವಾಪಸ್ ಮಾಡಿದ್ದರಿಂದ ಭ್ರಷ್ಟಾಚಾರ ಸಾಬೀತಾಗಿದೆ. ಅದರ ತನಿಖೆ ಏನಿದ್ದರೂ ನಿಮ್ಮ ಕಸರತ್ತು ಅಷ್ಟೇ ಎಂದು ವ್ಯಂಗ್ಯವಾಡಿದರು. ಸಿದ್ದರಾಮಯ್ಯನವರೇ, ನೀವು ಮಾತನಾಡುವಾಗ ಯಾವ ಮಟ್ಟಕ್ಕೆ ಹೋಗುತ್ತೀರಿ ಪ್ರಧಾನಿಯವರ ಯೋಗ್ಯತೆ, ತಮ್ಮ ಯೋಗ್ಯತೆಯನ್ನು ಅರ್ಥ ಮಾಡಿಕೊಳ್ಳಬೇಕು. ವಯಸ್ಸು, ಅಧಿಕಾರದಲ್ಲಿ ನೀವು ಅವರ ಮಟ್ಟಕ್ಕಿದ್ದರೆ ಅವರನ್ನು ಪ್ರಶ್ನೆ ಮಾಡುವುದರಲ್ಲಿ ಅರ್ಥವಿದೆ. ಸಣ್ಣಸಣ್ಣ ವ್ಯಕ್ತಿಗಳೂ ಪ್ರಧಾನಮಂತ್ರಿಗಳನ್ನು ಕೀಳು ಭಾಷೆಯಲ್ಲಿ ಮಾತನಾಡುವುದು ಎಷ್ಟು ಸರಿ? ಎಂದು ಕೇಳಿದರು. ಈಚೆಗೆ ವೈನ್ ಮರ್ಚೆಂಟ್ ಅಸೋಸಿಯೇಶನ್‌ನವರು ಒಂದು ಆಪಾದನೆ ಮಾಡಿದ್ದಾರೆ. ಸುಮಾರು 500 ಕೋಟಿಗಳಷ್ಟು ಹಣ ವನ್ನು ಅಬಕಾರಿ ಸಚಿವರು ವಸೂಲಿ ಮಾಡಿದ್ದಾಗಿ ಅವರೇ ಹೇಳಿದ್ದಾರೆ. ಬಳಿಕ ಸುಲಿಗೆ ನಮ್ಮ ಗಮನಕ್ಕೂ ಬಂದಿದ್ದು, 700 ಕೋಟಿ ಲೂಟಿಯಾಗಿದೆ ಎಂದು ನಾವು ತಿಳಿಸಿದ್ದೆವು. ಇದು ಚುನಾವಣೆ ನಡೆಯುವ ಕಾರಣ ನಡೆದಿದೆ.

ಈ ವಿಚಾರವನ್ನು ನಮ್ಮ ಪ್ರಧಾನಿಗಳು ಮಹಾರಾಷ್ಟ್ರದ ಚುನಾವಣೆ ಪ್ರಚಾರದ ಸಂದರ್ಭದಲ್ಲಿ ತಿಳಿಸಿದ್ದಾರೆ ಎಂದು ವಿವರಿಸಿದರು. ವೈನ್ ಮರ್ಚೆಂಟ್‌ಗಳಿಗೆ ಆಗುವ ತೊಂದರೆಗಳನ್ನು ಮುಂದಿಟ್ಟುಕೊಂಡು 25ರಂದು ಇಡೀ ರಾಜ್ಯದಲ್ಲಿ ಅಂಗಡಿ ಮುಂಗಟ್ಟುಗಳ ಬಾಗಿಲು ಹಾಕಿ ಹೋರಾಟ ಮಾಡುವುದಾಗಿ ಘೋಷಿಸಿದ್ದಾರೆ. ಅಬಕಾರಿ ಇಲಾಖೆಯಲ್ಲಿ ಹೊಸದಾಗಿ ಲೈಸನ್ಸ್ ಪಡೆಯಲು 4.50 ಲಕ್ಷ ರೂ. ಸರಕಾರಿ ಶುಲ್ಕ ಕಟ್ಟಬೇಕಿದೆ. ಹೊಸ ಲೈಸನ್ಸ್ ಪಡೆಯ ಲು 70-80 ಲಕ್ಷ ಖರ್ಚಾಗುತ್ತದೆ. ಇದು ಎಲ್ಲಿ ಹೋಗುತ್ತದೆ ಎಂದು ಛಲವಾದಿ ನಾರಾಯಣಸ್ವಾಮಿ ಅವರು ಪ್ರಶ್ನಿಸಿದರು. ಒಂದು ವರ್ಷಕ್ಕೆ ಲೈಸನ್ಸ್ ನವೀಕರಿಸಲು 4.60 ಲಕ್ಷ ರೂ. ಕಟ್ಟಬೇಕು. 6 ಲಕ್ಷ ಲಂಚ ಕೊಡಬೇಕು. ಇದು ಎಲ್ಲರಿಗೂ ಗೊತ್ತಿರುವ ಸತ್ಯ. ಇದಾದ ನಂತರ ಏನೇ ದೂರುಗಳಿಲ್ಲದಿದ್ದರೂ ಒಂದು ಬಾರ್ ಅಂಡ್ ರೆಸ್ಟೋರೆಂಟ್ ಅಥವಾ ಒಂದು ಮದ್ಯದ ಅಂಗಡಿಯವರ ಮೇಲೆ ಇಲಾಖೆಯು 2 ಕೇಸ್ ಕಡ್ಡಾಯವಾಗಿ ಹಾಕುತ್ತದೆ. ಆಪಾದನೆ ತಪ್ಪಿಸಲು ಕೇಸ್ ಹಾಕುವುದಲ್ಲದೆ, 2 ಸಾವಿರ ರೂ. ದಂಡ, 25 ಸಾವಿರ ಲಂಚ ಕೇಳುತ್ತಾರೆ ಎಂದು ಆರೋಪಿಸಿದರು.

ಶ್ರೀಮಂತರು ಹೇಗೋ ಕುಡಿದುಕೊಳ್ಳುತ್ತಾರೆ. ಬಡವರು ಇಲ್ಲಿ ಟಾರ್ಗೆಟ್ ಆಗುತ್ತಾರೆ. ಗ್ಯಾರಂಟಿ ಜಾರಿ ಕುರಿತು ಹೇಳಿ ಮದ್ಯದ ಬೆಲೆ ಏರಿಸುತ್ತಾರೆ. ವೈನ್ ಮಾರಾಟಗಾರರ ಸಂಘದ ಆಪಾದನೆ ಮೇಲೆ ಸಿಎಂ ಕ್ರಮ ಜರುಗಿಸಿದ್ದಾರಾ? ತಲೆಯನ್ನೇ ಕೆಡಿಸಿಕೊಂಡಿಲ್ಲ. ಈ 3 ಉಪ ಚುನಾವಣೆಗಳಲ್ಲಿ ಹೆಂಡದ ಹಣದ ಹೊಳೆ ಹರಿದಿದೆ. ಕಾಂಗ್ರೆಸ್ಸಿನವರು ಗೆದ್ದೇಗೆಲ್ಲುವುದಾಗಿ ಹೇಳುತ್ತಿದ್ದಾರೆ. ನಿಮ್ಮ ನಾಲಿಗೆಗಳನ್ನು ಎಷ್ಟು ಹರಿಬಿಟ್ಟಿದ್ದೀರೆಂದು ಜನರು ನೋಡುತ್ತಿದ್ದಾರೆ ಎಂದು ಛಲವಾದಿ ನಾರಾಯಣಸ್ವಾಮಿ ಅವರು ಆಕ್ಷೇಪಿಸಿದರು.



> ಭ್ರಷ್ಟಾಚಾರ ಮಾಡುವುದೇ ಅಬಕಾರಿ ಇಲಾಖೆ-ಸಚಿವರ ಕೆಲಸ. ಡಿ.ಸಿ.ಗಳು, ಎ.ಸಿಗಳಿಗೆ ವರ್ಗಾವಣೆಗೂ ಹಣ ನಿಗದಿಯಾಗಿದೆ ಎಂದು ದೂರಿದರು. ಮದ್ಯಪಾನ ಸಂಯಮ ಮಂಡಳಿ ಕುಡಿಯಬಾರದೆಂದು ಗಾಂಧೀಜಿ ತತ್ವಗಳನ್ನು ಮುಂದಿಟ್ಟರೆ, ಸರಕಾರ ಅಬಕಾರಿ ಇಲಾಖೆಗೆ ಹೆಚ್ಚು ಮಾರಾಟದ, ಹಣ ಸಂಗ್ರಹದ ವಿಚಾರದಲ್ಲಿ ತನ್ನ ಗುರಿ ನಿಗದಿ ಮಾಡುತ್ತದೆ
>
> - ಛಲವಾದಿ ನಾರಾಯಣಸ್ವಾಮಿ, ವಿಧಾನಪರಿಷತ್ ವಿಪಕ್ಷ ನಾಯಕ

### ಬಿಜೆಪಿ ಸರಕಾರ ಶೇ. 40 ವಸೂಲಿ ಮಾಡುತ್ತಿದೆ ಎಂದು ಆಪಾದಿಸಿದ್ದರಲ್ಲವೇ?

ಅಬಕಾರಿ ಇಲಾಖೆ ಹಗರಣವನ್ನು ಅಲ್ಲಗಳೆಯುವ ಭರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನೀವು ಭ್ರಷ್ಟಾಚಾರ ಸಾಬೀತು ಪಡಿಸಿದರೆ ನಾನು ರಾಜಕೀಯ ನಿವೃತ್ತಿ ಪಡೆಯುವುದಾಗಿ ಹೇಳಿದ್ದಾರೆ. ಗುತ್ತಿಗೆದಾರರ ಸಂಘದವರು ಬಿಜೆಪಿ ಸರಕಾರ ಶೇ. 40 ವಸೂಲಿ ಮಾಡುತ್ತಿದೆ ಎಂದು ಆಪಾದಿಸಿದ್ದರಲ್ಲವೇ? ಅದನ್ನು ಅವರು ಸಾಬೀತು ಪಡಿಸಿದ್ದಾರಾ? ನೀವು ಅದನ್ನು ಚುನಾವಣಾ ಮುಖ್ಯ ವಿಷಯ ಮಾಡಿಕೊಂಡಿರಲ್ಲವೇ? ಇದುವರೆಗೂ ಅದನ್ನು ಸಾಬೀತುಪಡಿಸಲು ನಿಮಗೆ ಆಗಿದೆಯೇ ಎಂದು ಪ್ರಶ್ನೆಗಳನ್ನು ಕೇಳಿದರು.

**ಈ ದಿನದ ದರ** ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,729/Gram24ct ₹7,085/Gram22ct | ಬೆಳ್ಳಿ: ₹91.00/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ**

## ವಕ್ಫ್ ಆಸ್ತಿ ಅತಿಕ್ರಮಣ :ಯತ್ನಾಳ್

ನಿನ್ನೆ ತೇರದಾಳದ ಅಲ್ಲಮ ಪ್ರಭುದೇವರ ನೂತನ ದೇವಸ್ಥಾನದ ಲೋಕಾರ್ಪಣೆಯ ಸಮಾರಂಭದಲ್ಲಿ ಬಸನಗೌಡ ಪಾಟೀಲ ಯತ್ನಾಳ್ ವಕ್ಫ್ ಆಸ್ತಿ ಅತಿಕ್ರಮಣವನ್ನು ಪ್ರಸ್ತಾಪಿಸಿದರು. ಭಾರತದೇಶ ವಿಭಜನೆಗೊಂಡು ಮುಸ್ಲಿಮರಿಗಾಗಿ ಅಪಾರ ಪ್ರಮಾಣದ ಭಾರತದ ಭೂಮಿಯನ್ನು ಪಾಕಿಸ್ತಾನಕ್ಕೆ ಬಿಟ್ಟುಕೊಟ್ಟ ಬಳಿಕವೂ ಮತ್ತೆ ಭಾರತದಲ್ಲಿ ಮುಸ್ಲಿಂ ದರ್ಗಾ ಖಬರಸ್ತಾನ್ ಮುಂತಾದವುಗಳಿಗೆ ಸರ್ಕಾರ ಭೂದಾನ ನೀಡುವುದಕ್ಕೆ, ಅವುಗಳನ್ನು ಸಂರಕ್ಷಿಸಿ ಪೋಷಿಸಿ ಬೆಳೆಸುವುದಕ್ಕೆ ಭಾರತದ ನೆಹರೂ ಸರ್ಕಾರ 1955ರಲ್ಲಿ ವಕ್ಫ್ ಕಾನೂನನ್ನು ಜಾರಿಗೆ ತಂದಿತು. ಇದೀಗ ಭಾರತದಲ್ಲಿ ಹತ್ತು ಲಕ್ಷ ಎಕರೆ ಭೂಮಿಯನ್ನು ವಕ್ಫ್ ಮಂಡಳಿಯ ವಶಕ್ಕೆ ಪಡೆಯುವ ಪ್ರಕ್ರಿಯೆ ನಡೆಯುತ್ತಿದೆ. ಮಠಮಾನ್ಯಗಳ ರೈತರ ಸರ್ಕಾರದ ಸಾರ್ವಜನಿಕರ ಆಸ್ತಿಗಳು ವಕ್ಫ್ ಆಸ್ತಿಗಳೆಂದು ದಾಖಲಿಸಲಾಗುತ್ತಿದೆ. ದೇಶ ಹಾಗೂ ರಾಜ್ಯಗಳಲ್ಲಿ ಭೂಮಿಯ ಒಡೆತನಕ್ಕೆ ಸಂಬಂಧಿಸಿ ಅನೇಕ ಕಾನೂನುಗಳಿದ್ದರೂ ವಕ್ಫ್ ಮಂಡಳಿ ಈ ಯಾವ ಕಾನೂನುಗಳನ್ನು ಪಾಲಿಸುತ್ತಿಲ್ಲ. ಯಾವುದೇ ನೋಟಿಸ್ ನ್ನು ನೀಡದೇ ವಿಚಾರಣೆ ನಡೆಸದೇ ಏಕಾಏಕಿ ಫಹಣಿಗಳಲ್ಲಿ ವಕ್ಫ್ ಆಸ್ತಿ ಎಂದು ನಮೂದಿಸಲಾಗುತ್ತಿದೆ. ನಾವಿಂದು ಜಾಗೃತರಾಗಿ ಹಿಂದುಗಳೆಲ್ಲ ಒಗ್ಗಟ್ಟಾಗಿ ಇದನ್ನು ತಡೆಯದಿದ್ದಲ್ಲಿ ಮುಂದೊಂದು ದಿನ ಅತ್ಯಂತ ಭಯಾನಕ ಹಾಗೂ ಕ್ರೂರ ಸನ್ನಿವೇಶವನ್ನು ಎದುರಿಸಬೇಕಾಗುತ್ತದೆ ಎಂದರು.

## ಹರಿನಾಮ ಸಂಕೀರ್ತನೆ



• ಉದಯವಾಹಿನಿ, ಬೆಂಗಳೂರು

ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶ ದಂತೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್ ಕೆ ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ನವೆಂಬರ್ 14, ಗುರುವಾರ ಸಂಜೆ 7-30ಕ್ಕೆ ಶ್ರೀ ರಾಹುಲ್ ಕೆ. ರವೀಂದ್ರನ್ ಇವರು ಹರಿನಾಮ ಸಂಕೀರ್ತನೆ ನಡೆಸಿಕೊಡಲಿದ್ದು, ಇವರ ಗಾಯನಕ್ಕೆ ಪಿಟೀಲು ವಾದನದಲ್ಲಿ ಶ್ರೀ ಎಸ್. ಶಶಿಧರ್ ಮತ್ತು ಮೃದಂಗ ವಾದನದಲ್ಲಿ ಶ್ರೀ ಶ್ರೀನಿವಾಸ್ ಅನಂತರಾಮಯ್ಯ ಸಹಕರಿಸಲಿದ್ದಾರೆ ಎಂದು ಶ್ರೀ ನಂದಕಿಶೋರ್ ಆಚಾರ್ ತಿಳಿಸಿದ್ದಾರೆ. ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಮುಖ್ಯರಸ್ತೆ, 45ನೇ ಅಡ್ಡರಸ್ತೆ, ಜಯನಗರ 5ನೇ ಬಡಾವಣೆ, ಬೆಂಗಳೂರು-41

## ಕಾಂಗ್ರೆಸ್ ಅಭ್ಯರ್ಥಿ ಪಠಾಣ ಅವರ ಮೇಲೆ ರೌಡಿಶೀಟ್ ಇರುವುದಿಲ್ಲ: ಹಾವೇರಿ ಎಸ್ಪಿ ಸ್ಪಷ್ಟನೆ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಅಭ್ಯರ್ಥಿ ಯಾಸೀರ್ ಪಠಾಣ್ ಮೇಲೆ ಯಾವುದೇ ರೀತಿಯ ರೌಡಿ ಶೀಟ್ ಇರುವುದಿಲ್ಲ ಎಂದು ಹಾವೇರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಸ್ಪಷ್ಟನೆ ನೀಡಿದ್ದಾರೆ. ಹಾವೇರಿ ಜಿಲ್ಲೆಯ ಹಾನಗಲ್ ತಾಲ್ಲೂಕಿನ ಬೊಮ್ಮನಹಳ್ಳಿ ಗ್ರಾಮದವರಾದ ಯಾಸೀರ್ ಅಹ್ಮದ್ ತಂದೆ ಮೊಹ್ಮದ್‌ಖಾನ್ ಪಠಾಣ ಇವರ ಮೇಲೆ ರೌಡಿಶೀಟ್ ಇದೆ ಅಂತ ಕೆಲವು ಮಾಧ್ಯಮಗಳಲ್ಲಿ ಪ್ರಸಾರವಾಗಿರುತ್ತದೆ. ಶಿಗ್ಗಾಂವಿಯ ಡಿಎಸ್‌ಪಿ ಮತ್ತು ಪೊಲೀಸ್ ಇನ್ಸಪೆಕ್ಟರ್ (ಪಿಐ) ಅವರ ಕಚೇರಿಯ ದಾಖಲಾತಿಗಳನ್ನು ಪರಿಶೀಲಿಸಲಾಗಿದ್ದು, ಪ್ರಸ್ತುತ ಯಾಸೀರ್ ಅಹ್ಮದ್ ತಂದೆ ಮೊಹ್ಮದ್‌ಖಾನ್ ಪಠಾಣ ಅವರ ಮೇಲೆ ಯಾವುದೇ ರೌಡಿ ಶೀಟ್ ಇರುವುದಿಲ್ಲ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯ ಪ್ರಕಟಣೆ ತಿಳಿಸಿದೆ.

## ಐಎಎಸ್, ಐಎಫ್‌ಎಸ್ ಅಧಿಕಾರಿಗಳಿಗೆ ಶೋಕಾಸ್ ನೋಟಿಸ್

• ಉದಯವಾಹಿನಿ, ಬೆಂಗಳೂರು

ಹೆಚ್ ಎಂಟಿ ಅರಣ್ಯ ಬೂಮಿ ವಿವಾದಕ್ಕೆ ಸಂಬಂಧಿಸಿದಂತೆ ನಿವೃತ್ತ ಐಎಎಸ್ ಅಧಿಕಾರಿ ಹಾಗೂ ಹಾಲಿ ಐಎಫ್‌ಎಸ್ ಅಧಿಕಾರಿಗಳಿಗೆ ಕಾರಣ ಕೇಳಿ ಶೋಕಾಸ್ ನೋಟಿಸ್ ಜಾರಿ ಮಡಲಾಗಿದೆ. ಸುಪ್ರೀಂ ಕೋರ್ಟ್ ಗೆ ಅರ್ಜಿ ಸಲ್ಲಿಸುವ ಮುನ್ನ ಅರಣ್ಯ ಸಚಿವರ ಅನುಮತಿ ಪಡೆಯದಿರುವುದು ಹಾಗೂ ನಿಯಮ ಉಲ್ಲಂಘನೆ ಆರೋಪದ ಮೇಲೆ ಈ ಕ್ರಮ ಕೈಗೊಳ್ಳಲಾಗುವುದು. ಸಂದೀಪ್ ದವೆ, ವಿಜಯ್ ಕುಮಾರ್ ಗೋಗಿ, ಸ್ಮಿತಾ ಬಿಜ್ಜೂರ್, ಆರ್.ಗೋಕುಲ್ ಗೆ ಕಾರಣ ಕೇಳಿ ಅರಣ್ಯ ಇಲಾಖೆ ನೋಟಿಸ್ ನೀಡಿದೆ. ಈ ಅಧಿಕರಿಗಳು ಕರ್ತವ್ಯದಲ್ಲಿದ್ದ ಸಂದರ್ಭದಲ್ಲಿ ಹೆಚ್ ಎಂಟಿ ವಶದಲ್ಲಿರುವ ಅರಣ್ಯ ಭೂಮಿ ಅರಣ್ಯ ಸ್ವರೂಪ ಕಳೆದುಕೊಂಡಿದೆ ಎಂದು ಡಿನೋಟಿಫಿಕೇಷನ್ ಗೆ ಅನುಮತಿ ಕೋರಿ ಸುಪ್ರೀಂ ಕೋರ್ಟ್ ಗೆ ಅರ್ಜಿ ಸಲ್ಲಿಸಿದ್ದರು. ಈ ಹಿನ್ನೆಲೆಯಲಿ ನೋಟಿಸ್ ನೀಡಲಾಗಿದೆ.

## ಬಿಎಂಟಿಸಿ ಬಸ್ ಚಾಲಕನ ಮೇಲೆ ಹಲ್ಲೆಗೆ ಯತ್ನಿಸಿ ದಾಂಧಲೆ ನಡೆಸಿದ ಆಟೋ ಚಾಲಕ.!

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಬಿಎಂಟಿಸಿ ಬಸ್ ಚಾಲಕನ ಮೇಲೆ ಹಲ್ಲೆಗೆ ಯತ್ನಿಸಿ ದಾಂಧಲೆ ನಡೆಸಿದ ಮತ್ತೊಂದು ಘಟನೆ ವರದಿಯಾಗಿದೆ. ಬೆಂಗಳೂರಿನ ಬನಶಂಕರಿಯಲ್ಲಿ ಈ ಘಟನೆ ನಡೆದಿದೆ. ಕ್ಷುಲ್ಲಕ ಕಾರಣಕ್ಕೆ ಆಟೋ ಚಾಲಕ ಬಿಎಂಟಿಸಿ ಬಸ್ ಚಾಲಕನ ಮೇಲೆ ರಾಡು, ಚಾಕು ಮತ್ತಿತರರ ಸಲಕರಣೆಯಿಂದ ಹಲ್ಲೆ ನಡೆಸಲು ಯತ್ನಿಸಿದ್ದಾನೆ. ಅಲ್ಲದೇ ಡ್ರೈವರ್ ಸೀಟು ಗ್ಲಾಸ್ ಒಡೆದು ದಾಂಧಲೆ ನಡೆಸಿದ್ದಾನೆ. ಘಟನೆ ನಡೆದ ಸ್ಥಳಕ್ಕೆ ಬನಶಂಕರಿ ಠಾಣೆ ಪೊಲೀಸರು ಧಾವಿಸಿ ಆಟೋ ಚಾಲಕನನ್ನು ಬಂಧಿಸಿದ್ದಾರೆ. ಡಿಪೊ.ನಂ 44 ಕ್ಕೆ ಸೇರಿದ ಬಸ್ ಗೆ ಹಾನಿಯಾಗಿದೆ.

## ಹರ್ನಿಯಾ ಸರ್ಜರಿ ಮಾಡುವಾಗ ರೋಗಿ ಸಾವು, ಕುಟುಂಬಸ್ಥರ ಆರೋಪ.!

• ಉದಯವಾಹಿನಿ, ಬೆಂಗಳೂರು

ಹರ್ನಿಯಾ ಆಪರೇಷನ್‌ಗೆ ಹೋದವನು ಶವವಾಗಿ ವಾಪಸ್ ಆದ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ನಗರದ ಶೇಷಾದ್ರಿಪುರಂನ ಮಾರುತಿ ನರ್ಸಿಂಗ್ ಹೋಂನಲ್ಲಿ ಈ ಘಟನೆ ನಡೆದಿದೆ. ರಂಗಸ್ವಾಮಿ (37) ಎಂಬುವವರು ಕಳೆದ ಶುಕ್ರವಾರ ಮಾರುತಿ ನರ್ಸಿಂಗ್ ಹೋಂಗೆ ದಾಖಲಾಗಿದ್ದರು. 40 ಸಾವಿರ ಹಣ ಕೊಡ ಕಟ್ಟಿದ್ದರು ಎನ್ನಲಾಗಿದೆ. ಭಾನುವಾರ ಆಪರೇಷನ್ ಮಾಡುತ್ತೇವೆ ಎಂದು ವೈದ್ಯರು ಹೇಳಿದ್ದರು. ಭಾನುವಾರ ಬೆಳಗ್ಗೆ 9 ಗಂಟೆಗೆ 2 ಇಂಜೆಕ್ಷನ್ ಕೊಟ್ಟಿದ್ದಾರೆ ಎಂದು ರಂಗಸ್ವಾಮಿ ಪತ್ನಿ ಸಂಗೀತಾ ಆರೋಪಿಸಿದ್ದಾರೆ. ಹೆವಿಡೋಸ್ ಇಂಜೆಕ್ಷನ್ ಕೊಟ್ಟು ನನ್ನ ಪತಿಯನ್ನು ಸಾಯಿಸಿದ್ದಾರೆ. ಬಳಿಕ ನನ್ನ ಪತಿ ಹಾರ್ಟ್ ಅಟ್ಯಾಕ್ ನಿಂದ ಸಾವನ್ನಪ್ಪಿದ್ದಾರೆ ಎಂದು ಆಸ್ಪತ್ರೆಯವರು ಹೇಳಿದ್ದಾರೆ ಎಂದು ರಂಗಸ್ವಾಮಿ ಪತ್ನಿ ಸಂಗೀತಾ ಕಣ್ಣೀರಿಟ್ಟಿದ್ದಾರೆ.

## ಪಿಜಿ ಆಯುಷ್ 2025 ತಾತ್ಕಾಲಿಕ ಫಲಿತಾಂಶ ಪ್ರಕಟ, ಅಭ್ಯರ್ಥಿಗಳಿಗೆ ಇಲ್ಲಿದೆ ಮಾಹಿತಿ

• ಉದಯವಾಹಿನಿ, ಬೆಂಗಳೂರು

PGAYUSH 2025 ಕೋರ್ಸ್‌ಗಳ ಪ್ರವೇಶಕ್ಕೆ ಮೊದಲ ಸುತ್ತಿನ ಸೀಟು ಹಂಚಿಕೆಯ ತಾತ್ಕಾಲಿಕ ಫಲಿತಾಂಶವನ್ನು ಪ್ರಕಟಿಸಲಾಗಿದೆ.
ನ.12ರ ಮಧ್ಯಾಹ್ನ 2ಕ್ಕೆ ಅಂತಿಮ ಫಲಿತಾಂಶ ಪ್ರಕಟಿಸಲಾಗುತ್ತದೆ. ಅಭ್ಯರ್ಥಿಗಳು, ಛಾಯ್ಸ್ ದಾಖಲಿಸಬೇಕು. ನಂತರ ಶುಲ್ಕ ಪಾವತಿಸಿ ಕಾಲೇಜಿಗೆ ವರದಿ ಮಾಡಿಕೊಳ್ಳಲು ನ.14ರವರೆಗೆ ಅವಕಾಶ ನೀಡಲಾಗಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ತಿಳಿಸಿದೆ.

# ವಿಪಕ್ಷ ನಾಯಕ ಆರ್.ಅಶೋಕ್‌ಗೆ ಈ ಸವಾಲ್ ಹಾಕಿದ ಸಚಿವ

### ಅಂಕಿಅಂಶಗಳೇ ನಮ್ಮ ಅಭಿವೃದ್ಧಿಗೆ , ಸಾಧನೆಗೆ ಮಾನದಂಡ ಎಂಬುದನ್ನು ಹತ್ತು ಹಲವು ಬಾರಿ ನಾನು ತಿಳಿಸಿದ್ದೇನೆ

• ಉದಯವಾಹಿನಿ, ಬೆಂಗಳೂರು

ಶಕ್ತಿ ಯೋಜನೆಯ ಬಗ್ಗೆ ವಿಪಕ್ಷ ನಾಯಕ ಆರ್.ಅಶೋಕ್ ಹೇಳಿಕೆಗೆ ಸಚಿವ ರಾಮಲಿಂಗಾರೆಡ್ಡಿ ತಿರುಗೇಟು ನೀಡಿದ್ದಾರೆ. ಅಲ್ಲದೇ ಬಹಿರಂಗವಾಗಿಯೇ ಚರ್ಚೆಗೆ ಆಹ್ವಾನಿಸಿ ಈ ಸವಾಲ್ ಹಾಕಿದ್ದಾರೆ.

ಈ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವಂತ ಮುಜರಾಯಿ ಮತ್ತು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು, ವಿರೋಧ ಪಕ್ಷದ ನಾಯಕರೇ, ಸುಳ್ಳು ಹೇಳುವುದು, ಜನರ ದಾರಿ ತಪ್ಪಿಸುವುದು ತಮಗೆ ಮತ್ತು ತಮ್ಮ ಬಿ.ಜೆ.ಪಿ ಪಕ್ಷಕ್ಕೆ ಸಿದ್ದಿಸಿರುವ ಕಲೆ.

ನಮಗೆ ಅದರ ಅವಶ್ಯಕತೆಯಿಲ್ಲ. ಇಂದೇ ಸ್ಥಳ ಮತ್ತು ಸಮಯವನ್ನು ನಿಗದಿ ಮಾಡಿ ನಾನು ಬಹಿರಂಗ ಚರ್ಚೆಗೆ ಸಿದ್ಧನಿದ್ದೇನೆ ಎಂದಿದ್ದಾರೆ.

ಅಂಕಿ ಅಂಶಗಳೇ ನಮ್ಮ ಅಭಿವೃದ್ಧಿಗೆ ಹಾಗೂ ಸಾಧನೆಗೆ ಮಾನದಂಡ ಎಂಬುದನ್ನು ಹತ್ತು ಹಲವು ಬಾರಿ ನಾನು ತಿಳಿಸಿದ್ದೇನೆ. ಸಾರಿಗೆ ಸಂಸ್ಥೆಗಳನ್ನು ಅಧೋಗತಿ ತಂದು ನಿಲ್ಲಿಸಿರುವುದು ತಮ್ಮ ಪಕ್ಷದ ಅಧಿಕಾರಾವಧಿಯಲ್ಲಿ ಎಂಬುದಕ್ಕೆ ಶ್ವೇತಪತ್ರ ಹೊರಡಿಸಿ ತಮ್ಮ ಅವಧಿಯ ಆಡಳಿತವನ್ನು ಜನರಿಗೆ ತೋರಿಸಬೇಕೆಂಬ ತಮ್ಮ ಮಹದಾಸೆಗೆ ನಾವು ಅಭಾರಿ ಎಂದು ಹೇಳಿದ್ದಾರೆ.



**ಸಾರಿಗೆ ನಿಗಮಗಳಿಗೆ ಬಸ್‌ಗಳ ಸೇರ್ಪಡೆ**

**ತಮ್ಮ ಬಿ.ಜೆ.ಪಿ ಪಕ್ಷದ ಆಡಳಿತದ ಐದು ವರ್ಷಗಳಲ್ಲಿ ಯಡಿಯೂರಪ್ಪ ಹಾಗೂ ಬೊಮ್ಮಾಯಿ ಮಾನ್ಯ ಮುಖ್ಯಮಂತ್ರಿಗಳಾಗಿದ್ದಾಗ, ಸಾರಿಗೆ ಸಂಸ್ಥೆಗಳನ್ನು ರೂ.5900 ಕೋಟಿ ನಷ್ಟದಲ್ಲಿಟ್ಟು ಹೋಗಿದ್ದಾರೆ. ಕಳೆದ 5 ವರ್ಷಗಳಲ್ಲಿ ಬಿ.ಎಂ.ಟಿ ಸಿ ಹೊರತುಪಡಿಸಿ ಬೇರೆ ಯಾವುದೇ ಸಾರಿಗೆ ನಿಗಮಗಳಿಗೆ ಬಸ್‌ಗಳ ಸೇರ್ಪಡೆಯೇ ಮಾಡದೆ, ಡಕೋಟ ಬಸ್ಸುಗಳನ್ನು ಕಾರ್ಯಾಚರಣೆ ಮಾಡಲು ಬಿಟ್ಟು ಹೋಗಿದ್ದೀರಾ ಎಂದು ಪ್ರಶ್ನಿಸಿದ್ದಾರೆ.**

**ಸರ್ಕಾರ ಸಂಪೂರ್ಣ ನಿಲ್ಲಿಸಿದ್ದ ಪ್ರಕ್ರಿಯೆ**

**ಸಾರಿಗೆ ಸಂಸ್ಥೆಗಳಲ್ಲಿ ಹತ್ತು ಹಲವು ಕಾರ್ಮಿಕ ಕಲ್ಯಾಣ ಕಾರ್ಯಕ್ರಮಗಳನ್ನು ಜಾರಿಗೆ ತಂದಿದ್ದು, ಕಳೆದ ಏಳೆಂಟು ವರ್ಷಗಳಿಂದ ಬಾಕಿ ಉಳಿದಿದ್ದ 1000 ಕ್ಕೂ ಅಧಿಕ ಮೃತ ಅವಲಂಬಿತ ಕುಟುಂಬಗಳಿಗೆ ಅನುಕಂಪ ಆಧಾರದಲ್ಲಿ ಹುದ್ದೆ ನೀಡಲಾಗಿದೆ. ಕಳೆದ 5 ವರ್ಷದಲ್ಲಿ ತಮ್ಮ ಸರ್ಕಾರ ಸಂಪೂರ್ಣ ನಿಲ್ಲಿಸಿದ್ದ ಪ್ರಕ್ರಿಯೆ ಇದು ಎಂದು ಗುಡುಗಿದ್ದಾರೆ.**

ನಮ್ಮ ಸರ್ಕಾರದ ಶಕ್ತಿ ಯೋಜನೆಯಿಂದ ಸಾರಿಗೆ ಸಂಸ್ಥೆಗಳ ಆದಾಯದಲ್ಲಿ ಗಣನೀಯ ವೃದ್ಧಿಯಾದರೂ ಸಾರಿಗೆ ಸಂಸ್ಥೆಗಳಿಗೆ ಶಕ್ತಿ ತುಂಬಲು ಸಾಧ್ಯವಾಗಿಲ್ಲದಿರುವುದು ತಮ್ಮ ಸರ್ಕಾರದ ಕೊಡುಗೆ ಶಕ್ತಿ ಯೋಜನೆಯಿಂದ ದಿನನಿತ್ಯ ಪ್ರಯಾಣಿಸುವ ಪ್ರಯಾಣಿಕರ ಸಂಖ್ಯೆ 84 ಲಕ್ಷದಿಂದ 1.08 ಕೋಟಿಗೆ ಏರಿಕೆ ಆಗಿದೆ. ಆದಾಯದಲ್ಲಿ ಗಣನೀಯ ವೃದ್ಧಿ ಆಗಿದೆ ಎಂದು ತಿಳಿಸಿದ್ದಾರೆ. ನಾವು ಈಗಾಗಲೇ ಹಲವು ಬಾರಿ ತಿಳಿಸಿದ್ದೇನೆ, ಆದಾಯವೇ ಬೇರೆ ಲಾಭವೇ ಬೇರೆ. ಆದಾಯದಲ್ಲಿ ಗಣನೀಯ ಹೆಚ್ಚಳವಾಗಿದ್ದರೂ ಸಹ ಲಾಭವನ್ನು ಗಳಿಸಲು ಸಾಧ್ಯವಿಲ್ಲ,

**ತಮ್ಮ ಸರ್ಕಾರವು ಬಿಟ್ಟು ಹೋಗಿದ್ದ ರೂ.5900 ಕೋಟಿ ನಷ್ಟದಿಂದ ಹೊಣೆಗಾರಿಕೆ ಬಾಕಿಗಳಾದ ಡೀಸೆಲ್ ಹಣ, ಸಿಬ್ಬಂದಿಗಳ ಭವಿಷ್ಯ ನಿಧಿ , ಖರೀದಿ ಸಾಮಾಗ್ರಿಗಳ ಹಣ ಸೇರಿ ಎಲ್ಲಾ ಬಾಕಿಗಳನ್ನು ತೀರಿಸುವ ಹೊಣೆಗಾರಿಕೆ ಹೊತ್ತುಕೊಂಡು ನಾವು ಸಂಸ್ಥೆಗಳನ್ನು ಮುನ್ನಡೆಸಬೇಕಾಗಿದೆ ಎಂದು ಹೇಳಿದ್ದಾರೆ.**
**ಸಚಿವ ರಾಮಲಿಂಗಾರೆಡ್ಡಿ**

ಏಕೆಂದರೆ ತಮ್ಮ ಪಕ್ಷದವರು ಬಾಕಿ ಇಟ್ಟು ಹೋಗಿರುವ ರೂ.5900 ಕೋಟಿ ನಷ್ಟ ಸಾರಿಗೆ ಸಚಿವರಾಗಿ, ಹಲವು ಬಾರಿ ಅನೇಕ ಖಾತೆಗಳ ಸಚಿವರಾಗಿ ಕಾರ್ಯ ನಿರ್ವಹಿಸಿದ್ದರೂ, ಈ ಬಗ್ಗೆ ತಮಗೆ ಅರ್ಥವಾಗದಿದ್ದರೆ ನಾನು ಏನು ಮಾಡಲು ಸಾಧ್ಯ. ಈ ಬಗ್ಗೆ ಕೂಲಂಕುಷವಾಗಿ ಮಾಹಿತಿ ಸಂಗ್ರಹಿಸಿ ನಂತರ ಟ್ವೀಟ್ ಮಾಡಿದರೆ ಒಳಿತು ಎಂದಿದ್ದಾರೆ.

ನಮ್ಮ ಸರ್ಕಾರ 6200 ಬಸ್ಸುಗಳ ಸೇರ್ಪಡೆಗೆ ಅನುಮೋದನೆ ನೀಡಿದ್ದು, ಕಳೆದೊಂದು ವರ್ಷದಲ್ಲಿಯೇ 3450 ಹೊಸ ಬಸ್ಸುಗಳ ಸೇರ್ಪಡೆಯಾಗಿದೆ. ಡಕೋಟಾ ಬಸ್ಸುಗಳನ್ನು ಪುನಶ್ಚೇತನ ಮಾಡುವ ಕಾರ್ಯವನ್ನು ಸಹ ಕೈಗೆತ್ತಿಕೊಂಡು 1300 ಬಸ್ಸುಗಳ ಪುನಶ್ಚೇತನ ಕಾರ್ಯಮಾಡಿದ್ದೇವೆ ಎಂದು ತಿಳಿಸಿದ್ದಾರೆ.

## ಸಚಿವ ಜಮೀರ್‌ಗೆ ಲೇ ತುರ್ಕಾ, ಅರೆಬಿಕ್ ತಳಿ ಎಂದ ಪುನೀತ್ ಕೆರೆಹಳ್ಳಿ!

• ಉದಯವಾಹಿನಿ, ಬೆಂಗಳೂರು

ಸಚಿವ ಜಮೀರ್ ಅಹಮದ್ ಖಾನ್ ಬಗ್ಗೆ ಹಿಂದೂ ಸಂಘಟನೆಯ ಮುಖಂಡ ಪುನೀತ್ ಕೆರೆಹಳ್ಳಿ ಇದೀಗ ವಿವಾದಾತ್ಮಕ ಹೇಳಿಕೆ ಕೊಟ್ಟಿದ್ದಾರೆ. ಸಚಿವ ಜಮೀರ್ ಅಹಮದ್ ಖಾನ್ ಅವರು ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಎಚ್.ಡಿ ಕುಮಾರಸ್ವಾಮಿ ಅವರ ಬಗ್ಗೆ ವಿವಾದಾತ್ಮಕ ಹೇಳಿಕೆ ಕೊಟ್ಟಿದ್ದರು.

ಈ ವಿವಾದ ತಣ್ಣಗಾಗುವ ಮೊದಲೇ ಇದೀಗ ಪುನೀತ್ ಕೆರೆಹಳ್ಳಿ ಜಮೀರ್ ಬಗ್ಗೆ ತೀರ ವಿವಾದಾತ್ಮಕ ಪದಗಳನ್ನು ಬಳಸಿದ್ದು, ಚರ್ಚೆಗೆ ಗ್ರಾಸವಾಗಿದೆ.

ಲೇ ಜಮೀರ್ ಅಹಮದ್ ಖಾನ್, ಕುಮಾರಸ್ವಾಮಿ ಅವರನ್ನು ಕರಿಯಾ ಅಂದ ನೀನು ನನ್ನ ಈ ಮಾತುಗಳನ್ನು ಸರಿಯಾಗಿ ಕೇಳಿಸಿಕೊ ಎಂದು ಸೋಷಿಯಲ್ ಮೀಡಿಯಾದಲ್ಲಿ



☛ ಉದಯವಾಹಿನಿ ಚಿತ್ರ

ವಿಡಿಯೋವೊಂದನ್ನು ಹರಿಬಿಟ್ಟಿದ್ದಾನೆ. ಆ ವಿಡಿಯೋದಲ್ಲಿ ಪ್ರಾರಂಭದಲ್ಲೇ ಲೇ.. ಅರೆಬಿಕ್ ತಳಿ ಜಮೀರ್ ಅಹಮದ್‌ಖಾನ್ ತುರ್ಕಾ.. ನಮ್ಮದೇ ನಾಡಿನಲ್ಲಿ.. ನಮ್ಮದೇ ಜನರ ಮುಂದೆ ನಮ್ಮ ನಾಯಕರ ಬಗ್ಗೆ ಅವರ ಬಣ್ಣವನ್ನು ಹಂಗಿಸಿ, ಕಾಲಾ ಕುಮಾರಸ್ವಾಮಿ ಅನ್ನುವಷ್ಟು ದುರಹಂಕಾರ, ದರ್ಪ ಬಂತ ನಿನಗೆ ಎಂದು ಏಕವಚನದಲ್ಲೇ ವಾಗ್ದಾಳಿ ನಡೆಸಿದ್ದಾರೆ.

ಪತ್ರಕರ್ತರು ಪ್ರಶ್ನೆ ಮಾಡಿದರೆ, ಅವರು ಕಪ್ಪಗಿದ್ದಾರೆ. ಅದಕ್ಕೆ ಆ ರೀತಿ ಕರೆದೆ ಅಂತ

**ಈ ವಿಡಿಯೋದಲ್ಲಿ ಪದೇ ಪದೇ ತುರ್ಕಾ ಎನ್ನುವ ಪದವನ್ನು ಬಳಸಲಾಗಿದೆ. ನಾವು ಹಿಂದೂಗಳು ಕಪ್ಪಗಿದ್ದೇವೆ. ನಾವು ಪೂಜಿಸುವ ಕೃಷ್ಣ ಸಹ ಕಪ್ಪಗಿದ್ದಾನೆ. ನೀನು ನಿತ್ಯ ನವಾಜ್ ಮಾಡುವ ದೇವರು ಯಾವ ಬಣ್ಣ ಹೇಳ್ತೀಯಾ ಅಂತನೂ ಕೇಳಿದ್ದಾರೆ. ಮುಸ್ಲಿಂ ದೇವರ ಬಗ್ಗೆಯೂ ಇದರಲ್ಲಿ ಪ್ರಶ್ನೆ ಮಾಡಲಾಗಿದೆ.**

ಸಮರ್ಥನೆ ಮಾಡ್ಕೋತಿಯಾ. ಕುಮಾರಸ್ವಾಮಿ ಅವರು ಏನಾದರೂ ಬೆಳ್ಳಗೆ ಇದ್ದು, ನಾನು ಹೇಳಿದ್ದರೆ ತಪ್ಪು ಅವರು ಇರುವುದೇ ಕಪ್ಪಗೆ ಎಂದು ಹೇಳಿರುವ ವಿಡಿಯೋವನ್ನೂ ಇದರಲ್ಲಿ ಸೇರಿಸಲಾಗಿದೆ.

## ನ್ಯಾ.ಕುನ್ಹಾ ಮಧ್ಯಂತರ ವರದಿಯಲ್ಲಿ ಬಹಿರಂಗ

• ಉದಯವಾಹಿನಿ, ಬೆಂಗಳೂರು

ಕೊರೋನ ಹಗರಣದ ಮತ್ತೊಂದು ಸ್ಫೋಟಕ ವರದಿ ಬಹಿರಂಗವಾಗಿದ್ದು, ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಮಾಜಿ ಆರೋಗ್ಯ ಸಚಿವ ಶ್ರೀರಾಮುಲು ವಿರುದ್ಧ ನ್ಯಾ.ಕುನ್ಹ ಸಲ್ಲಿಸಿರುವ ಮಧ್ಯಂತರ ವರದಿಯಲ್ಲಿ ಇಬ್ಬರ ವಿರುದ್ಧ ಸ್ಫೋಟಕ ಮಾಹಿತಿ ಬಹಿರಂಗವಾಗಿದೆ.

ಹೌದು ಬಿಎಸ್ ಯಡಿಯೂರಪ್ಪ ಹಾಗೂ ಶ್ರೀರಾಮುಲು ಕಾರ್ಯವೈಖರಿಗೆ ಸಮಿತಿ ಆಕ್ಷೇಪ ವ್ಯಕ್ತಪಡಿಸಿದೆ.

ಕೊರೊನ ವೇಳೆ ಖಾಸಗಿ ಲ್ಯಾಬ್ ಗಳಿಗೆ 6.93 ಕೋಟಿ ಹಣ ಸಂದಾಯವಾಗಿದೆ. ಆದರೆ ಖಾಸಗಿ ಲ್ಯಾಬ್‌ಗಳು ICMR ನಿಂದ ಮಾನ್ಯತೆ ಪಡೆದಿಲ್ಲ. ಅಧಿಕೃತ ICMR ಲ್ಯಾಬ್‌ಗಳು ಅಲ್ಲ ಎಂದು ವರದಿಯಲ್ಲಿ ಉಲ್ಲೇಖವಾಗಿದೆ. RTPCR ಟೆಸ್ಟಿಗೆ ಲ್ಯಾಬ್‌ಗಳ ಸಾಮರ್ಥ್ಯ ಕ್ಷಮತೆ ಗುರುತಿಸಿಲ್ಲ.

ಸಾಮರ್ಥ್ಯ ಹಾಗೂ ಕ್ಷಮತೆ ಪರಿಶೀಲಿಸದೆ ಖಾಸಗಿ



ಲ್ಯಾಬ್ ಗೆ ಅನುಮತಿ ನೀಡಲಾಗಿದೆ. 6 ಲ್ಯಾಬ್‌ಗಳಿಗೆ ಒಪ್ಪಂದವಿಲ್ಲದೆ ಹಣ ಸಂದಾಯ ಮಾಡಿರುವ ಬಗ್ಗೆ ಮಾಹಿತಿ ಲಭ್ಯವಾಗಿದೆ. ಅನಧಿಕೃತವಾಗಿ ಲ್ಯಾಬ್ ಗಳಿಗೆ ಹಣ ಸಂದಾಯದ ಬಗ್ಗೆ ವರದಿಯಲ್ಲಿ ಉಲ್ಲೇಖಿಸಲಾಗಿದೆ. 8 ಲ್ಯಾಬ್‌ಗಳಿಗೆ ಅನುಮತಿ ಪಡೆಯದೆ 4.28 ಕೋಟಿ ರೂಪಾಯಿ ಸಂದಾಯವಾಗಿದೆ. ಮಾನ್ಯತೆ ಪಡೆದ ಲ್ಯಾಬ್ಗಳಲ್ಲಿ ಸರ್ಕಾರದಿಂದ ಮಾನ್ಯತೆ ಪಡೆದ ಲ್ಯಾಬ್ ಎಂದು ಗುರುತಿಸಿಲ್ಲ.

## ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಟೆಲಿಸ್ಕೋಪ್ ವಿತರಣೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಮಹತ್ವಾಕಾಂಕ್ಷಿ ಯೋಜನೆಯಾದ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಟೆಲಿಸ್ಕೋಪ್ ಒದಗಿಸುವ ಯೋಜನೆ ಬಹಳ ವಿಶೇಷವಾಗಿದ್ದು, ಭವಿಷ್ಯದ ವೈಜ್ಞಾನಿಕ ಕ್ಷೇತ್ರಕ್ಕೆ ಉತ್ತಮ ಕೊಡುಗೆ ನೀಡಲಿದೆ ಎಂದು ಇಸ್ರೋ ಚೇರ್ಮನ್ ಸೋಮನಾಥ್ ಅಭಿಪ್ರಾಯ ವ್ಯಕ್ತಪಡಿಸಿದರು.

ಇಂದು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ವಿದ್ಯಾರ್ಥಿ ಗಳೊಂದಿಗಿನ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಯೋಜನೆಯ ಬಗ್ಗೆ ಶ್ಲಾಘಿಸಿದರು.



☛ ಉದಯವಾಹಿನಿ ಚಿತ್ರ


ಮಕ್ಕಳಲ್ಲಿ ವಿಜ್ಞಾನ ಹಾಗೂ ತಂತ್ರಜ್ಞಾನ ಕ್ಷೇತ್ರದ ಬಗ್ಗೆ ಆಸಕ್ತಿ ಮೂಡಿಸುವ ನಿಟ್ಟಿನಲ್ಲಿ ಹಮ್ಮಿಕೊಂಡಿರುವ ಯೋಜನೆ ಬಹಳ ವಿಶೇಷ ವಾಗಿದೆ. ಸಣ್ಣ ವಯಸ್ಸಿನಲ್ಲೇ ಬಾಹ್ಯಾಕಾಶದ ಬಗ್ಗೆ ಆಸಕ್ತಿ ಬೆಳೆಸುವುದರಿಂದ ಮಕ್ಕಳಲ್ಲಿ ಹೊಸ ಸಾಧ್ಯತೆಗಳ ಬಗ್ಗೆ ಅರಿವು ಮೂಡಿಸಬಹುದಾಗಿದೆ. ಇಂತಹ ಯೋಜನೆಯನ್ನು ಯೋಜಿಸಿ ಅನುಷ್ಠಾನಗೊಳಿಸುತ್ತಿರುವ ಸರಕಾರದ ಕ್ರಮ ಅನುಕರಣೀಯ. ಈ ಯೋಜನೆಯಿಂದ ಭವಿಷ್ಯದ ವೈಜ್ಞಾನಿಕ ಕ್ಷೇತ್ರದಲ್ಲಿ ನಮ್ಮ ಮಕ್ಕಳ ಕೊಡುಗೆಯೂ ಹೆಚ್ಚಲಿದೆ ಎಂದರು. ಕಾರ್ಯಕ್ರಮದಲ್ಲಿ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್ ಎಸ್ ಭೋಸರಾಜು ಮಾತನಾಡಿ, ಸನ್ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ನೇತೃತ್ವದ ಸರಕಾರ ವೈಜ್ಞಾನಿಕ ಮನೋಭಾವ ಹಾಗೂ ವೈಚಾರಿಕತೆ ಯನ್ನು ಹೆಚ್ಚಿಸಲು ಹೆಚ್ಚಿನ ಆದ್ಯತೆ ನೀಡುತ್ತಿದೆ. ಮೊದಲ ಹಂತದಲ್ಲಿ 833 ವಸತಿ ಶಾಲೆಗಳಿಗೆ ಟೆಲಿಸ್ಕೋಪ್ ನೀಡುವ ಕಾರ್ಯಕ್ರಮ ಬಹಳ ಮಹತ್ವದ್ದಾಗಿದೆ. ಎಲ್ಲಾ ಮಕ್ಕಳು ಬಾಹ್ಯಾಕಾಶ ಕ್ಷೇತ್ರದ ಬಗ್ಗೆ ಆಸಕ್ತಿ ಹೆಚ್ಚಿಸಿಕೊಳ್ಳಬೇಕು, ಹಾಗೆಯೇ ಆ ಕ್ಷೇತ್ರದಲ್ಲಿ ಸಂಶೋಧನೆಗೆ ಪ್ರೋತ್ಸಾಹ ನೀಡಬೇಕು ಎನ್ನುವ ಉದ್ದೇಶ ಹೊಂದಿದ್ದೇವೆ ಎಂದರು.

## ಜನತೆ ಗಮನಕ್ಕೆ : ಈ ಪ್ರದೇಶಗಳಲ್ಲಿ ನಾಳೆ , ನಾಡಿದ್ದು ವಿದ್ಯುತ್ ವ್ಯತ್ಯಯ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಕೆಲವು ಪ್ರದೇಶಗಳಲ್ಲಿ ನಾಳೆ ನಾಡಿದ್ದು ವಿದ್ಯುತ್ ಕಡಿತವಾಗಲಿದೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ. ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ದುರಸ್ತಿ ಮತ್ತು ನಿರ್ವಹಣಾ ಕಾರ್ಯಗಳಿಂದಾಗಿ ವಿದ್ಯುತ್ ಕಡಿತವಾಗಿದೆ ಎಂದು ಹೇಳಿದೆ.

ಹಾನಿಗೊಳಗಾದ ಪ್ರದೇಶಗಳ ವಿವರಗಳು ಮತ್ತು ವಿದ್ಯುತ್ ಕಡಿತದ ಸಮಯವನ್ನು ಬೆಸ್ಕಾಂ ಪತ್ರಿಕಾ ಪ್ರಕಟಣೆಯ ಮೂಲಕ ಬಿಡುಗಡೆ ಮಾಡಲಾಗಿದೆ. ಶಾಖಾಂಬರಿನಗರ, ಪುಟ್ಟೇನಹಳ್ಳಿ, ಜಯನಗರ 4, 5, 7, 8ನೇ ಬ್ಲಾಕ್, ಐಟಿಐ ಲೇಕ್‌ಔಟ್, ಎಸ್. ಬಿ.ಐ ಕಾಲೋನಿ, ಅರ್.ವಿ.ಡೆಂಟಲ್ ಕಾಲೇಜ್



☛ ಉದಯವಾಹಿನಿ ಚಿತ್ರ

**ವಿದ್ಯುತ್ ಸರಬರಾಜು ಕಂಪನಿ ದುರಸ್ತಿ ನಿರ್ವಹಣಾ**

ಸುತ್ತಮುತ್ತಲ ಪ್ರದೇಶಗಳು, 24ನೇ ಮೇನ್, ಎಲ್ ಐಸಿ ಕಚೇರಿ ಹಿಂಬಾ ಎಲ್‌ಐಸಿ ಕಾಲೋನಿ, ಪೈಪ್ ಲೈನ್ ರೋಡ್, ರಾಘವೇಂದ್ರ ಸ್ವಾಮಿ ಮಠ, ಜೆ.ಪಿ ನಗರ ಮೊದಲನೇ ಹಂತ, 14ನೇ ಅಡ್ಡ ರಸ್ತೆ, ಸಲಾರ್ಪುರಿಯಾ ಅಪಾಟ್ ಮೆಂಟ್, ನಾಗಾರ್ಜುನ ಅಪಾರ್ಟ್ಮೆಂಟ್ ಜೆ.ಪಿ.ನಗರ 5ನೇ ಹಂತ, ಸಾಯಿ ನರ್ಸರಿ ರಸ್ತೆ, ಜೆ.ಪಿ.ನಗರ 1,2,3,4,5,6ನೇ ಹಂತ, 15ನೇ ಕ್ರಾಸ್, 16 12 ನೇ ಅಡ್ಡ ರಸ್ತೆ, ಸಿಂಧೂರ ಕನ್ವೇಷನ್ ಹಾಲ್ ಮತ್ತು ಸುತ್ತಮುತ್ತಲ ಪ್ರದೇಶಗಳಲ್ಲಿ ವಿದ್ಯುತ್ ಇರುವುದಿಲ್ಲ

ವಿಜಯಪುರ ಪಟ್ಟಣ, ಯಲ್ಲಮ್ಮ ಧರ್ಮಾಪುರ, ಬೀಡಿಗನ ಹಳ್ಳಿ, ಬಡವನಹಳ್ಳಿ, ವೆಂಕಟಗಿರಿ, ಕೋಟೆ, ಹುರುಲುಗುರ್ಕಿ, ಮುದುಗುರ್ಕಿ, ಬಿಜ್ಜವಾರ, ಹಾರೋಹಳ್ಳಿ, ಗುಮ್ಮನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ದಂಡಿಗನಹಳ್ಳಿ, ಕಮ್ಮಸಂದ್ರ, ತಿಮ್ಮಸಂದ್ರ, ಮುದ್ದೇನಹಳ್ಳಿ, ನಾರಾಯಣಪುರ, ಗೋಡೆ ಮುದ್ದೇನಹಳ್ಳಿ ಮತ್ತು ಸುತ್ತಮುತ್ತಲಿನ ಗ್ರಾಮಗಳು.

## ಸಂಪಿಗೆ ಥಿಯೇಟರ್ ಓನರ್ ಮನೆ ಕಳವು ಕೇಸ್

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಸಂಪಿಗೆ ಥಿಯೇಟರ್ ಮಾಲೀಕ ನಾಗೇಶ್ ಅವರ ಮನೆ ಕಳ್ಳತನ ಪ್ರಕರಣಕ್ಕೆ ಸಂಬಂಧಪಟ್ಟಂತೆ ಇದೀಗ ಬೆಂಗಳೂರಿನ ಜಯನಗರ ಪೊಲೀಸ್ ಠಾಣೆಯ ಪೊಲೀಸರು ಮುಂಬೈನಲ್ಲಿ ನೇಪಾಳಿ ಗ್ಯಾಂಗಿನ ಮೂವರನ್ನು ಅರೆಸ್ಟ್ ಮಾಡಿದ್ದಾರೆ.

ಹೌದು ಸಂಪಿಗೆ ಥಿಯೇಟರ್ ಮಾಲೀಕ ನಾಗೇಶ್ ಅವರ ಮನೆಯಲ್ಲಿ ಕೆಲಸಕ್ಕೆ ಇದ್ದಂತಹ ನೇಪಾಳ ಮೂಲದ ಗಣೇಶ್, ಗೀತಾ ಎನ್ನುವವರು ನಾಗೇಶ್ ಅವರ ಮನೆಯಲ್ಲಿದ್ದ ಕೋಟ್ಯಾಂತರ ಬೆಲೆಬಾಳುವ ಚಿನ್ನಾಭರಣ ಹಾಗೂ ಬೆಳ್ಳಿಯ ಆಭರಣ ವಸ್ತುಗಳನ್ನು ಕಳ್ಳತನ ಮಾಡಿ ಪರಾರಿಯಾಗಿದ್ದಾರೆ. ಪ್ರಕರಣಕ್ಕೆ ಸಂಬಂಧಪಟ್ಟಂತೆ ಪೊಲೀಸರು ಇದೀಗ ಮೂವರನ್ನು ಬಂಧಿಸಿದ್ದು, ಇನ್ನು ದಂಪತಿ ಗಣೇಶ್ ಹಾಗೂ ಗೀತಾಳಿಗೆ





☛ ಉದಯವಾಹಿನಿ ಚಿತ್ರ

**ನೇಪಾಳಿ ಗ್ಯಾಂಗ್‌ನ ಮೂವರ ಬಂಧನ!**

ಶೋಧಕಾರ್ಯ ಮುಂದುವರೆದಿದೆ. ಈ ಕುರಿತು ಥೀಯೇಟರ್ ಮಾಲೀಕ ನಾಗೇಶ್ ಅವರು ಬೆಂಗಳೂರಿನ ಜಯನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಇದೀಗ ಪೊಲೀಸರು ಸಿಸಿಟಿವಿ ದೃಶ್ಯಗಳನ್ನು ಆಧರಿಸಿ ಮುಂಬೈನಲ್ಲಿ ನೇಪಾಳಿ ಗ್ಯಾಂಗ್ನ ಮೂವರನ್ನು ಬಂಧಿಸಿದ್ದಾರೆ. ಸಿಸಿಟಿವಿ ಹಾಗೂ ಮೊಬೈಲ್ ನೆಟ್ವರ್ಕ್ ಆಧರಿಸಿ ಕಾರ್ಯಾಚರಣೆ ಮಾಡಿ ಅರೆಸ್ಟ್ ಮಾಡಿದ್ದಾರೆ. ಪ್ರಕಾಶ್ ಶಾಹಿ ಅಪಿಲ್ ಶಾಹಿ ಹಾಗೂ ಜಗದೀಶ್ ಶಾಹಿ ಬಂಧಿತ ಆರೋಪಿಗಳು ಎಂದು ತಿಳಿದು ಬಂದಿದೆ.

# 3 ಕ್ಷೇತ್ರದ ಉಪ ಚುನಾವಣೆಗಳಲ್ಲಿ ಹೆಂಡದ ಹಣದ ಹೊಳೆ

### ಛಲವಾದಿ ನಾರಾಯಣಸ್ವಾಮಿ ಹೇಳಿಕೆ, ವೈನ್ ಮಾರಾಟಗಾರರ ಸಂಘದ ಆಪಾದನೆ ಮೇಲೆ ಸಿಎಂ ಕ್ರಮ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಮೂರು ಉಪ ಚುನಾವಣೆಗಳಲ್ಲಿ ಹೆಂಡದ ಹಣದ ಹೊಳೆ ಹರಿದಿದೆ. ಕಾಂಗ್ರೇಸ್ಸಿನವರು ಗೆದ್ದೇಗೆಲ್ಲುವುದಾಗಿ ಹೇಳುತ್ತಿದ್ದಾರೆ. ನಿಮ್ಮ ನಾಲಿಗೆಗಳನ್ನು ಎಷ್ಟು ಹರಿಬಿಟ್ಟಿದ್ದೀರೆಂದು ಜನರು ನೋಡುತ್ತಿದ್ದಾರೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿದರು.

ಈ ಕುರಿತು ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ಶ್ರೀಮಂತರು ಹೇಗೋ ಕುಡಿದುಕೊಳ್ಳುತ್ತಾರೆ. ಬಡವರು ಇಲ್ಲಿ ಟಾರ್ಗೆಟ್ ಆಗುತ್ತಾರೆ. ಗ್ಯಾರಂಟಿ ಜಾರಿ ಕುರಿತು ಹೇಳಿ ಮದ್ಯದ ಬೆಲೆ ಏರಿಸುತ್ತಾರೆ. ವೈನ್ ಮಾರಾಟಗಾರರ ಸಂಘದ ಆಪಾದನೆ ಮೇಲೆ ಸಿಎಂ ಕ್ರಮ ಜರುಗಿಸಿದ್ದಾರಾ ತಲೆಯನ್ನೇ ಕೆಡಿಸಿಕೊಂಡಿಲ್ಲ. ರಾಜ್ಯದ ಕಾಂಗ್ರೆಸ್ ಸರಕಾರ ಸಂಪೂರ್ಣವಾಗಿ ಭ್ರಷ್ಟಾಚಾರದಲ್ಲಿ ಮುಳುಗಿದೆ ಎಂದು ಆರೋಪಿಸಿದರಲ್ಲದೆ, ರಾಜ್ಯ ಸರಕಾರದ ಭ್ರಷ್ಟಾಚಾರ, ಹಗರಣಗಳನ್ನು ಬಯಲಿಗೆ ತರುವ ಮೂಲಕ ಆ ಕುರಿತು ಪದೇಪದೇ ಗಮನ ಸೆಳೆಯಲಾಗುತ್ತಿದೆ ಎಂದು ತಿಳಿಸಿದರು.

ಕಾಂಗ್ರೆಸ್ ಸರಕಾರವು 38 ಇಲಾಖೆಗಳಲ್ಲಿ ಭ್ರಷ್ಟಾಚಾರದಲ್ಲಿ ಮುಳುಗಿದೆ. ಇದೆಲ್ಲವನ್ನೂ ನಮ್ಮ ಮುಖಂಡರು ಒಂದೊಂದಾಗಿ ಬೆಳಕಿಗೆ ತರುತ್ತಿದ್ದಾರೆ. ಮುಖ್ಯಮಂತ್ರಿಗಳು ಭ್ರಷ್ಟಾಚಾರದ ಕೂಪದಲ್ಲಿ ಕುಳಿತಿದ್ದಾರೆ. ಮುಖ್ಯಮಂತ್ರಿಗಳ ಕುಟುಂಬವು





☛ ಉದಯವಾಹಿನಿ ಚಿತ್ರ

**ರಾಜ್ಯ ಸರಕಾರದ ಭ್ರಷ್ಟಾಚಾರ, ಹಗರಣ**

ಮುಡಾದ 14 ನಿವೇಶನ ವಾಪಸ್ ಮಾಡಿದ್ದು, ಪ್ರಿಯಾಂಕ್ ಖರ್ಗೆಯವರು 5 ಎಕರೆ ವಾಪಸ್ ಮಾಡಿದ್ದರಿಂದ ಭ್ರಷ್ಟಾಚಾರ ಸಾಬೀತಾಗಿದೆ. ಅದರ ತನಿಖೆ ಏನಿದ್ದರೂ ನಿಮ್ಮ ಕಸರತ್ತು ಅಷ್ಟೇ ಎಂದು ವ್ಯಂಗ್ಯವಾಡಿದರು. ಸಿದ್ದರಾಮಯ್ಯನವರೇ, ನೀವು ಮಾತನಾಡುವಾಗ ಯಾವ ಮಟ್ಟಕ್ಕೆ ಹೋಗುತ್ತೀರಿ ಪ್ರಧಾನಿಯವರ ಯೋಗ್ಯತೆ, ತಮ್ಮ ಯೋಗ್ಯತೆಯನ್ನು ಅರ್ಥ ಮಾಡಿಕೊಳ್ಳಬೇಕು. ವಯಸ್ಸು, ಅಧಿಕಾರದಲ್ಲಿ ನೀವು ಅವರ ಮಟ್ಟಕ್ಕಿದ್ದರೆ ಅವರನ್ನು ಪ್ರಶ್ನೆ ಮಾಡುವುದರಲ್ಲಿ ಅರ್ಥವಿದೆ. ಸಣ್ಣಸಣ್ಣ ವ್ಯಕ್ತಿಗಳೂ ಪ್ರಧಾನಮಂತ್ರಿಗಳನ್ನು ಕೀಳು ಭಾಷೆಯಲ್ಲಿ ಮಾತನಾಡುವುದು ಎಷ್ಟು ಸರಿ ಎಂದು ಕೇಳಿದರು.

ಈಚೆಗೆ ವೈನ್ ಮರ್ಚೆಂಟ್ ಅಸೋಸಿಯೇಶನ್‌ನವರು ಒಂದು ಆಪಾದನೆ ಮಾಡಿದ್ದಾರೆ. ಸುಮಾರು 500 ಕೋಟಿಗಳಷ್ಟು ಹಣವನ್ನು ಅಬಕಾರಿ ಸಚಿವರು ವಸೂಲಿ ಮಾಡಿದ್ದಾಗಿ ಅವರೇ ಹೇಳಿದ್ದಾರೆ. ಬಳಿಕ ಸುಲಿಗೆ ನಮ್ಮ ಗಮನಕ್ಕೂ ಬಂದಿದ್ದು, 700 ಕೋಟಿ ಲೂಟಿಯಾಗಿದೆ ಎಂದು ನಾವು ತಿಳಿಸಿದ್ದೆವು. ಇದು ಚುನಾವಣೆ ನಡೆಯುವ ಕಾರಣ ನಡೆದಿದೆ. ಈ ವಿಚಾರವನ್ನು ನಮ್ಮ ಪ್ರಧಾನಿಗಳು ಮಹಾರಾಷ್ಟ್ರದ ಚುನಾವಣೆ ಪ್ರಚಾರದ ಸಂದರ್ಭದಲ್ಲಿ ತಿಳಿಸಿದ್ದಾರೆ.

ಗುತ್ತಿಗೆದಾರರ ಸಂಘ ಸತ್ಯ ಹೇಳಿದ್ದೆಂದು ತಿಳಿಸುವ ಮತ್ತು ನಂಬುವ ಮುಖ್ಯಮಂತ್ರಿಗಳು ವೈನ್ ಮರ್ಚೆಂಟ್ ಅಸೋಸಿಯೇಶನ್‌ನ ಆರೋಪವನ್ನು ಅಲ್ಲಗಳೆಯಲು ಕಾರಣ ಏನಿದೆ ಎಂದು ಕೇಳಿದರಲ್ಲದೆ, ಸಿದ್ದರಾಮಯ್ಯನವರು ಭ್ರಷ್ಟಾಚಾರದ ಪಿತಾಮಹ ಎಂದು ಆರೋಪಿಸಿದರು. ಮಾಡುವುದನ್ನು ಮಾಡಿ ಅದನ್ನು ಮರೆಮಾಚುವ ಪರಿಪಾಠವನ್ನು ಸಿಎಂ ಅವರು ಮೈಗೂಡಿಸಿಕೊಂಡಿದ್ದಾರೆ.

ಭ್ರಷ್ಟಾಚಾರ ಮಾಡುವುದೇ ಅಬಕಾರಿ ಇಲಾಖೆ-ಸಚಿವರ ಕೆಲಸ. ಡಿ.ಸಿ.ಗಳು, ಎ.ಸಿಗಳಿಗೆ ವರ್ಗಾವಣೆಗೂ ಹಣ ನಿಗದಿಯಾಗಿದೆ ಎಂದು ದೂರಿದರು. ಮದ್ಯಪಾನ ಸಂಯಮ ಮಂಡಳಿ ಕುಡಿಯಬಾರದೆಂದು ಗಾಂಧೀಜಿ ತತ್ವಗಳನ್ನು ಮುಂದಿಟ್ಟರೆ, ಸರಕಾರ ಅಬಕಾರಿ ಇಲಾಖೆಗೆ ಹೆಚ್ಚು ಮಾರಾಟದ, ಹಣ ಸಂಗ್ರಹದ ವಿಚಾರದಲ್ಲಿ ತನ್ನ ಗುರಿ ನಿಗದಿ ಮಾಡುತ್ತದೆ ಎಂದರು.

**ಅಬಕಾರಿ ಇಲಾಖೆ ಹಗರಣವನ್ನು ಅಲ್ಲಗಳೆಯುವ ಭರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನೀವು ಭ್ರಷ್ಟಾಚಾರ ಸಾಬೀತು ಪಡಿಸಿದರೆ ನಾನು ರಾಜಕೀಯ ನಿವೃತ್ತಿ ಪಡೆಯುವುದಾಗಿ ಹೇಳಿದ್ದಾರೆ. ಗುತ್ತಿಗೆದಾರರ ಸಂಘದವರು ಬಿಜೆಪಿ ಸರಕಾರ ಶೇ 40 ವಸೂಲಿ ಮಾಡುತ್ತಿದೆ ಎಂದು ಆಪಾದಿಸಿದ್ದರಲ್ಲವೇ ಅದನ್ನು ಅವರು ಸಾಬೀತು ಪಡಿಸಿದ್ದಾರಾ ನೀವು ಅದನ್ನು ಚುನಾವಣಾ ಮುಖ್ಯ ವಿಷಯ ಮಾಡಿಕೊಂಡಿರಲ್ಲವೇ ಇದುವರೆಗೂ ಅದನ್ನು ಸಾಬೀತುಪಡಿಸಲು ನಿಮಗೆ ಆಗಿದೆಯೇ ಎಂದು ಪ್ರಶ್ನೆಗಳನ್ನು ಕೇಳಿದರು.**

**ವೈನ್ ಮರ್ಚೆಂಟ್‌ಗಳಿಗೆ ಆಗುವ ತೊಂದರೆಗಳನ್ನು ಮುಂದಿಟ್ಟುಕೊಂಡು 25ರಂದು ಇಡೀ ರಾಜ್ಯದಲ್ಲಿ ಅಂಗಡಿ ಮುಂಗಟ್ಟುಗಳ ಬಾಗಿಲು ಹಾಕಿ ಹೋರಾಟ ಮಾಡುವುದಾಗಿ ಘೋಷಿಸಿದ್ದಾರೆ. ಅಬಕಾರಿ ಇಲಾಖೆಯಲ್ಲಿ ಹೊಸದಾಗಿ ಲೈಸನ್ಸ್ ಪಡೆಯಲು 4.50 ಲಕ್ಷ ರೂ. ಸರಕಾರಿ ಶುಲ್ಕ ಕಟ್ಟಬೇಕಿದೆ. ಹೊಸ ಲೈಸನ್ಸ್ ಪಡೆಯಲು 70-80 ಲಕ್ಷ ಖರ್ಚಾಗುತ್ತದೆ. ಇದು ಎಲ್ಲಿ ಹೋಗುತ್ತದೆ ಎಂದು ಛಲವಾದಿ ನಾರಾಯಣಸ್ವಾಮಿ ಅವರು ಪ್ರಶ್ನಿಸಿದರು.**

ಅಂತರಾಳದಿಂದ..
EDITORIAL

# ಸರಕಾರಿ ಶಾಲೆಗಳ ದುರವಸ್ಥೆ

ಬಹುತೇಕ ಸರಕಾರಿ ಶಾಲೆಗಳ ಪರಿಸ್ಥಿತಿ ಇನ್ನೂ ದಾರುಣವಾಗಿದೆ. ಇನ್ನೊಂದೆಡೆ ಸರಕಾರಿ ಕನ್ನಡ ಶಾಲೆಗಳಿಗೆ ಬರುವ ಮಕ್ಕಳ ಸಂಖ್ಯೆಯೂ ಪ್ರತಿನಿತ್ಯ ಕುಸಿಯುತ್ತಿರುವುದು ಸಾಮಾನ್ಯವಾಗಿದೆ. ಸರಕಾರಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸುವಲ್ಲಿ ವಿಫಲವಾಗಿರುವುದರಿಂದ ಸರಕಾರಿ ಶಾಲೆಗಳ ಪರಿಸ್ಥಿತಿ ದಾರುಣವಾಗಿದೆ. ಇತ್ತೀಚೆಗೆ ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಶಿಕ್ಷಕರೊಬ್ಬರು ಸೇವೆ ಸಲ್ಲಿಸಿದ ಸರಕಾರಿ ಶಾಲೆ ಈ ವರ್ಷ ಮುಚ್ಚಿಹೋಗಿದೆ. ಸರಕಾರವು ಇನ್ನಾದರೂ ಸರಕಾರಿ ಶಾಲೆಗಳು ಮುಚ್ಚುವುದನ್ನು ತಡೆಯಲು ಕ್ರಿಯಾ ಯೋಜನೆಯೊಂದನ್ನು ರೂಪಿಸಬೇಕಾಗಿದೆ.

ಸರಕಾರಿ ಶಾಲೆಗಳ ದುರವಸ್ಥೆಯನ್ನು ಸರಿಪಡಿಸಲು ಈ ವರೆಗೆ ರಾಜ್ಯವನ್ನಾಳಿದ ಯಾವ ಸರಕಾರವೂ ಆಸಕ್ತಿ ತೋರಿಸಿಲ್ಲ.ಈ ಬಗ್ಗೆ ಹೈಕೋರ್ಟ್ ಕೂಡ ಈ ಹಿಂದೆ ಅಸಮಾಧಾನ ವ್ಯಕ್ತಪಡಿಸಿತ್ತು. ಅದರೂ ಸರಕಾರಿ ಕನ್ನಡ ಶಾಲೆಗಳ ಪರಿಸ್ಥಿತಿ ಸುಧಾರಿಸಿಲ್ಲ. ಯಾವುದೇ ಸರಕಾರಿ ಶಾಲೆ ಸರಿಯಾಗಿ ನಡೆಯಬೇಕೆಂದರೆ ಪ್ರತಿಯೊಂದು ಸರಕಾರಿ ಶಾಲೆಗೂ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕು. ಅಂದರೆ ಸರಕಾರಿ ಶಾಲೆಗಳಲ್ಲಿ ಪ್ರತ್ಯೇಕ ಕೊಠಡಿ, ಕುಡಿಯುವ ನೀರಿನ ಪೂರೈಕೆ ಹಾಗೂ ಶೌಚಾಲಯದ ಸೌಕರ್ಯವನ್ನು ಒದಗಿಸಬೇಕು. ಅಷ್ಟೇ ಅಲ್ಲ ಪಾಠ ಮಾಡಲು ಅಗತ್ಯವಾದಷ್ಟು ಶಿಕ್ಷಕರನ್ನು ನೇಮಕ ಮಾಡಿಕೊಳ್ಳಬೇಕು. ಈ ವಿಷಯಗಳಲ್ಲಿ ಸರಕಾರಿ ಕನ್ನಡ ಶಾಲೆಗಳು ಹಿಂದೆ ಉಳಿದಿರುವುದು ಹಲವಾರು ಸಮೀಕ್ಷೆಯಿಂದ ಗೊತ್ತಾಗಿದೆ. ಹೀಗಾಗಿ ಪೋಷಕರು ತಮ್ಮ ಮಕ್ಕಳನ್ನು ಖಾಸಗಿ ಶಾಲೆಗಳಿಗೆ ಕಳುಹಿಸುತ್ತಿದ್ದಾರೆ.

> ಕನ್ನಡ ರಾಜ್ಯೋತ್ಸವ ಹಾಗೂ ಸುವರ್ಣ ಮಹೋತ್ಸವಗಳಲ್ಲಿ ನೆಲದ ಭಾಷೆ ಕನ್ನಡವನ್ನು ಬೆಳೆಸುವ ಸಂಕಲ್ಪವನ್ನು ಮಾಡಲಾಯಿತು. ಆದರೆ ವಾಸ್ತವವಾಗಿ ಕನ್ನಡ ಭಾಷೆ ಕ್ರಮೇಣ ಅಳಿವು ಉಳಿವಿನ ಸಮಸ್ಯೆಯನ್ನು ಎದುರಿಸುತ್ತಿದೆ. ಇತರ ಅದರಲ್ಲೂ ಉತ್ತರದ ರಾಜ್ಯಗಳ ಜನರು ಸಾವಿರಾರು ಸಂಖ್ಯೆಯಲ್ಲಿ ವಲಸೆ ಬಂದು ತಮ್ಮ ನಾಡ ಭಾಷೆಯನ್ನು ಕನ್ನಡಿಗರ ಮೇಲೆ ಬಲವಂತವಾಗಿ ಹೇರುತ್ತಿದ್ದಾರೆ. ಭಾಷೆಗಳ ವಿಷಯದಲ್ಲಿ ನಮ್ಮ ಕನ್ನಡಿಗರು ಕೂಡ ಸಾಕಷ್ಟು ಧಾರಾಳಿಗಳು. ಅವರು ಅನ್ಯ ರಾಜ್ಯಗಳಿಂದ ವಲಸೆ ಬರುವವರಿಗೆ ಕನ್ನಡ ಕಲಿಸುವುದನ್ನು ಬಿಟ್ಟು ತಾವೇ ಅವರ ಹಿಂದಿ ಭಾಷೆಯಲ್ಲಿ ಮಾತನಾಡುತ್ತಿದ್ದಾರೆ..


ಉದಯವಾಹಿನಿ ಚಿತ್ರ

ರಾಜ್ಯದ ಬಹುತೇಕ ಕನ್ನಡ ಪ್ರಾಥಮಿಕ ಶಾಲೆಗಳು ದುರಸ್ತಿಯಾಗದೆ ನೆಲಕ್ಕೆ ಉರುಳುವ ಸ್ಥಿತಿಯಲ್ಲಿವೆ ಸರಕಾರ ಅನುದಾನವನ್ನೇನೋ ನೀಡುತ್ತದೆ. ಆದರೆ ಬೀಳುವ ಹಂತದಲ್ಲಿರುವ ಶಾಲೆಗಳ ಪರಿಸ್ಥಿತಿ ಇನ್ನೂ ಸುಧಾರಿಸಿಲ್ಲ.ಕೆಲವು ಹಳ್ಳಿಗಳಲ್ಲಿ ಶಾಲಾ ತರಗತಿಗಳು ಮರದ ಕೆಳಗೆ ಇಲ್ಲವೇ ಯಾವುದೋ ದೇವಾಲಯದ ಮುಂಭಾಗದಲ್ಲಿ ನಡೆಯುತ್ತವೆ. ಅನೇಕ ಶಾಲೆಗಳಲ್ಲಿ ಶಿಕ್ಷಕರೇ ಇಲ್ಲ. ಈ ಹಲವು ಕಾರಣಗಳಿಂದಾಗಿ ಬಹುತೇಕ ಶಾಲೆಗಳು ಮುಚ್ಚುವ ಹಂತದಲ್ಲಿ ಇದೆ. ಹಾಗಾಗಿ ಸರಕಾರ ಇತ್ತ ಗಮನವನ್ನು ಹರಿಸಿ ಕನ್ನಡ ಪ್ರಾಥಮಿಕ ಶಾಲೆಗಳನ್ನು ಸಂರಕ್ಷಿಸಬೇಕಾಗಿದೆ.

ಕಳೆದ ಐದು ವರ್ಷಗಳಲ್ಲಿ ಆರ್ಥಿಕವಾಗಿ ಹಿಂದುಳಿದ ಸಮುದಾಯಗಳಿಗೆ ಸೇರಿದ ಮಕ್ಕಳು ಕೂಡಾ ಸರಕಾರಿ ಶಾಲೆಗಳನ್ನು ಬಿಟ್ಟು ಅನಿವಾರ್ಯವಾಗಿ ಖಾಸಗಿ ಶಾಲೆಗಳಿಗೆ ಪ್ರವೇಶ ಪಡೆದಿದ್ದಾರೆ ಎಂದು ಕೇಂದ್ರ ಸರಕಾರದ ಸಮೀಕ್ಷೆಯಿಂದ ಗೊತ್ತಾಗಿದೆ. ಗ್ರಾಮೀಣ ಪ್ರದೇಶಗಳ ಬಡ ಕುಟುಂಬಗಳ ಬಹುತೇಕ ಮಕ್ಕಳು ಶಾಲೆಗಳಿಂದ ಹೊರಗುಳಿಯುವ ಪರಿಸ್ಥಿತಿ ಉಂಟಾಗಿದೆ. ಸಂವಿಧಾನದಲ್ಲಿ ಪ್ರಾಥಮಿಕ ಶಿಕ್ಷಣ ಕಡ್ಡಾಯಗೊಳಿಸಿದ್ದರೂ ವಾಸ್ತವವಾಗಿ ಸಂವಿಧಾನದ ಆಶಯಗಳಿಗೆ ಧಕ್ಕೆ ಉಂಟಾಗಿದೆ.

ಯಾವ ಉದ್ದೇಶದಿಂದ ಸಂವಿಧಾನದ ಪ್ರಾಥಮಿಕ ಶಿಕ್ಷಣ ಕಡ್ಡಾಯ ಮಾಡಲಾಗಿದೆಯೋ ಅದು ನಿರರ್ಥಕವಾದಂತಾಗಿದೆ. ಯಾವ ಮಕ್ಕಳು ಸರಕಾರಿ ಶಾಲೆಗಳಿಗೆ ಹೋಗುತ್ತಾರೆ ಎಂಬುದನ್ನು ತಿಳಿಯಲು ಸಮೀಕ್ಷೆ ಮಾಡಬೇಕಾಗಿಲ್ಲ.ಕಡು ಬಡವರು ತಮ್ಮ ಮಕ್ಕಳನ್ನು ಸರಕಾರಿ ಶಾಲೆಗೆ ಸಹಜವಾಗಿ ಸೇರಿಸುತ್ತಾರೆ. ಉಳ್ಳವರು ಶಾಲಾ ಶಿಕ್ಷಣ ಸೇರಿದಂತೆ ಎಲ್ಲಾ ಸೌಲಭ್ಯಗಳನ್ನು ಪಡೆಯುತ್ತಿದ್ದಾರೆ ಎಂಬುದು ಎಲ್ಲರಿಗೂ ಗೊತ್ತಿರುವ ಸಂಗತಿಯಾಗಿದೆ. ಈಗ ಅಧಿಕೃತವಾಗಿ ತಿಳಿದು ಬಂದಂತೆ ರಾಜ್ಯದ 46ಜ ಸರಕಾರಿ ಶಾಲೆಗಳಲ್ಲಿ ಶೌಚಾಲಯವಿಲ್ಲ, 87 ಶಾಲೆಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಇಲ್ಲ.

ಪ್ರಾಥಮಿಕ ಶಾಲೆಗಳಲ್ಲಿ ಕುಡಿಯುವ ನೀರು ಹಾಗೂ ಶೌಚಾಲಯದಂತಹ ಸೌಕರ್ಯಗಳನ್ನು ಒದಗಿಸಲು ಕೋಟ್ಯಂತರ ಹಣವೇನೂ ಬೇಕಾಗಿಲ್ಲ. ಸರಕಾರ ಆಸಕ್ತಿ ತೋರಿಸಿದರೆ ಪಂಚಾಯತ್ ಮಟ್ಟದಲ್ಲಿ ಅನುದಾನವನ್ನು ನೀಡಿ ಒಂದೇ ತಿಂಗಳಲ್ಲಿ ಅಗತ್ಯದ ಸೌಲಭ್ಯಗಳನ್ನು ಒದಗಿಸಲು ಸಾಧ್ಯವಾಗುತ್ತದೆ. ಇದನ್ನೆಲ್ಲ ಯಾರು ಸರಿಪಡಿಸಬೇಕು ಜನ ಪ್ರತಿನಿಧಿಗಳು ಆಸಕ್ತಿ ತೋರಿಸಿದರೆ ಇದು ಸಾಧ್ಯವಾಗುತ್ತದೆ.

ಕೆಲವು ಖಾಸಗಿ ಶಾಲೆಗಳಲ್ಲಿ ಜಾತಿ, ಮತ, ಕೋಮು ದ್ವೇಷವನ್ನು ವಿದ್ಯೆಯ ಹೆಸರಿನಲ್ಲಿ ಮುಗ್ಧ ಮಕ್ಕಳ ಮೆದುಳಿಗೆ ತುಂಬುವ ಹುನ್ನಾರಗಳು ನಿರಂತರವಾಗಿ ನಡೆದಿವೆ. ಬಹುತೇಕ ಶಿಕ್ಷಕರು ಕೋಮುವಾದಿ ಸಂಘಗಳಿಂದ ಬಂದಿರುವುದರಿಂದ ಮಕ್ಕಳ ಮೆದುಳಿನಲ್ಲಿ ಗಾಂಧೀಜಿಯವರನ್ನು ಖಳ ನಾಯಕನಂತೆ ಬಿಂಬಿಸಿ, ಗೋಡ್ಸೆಯನ್ನು ವೈಭವೀಕರಿಸಲಾಗುವ ಹುನ್ನಾರ ಅತ್ಯಂತ ವ್ಯವಸ್ಥಿತವಾಗಿ ನಡೆದಿದೆ. ಇದನ್ನು ತಡೆಗಟ್ಟಲು ಸರಕಾರಿ ಶಾಲೆಗಳಲ್ಲಿ ಸಂವಿಧಾನ, ಅಂಬೇಡ್ಕರ್, ಗಾಂಧೀಜಿಯವರ ಬಗ್ಗೆ ಅರಿವು

ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದಾಗಲೂ ಸರಕಾರಿ ಪ್ರಾಥಮಿಕ ಶಾಲೆಗಳ ಸುಧಾರಣೆಯ ಬಗ್ಗೆ ಆಸಕ್ತಿ ತೋರಿಸಲಿಲ್ಲ. ಅಲ್ಲದೆ ಬಹುತೇಕ ಶಾಸಕರು, ರಾಜಕಾರಣಿಗಳು ತಮ್ಮದೇ ಶಾಲೆಗಳನ್ನು ಹೊಂದಿರುವುದರಿಂದ ಸರಕಾರಿ ಕನ್ನಡ ಶಾಲೆಗಳ ಅಭಿವೃದ್ಧಿ ಬಗ್ಗೆ ಒಳಗೊಳಗೆ ಅಡ್ಡಿಯುಂಟು ಮಾಡುತ್ತಾರೆ ಎಂಬ ಆರೋಪಗಳೂ ಇವೆ. ಇನ್ನಾದರೂ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಇತ್ತ ಗಮನಿಸಿ ಲೋಪವನ್ನು ಸರಿಪಡಿಸಬೇಕಾಗಿದೆ.

ಪ್ರಧಾನಿ ನರೇಂದ್ರ ಮೋದಿಯವರಿಗೆ ಖಾಸಗಿ ಶಾಲೆಗಳು, ಖಾಸಗಿ ಆಸ್ಪತ್ರೆ ಹಾಗೂ ಖಾಸಗಿ ಸಾರಿಗೆ ವ್ಯವಸ್ಥೆಯ ಬಗ್ಗೆ ವಿಶೇಷ ಆಸಕ್ತಿ ಇರುವುದರಿಂದ ಬಡವರಿಗೆ ಶಿಕ್ಷಣ ಸೌಕರ್ಯಗಳನ್ನು ಒದಗಿಸಲು ಬಹುದೊಡ್ಡ ಚಳವಳಿ ನಡೆಯಬೇಕಾಗಿದೆ.




• ಹಿಂದಿನ ಸಂಚಿಕೆಯಿಂದ 23ನೆಯ ಅಧ್ಯಾಯ

ಈ ಪ್ರಕಾರದಲ್ಲಿ ಗಂಗೆಯ ವೃತ್ತಾಂತವನ್ನು ಕೇಳಿದ ರಾಮಲಕ್ಷ್ಮಣರು ಸಂತುಷ್ಟಚಿತ್ತರಾಗಿ ಮುನಿಗಳೆ, ಗಂಗೆಯ ಉತ್ಪತ್ತಿಯನ್ನು ವಿಸ್ತಾರವಾಗಿ ನಿರೂಪಿಸಬೇಕು. ನೀವು ಸರ್ವಜ್ಞರು ; ಸಮಸ್ತ ಪ್ರಾಣಿಗಳ ಉತ್ಪತ್ತಿಯನ್ನೂ ಬಲ್ಲಿರಿ. ಆಕಾಶದಲ್ಲಿದ್ದು ಈ ಲೋಕದಲ್ಲಿ ಯಾವ ಕಾರಣದಿಂದ ಪ್ರವಹಿಸಿದಳು ಹೇಗೆ ಪ್ರಸಿದ್ಧಳಾದಳು ಗಂಗೆಯ ಮಹಿಮೆಯು ಏನು ಎಂದು ಕೇಳಿದರು.

ವಿಶ್ವಾಮಿತ್ರಮುನೀಶ್ವರನು ಶ್ರೀರಾಮನನ್ನು ನೋಡಿ ರಾಮ, ಪೂರ್ವದಲ್ಲಿ ಪರಮೇಶ್ವರನು ಪಾರ್ವತಿಯನ್ನು ವಿವಾಹವಾಗಿ ಆಕೆಯೊಡನೆ ಕ್ರೀಡಿಸುತ್ತ ದೇವತೆಗಳ ನೂರುವರುಷಗಳನ್ನು ಕಳೆದನು. ಆಗ ಸಮಸ್ತ ದೇವತೆಗಳೂ ಕಂಗೆಟ್ಟು ಬ್ರಹ್ಮದೇವನನ್ನು ಮುಂದಿಟ್ಟುಕೊಂಡು ಆಲೋಚನೆ ಮಾಡಿ ಪರಮೇಶ್ವರನ ಸಮೀಪಕ್ಕೆ ಹೋಗಿ ನಮಸ್ಕರಿಸಿ ಆತನನ್ನು ಕುರಿತು ದೇವದೇವ, ಸಮಸ್ತಲೋಕ ಗಳಿಗೂ ಹಿತವನ್ನು ಮಾಡುವ ಸರ್ವೇಶ್ವರ, ನಾವು ನಿನ್ನ ಶರಣುಹೊಕ್ಕೆವು. ನಮ್ಮಲ್ಲಿ ಕೃಪೆ ಮಾಡಬೇಕು. ನಿನ್ನಿಂದ ಗರ್ಭೋತ್ಪತ್ತಿ ಯಾದಪಕ್ಷದಲ್ಲಿ ಅದರ ತೇಜಸ್ಸನ್ನು ಯಾರೂ ಸಹಿಸಲಾರರು. ಆದ್ದರಿಂದ ನೀನು ಈ ಕೃತ್ಯವನ್ನು ಸಾಕುಮಾಡಿ ಜಗದ್ಧಿತಾರ್ಥವಾಗಿ ಪಾರ್ವತೀದೇವಿಯನ್ನು ಕೂಡಿಕೊಂಡು ತಪಸ್ಸನ್ನು ಮಾಡುತ್ತ ನಿನ್ನ ತೇಜಸ್ಸನ್ನು ನಿನ್ನ ತೇಜಸ್ಸಿನಲ್ಲಿಯೇ ಅಡಕಮಾಡಿಕೊ. ಸಮಸ್ತ ಲೋಕಗಳಿಗೂ ಭಯವನ್ನು ಪರಿಹರಿಸಿ ರಕ್ಷಿಸು ಎಂದು ಪ್ರಾರ್ಥಿಸಿದರು

ಪರಮೇಶ್ವರನು ' ಎಲೈ ದೇವತೆಗಳಿರಾ, ಪಾರ್ವತಿಯನ್ನು ಕೂಡಿದ್ದರಿಂದ ಸ್ರವಿಸಿದ ತೇಜಸ್ಸನ್ನು ನನ್ನ ತೇಜಸ್ಸಿನಲ್ಲಿಯೇ ಧರಿಸುವೆನು ; ದೇವತೆಗಳೂ ಭೂಮಿಯೂ ಸುಖದಲ್ಲಿರಲಿ ! ಆದರೂ ನನ್ನ ತೇಜಸ್ಸನ್ನು ಧರಿಸುವುದಕ್ಕೆ ಸಮರ್ಥರಾದವರಿದ್ದರೆ ಹೇಳಿ ' ಎಂದು ನುಡಿದನು.

ಆಗ ದೇವತೆಗಳು ಪರಮೇಶ್ವರ, ನಿನ್ನ ತೇಜಸ್ಸನ್ನು ಈ ಭೂದೇವತೆಯು ಧರಿಸಬಲ್ಲಳು' ಎಂದು ಹೇಳಿದರು. ಆ ದೇವತೆಗಳ ಮಾತನ್ನು ಕೇಳಿ ಪರಮೇಶ್ವರನು ತನ್ನ ತೇಜಸ್ಸನ್ನು ಭೂಮಿ ಯಲ್ಲಿ ಬಿಟ್ಟನು. ಆ ತೇಜಸ್ಸಿನಿಂದ ಭೂಮಿಯೆಲ್ಲವೂ ಪರಿಪೂರ್ಣವಾಗಲು ದೇವತೆಗಳು ಅಗ್ನಿಯನ್ನು

ಕರೆದು '' ಹೇ ಯಜ್ಞಪುರುಷ, ನೀನು ವಾಯುವನ್ನು ಸಹಾಯಮಾಡಿಕೊಂಡು ಈ ಭೂಮಿಯ ಮೇಲೆ ಪರಿಪೂರ್ಣವಾದ ತೇಜಸ್ಸನ್ನು ಧರಿಸು' ಎಂದರು. ಆ ಬಳಿಕ ಯಜ್ಞಪುರುಷನು ತನ್ನ

ಜ್ವಾಲೆಯಿಂದ ಸುತ್ತಿಕೊಳ್ಳಲು ಭೂಮಿಯ ಮೇಲಿದ್ದ ಪರಮೇಶ್ವರನ ಆ ತೇಜಸ್ಸೆಲ್ಲವೂ ಒಟ್ಟುಗೂಡಿ ಶ್ವೇತಪರ್ವತವಾಯಿತು. ಯಜ್ಞಪುರುಷನಿಂದ ಧರಿಸಲ್ಪಟ್ಟ ಒಂದು ಭಾಗದ ತೇಜಸ್ಸು ದರ್ಭೆಯ ವನವಾಗಿ ಸೂರನಿಗೆ ಸಮಾನವಾದ ಕಾಂತಿಯುಳ್ಳದ್ದಾಯಿತು.

ಮುಂದುವರಿಯುವುದು...

# ತಾಯಿ ತಂದೆ ದೈವ ಸಮಾನ


ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

ತಾಯಿ ತಂದೆ ಹಾಗು ಮನೆಯಲ್ಲಿನ ಹಿರಿಯರಿಗೆ ಬಗ್ಗಿ ನಮಸ್ಕಾರ ಮಾಡಬೇಕು. ತಾಯೀ ತಂದೆ ಹಾಗು ಮನೆಯಲ್ಲಿರುವ ಹಿರಿಯರಿಗೆ ಬಗ್ಗಿ ಅಂದರೆ ಕಾಲು ಮುಟ್ಟಿ ನಮಸ್ಕರಿಸಬೇಕು.

ಮಾತೃ ದೇವೋಭವ। ಪಿತೃ ದೇವೋಭವ। ಎಂದರೆ ತಂದೆ-ತಾಯಂದಿರು ದೇವರ ಸಮಾನ ಎಂದು ನಮ್ಮ ಮಹಾನ್ ಹಿಂದೂ ಸಂಸ್ಕೃತಿ ಕಲಿಸುತ್ತದೆ.

ತಾಯಿ- ತಂದೆಯರ ಮಹತ್ವ ತಿಳಿದುಕೊಂಡು ಅವರ ಸೇವೆ ಮಾಡಿದ ಕೆಲವು ಮಹಾಪುರುಷರು

**ಶ್ರವಣ ಕುಮಾರ:** ವಯೋವೃದ್ಧ ಅಂಧ ತಾಯಿ-ತಂದೆಯರ ಸೇವೆಯನ್ನು ಯಾವುದೇ ಬೇಸರವಿಲ್ಲದೆ ಶ್ರವಣನು ಮಾಡಿದನು. ವೃದ್ಧ ತಂದೆ ತಾಯಿಯರು ಕಾಶಿ ಯಾತ್ರೆಗೆ ಹೋಗುವ ಇಚ್ಛೆಯನ್ನು ವ್ಯಕ್ತ ಮಾಡಿದಾಗ ಕೂಡಲೇ ಅವರನ್ನು ಕರೆದೊಯ್ಯಲು ತಕ್ಕಡಿಯ ಸಿದ್ಧತೆ ಮಾಡಿದನು. ಶ್ರವಣ ಕುಮಾರನು ಅವರನ್ನು ದೊಡ್ಡದಾದ ತಕ್ಕಡಿಯಲ್ಲಿ ಕುಳ್ಳರಿಸಿಕೊಂಡು ಹೆಗಲ ಮೇಲೆ ಆ ತಕ್ಕಡಿಯನ್ನು ಹೊತ್ತುಕೊಂಡು ಅವರನ್ನು ಕಾಶಿ ಯಾತ್ರೆಗೆ ಕರೆದುಕೊಂಡು ಹೋದನು.

**ಪ್ರಭು ಶ್ರೀರಾಮಚಂದ್ರ :** ಚಿಕ್ಕವನಾದ ಭರತನಿಗೆ ಪಟ್ಟಾಭಿಷೇಕ ಮತ್ತು ಶ್ರೀ ರಾಮನಿಗೆ 14 ವರ್ಷ ವನವಾಸ ಎಂಬ ಮಾತೆ ಕೈಕೇಯಿಯ ಆಜ್ಞೆಯನ್ನು ರಾಮನು ಮನಃಪೂರ್ವಕವಾಗಿ ಪಾಲಿಸಿದನು ಮತ್ತು ತಂದೆಯ ವಚನದ ಮಾನವನ್ನೂ ಪಾಲಿಸಿದನು.

**ಭಕ್ತ ಪುಂಡಲೀಕ :** ಇವನು ಮಾಡಿದ ತಾಯಿ ತಂದೆಯರ ಸೇವೆ ಒಂದು ತಪಶ್ಚರ್ಯವೇ ಆಗಿದೆ. ಅವನ ಈ ತಪಸ್ಸಿನಿಂದ ಪ್ರಸನ್ನನಾಗಿ ಶ್ರೀ ವಿಠ್ಠಲನು ಅವನ ಭೇಟಿಗೆ ಬಂದನು. ಆ ಸಮಯದಲ್ಲಿ ಸಹ ತನ್ನ ತಾಯಿ ತಂದೆಯರ ಸೇವೆಯಲ್ಲಿ ಅಡಚಣೆ ಉಂಟಾಗಬಾರದೆಂದು ಪುಂಡಲೀಕನು ಶ್ರೀ ವಿಠ್ಠಲನತ್ತ ಒಂದು ಇಟ್ಟಿಗೆಯನ್ನು ಎಸೆದು ಅದರ ಮೇಲೆ ನಿಲ್ಲಲು ಹೇಳಿದನು.

**ಛತ್ರಪತಿ ಶಿವಾಜಿ ಮಹಾರಾಜರು:** ಜೀಜಾಮಾತೆಯನ್ನು ಭೇಟಿಯಾದ ತಕ್ಷಣ ಶಿವರಾಯರು ಪ್ರಥಮವಾಗಿ ಅವರಿಗೆ ಕಾಲು ಮುಟ್ಟಿ ನಮಸ್ಕರಿಸುತ್ತಿದ್ದರು. ಮಹಾರಾಜರು ಜಿಜಾಮಾತೆಯು ಹೇಳಿದ ಪ್ರತಿಯೊಂದು ಮಾತನ್ನೂ ಕೇಳುತ್ತಿದ್ದರು ಮತ್ತು ಅದರಂತೆ ನಡೆಯುತ್ತಿದ್ದರೂ ಕೂಡ.


ಉದಯವಾಹಿನಿ ಚಿತ್ರ

> ತಾಯಿ-ತಂದೆಯರನ್ನು ಎಂದಿಗೂ ನೋಯಿಸಬಾರದು, ಭಗವಾನ್ ಶಂಕರನು ಪಾರ್ವತಿ ದೇವಿಯನ್ನು ಸಂಬೋಧಿಸಿ, 'ಹೇ ಪಾರ್ವತಿ, ತಂದೆ ತಾಯಿಯರನ್ನು ಸಂತುಷ್ಟಗೊಳಿಸುವ ಜೀವದ ಮೇಲೆ ನಿನ್ನ ಕೃಪೆ ಆಗುತ್ತದೆ. ಇಂತಹ ಜೀವಗಳ ಮೇಲೆ ಪರಬ್ರಹ್ಮನೂ ಪ್ರಸನ್ನನಾಗುತ್ತಾನೆ' ಎಂದು ಹೇಳಿದ್ದಾರೆ.

ತಾಯಿ ತಂದೆಯ ಸೇವೆಯನ್ನು ಮನಃಪೂರ್ವಕವಾಗಿ ಮಾಡುವುದರ ಫಲ 'ತಾಯಿ ತಂದೆಯರ ಹಾಗೂ ಗುರುಗಳ ಸೇವೆ ಮಾಡುವುದು, ಸರ್ವೋತ್ತಮ ತಪಶ್ಚರ್ಯೆ ಆಗಿದೆ', ಎಂದು ಧರ್ಮಶಾಸ್ತ್ರದಲ್ಲಿ ಹೇಳಲಾಗಿದೆ. ತಂದೆ ತಾಯಿಯರು ಮಕ್ಕಳಿಗಾಗಿ ಬಹಳ ಕಷ್ಟಗಳನ್ನು ಸಹಿಸಿರುತ್ತಾರೆ. ಮಕ್ಕಳ ಬಾಲ್ಯ ಚೆನ್ನಾಗಿರಬೇಕು, ಅವರಿಗೆ ಒಳ್ಳೆಯ ಶಿಕ್ಷಣ ಸಿಗಬೇಕೆಂದು ಪ್ರಯತ್ನಿಸುತ್ತಾರೆ; ಆದರೆ ಅನೇಕ ಮಕ್ಕಳು ತಂದೆ ತಾಯಿಯರಿಗೆ ಎದುರುತ್ತಾರೆ ನೀಡುತ್ತಾರೆ. ಅದರಿಂದ ತಂದೆ ತಾಯಿಯರ ಮನಸ್ಸಿಗೆ ನೋವಾಗುತ್ತದೆ. ತಂದೆ ತಾಯಿಯರಿಗೆ ಈ ರೀತಿ ಮಾತಾಡಿ ಮನಸ್ಸು ನೋಯಿಸಿದರೆ ದೇವರ ಮನಸ್ಸನ್ನೇ ನೋಯಿಸಿದಂತಾಗುತ್ತದೆ. ಮಕ್ಕಳೇ, ಇದನ್ನು ತಪ್ಪಿಸುವುದಕ್ಕಾಗಿ ತಂದೆ ತಾಯಿಯರ ಜೊತೆ ಪ್ರೀತಿಯಿಂದ ವ್ಯವಹರಿಸಬೇಕು ಮತ್ತು ಅವರ ಬಗ್ಗೆ ಕೃತಜ್ಞರಾಗಿರಬೇಕು. ತಂದೆ ತಾಯಿಯರು ಹೇಳಿದ್ದನ್ನು ಮನಃಪೂರ್ವಕವಾಗಿ ಆಲಿಸಬೇಕು ತಾಯಿಯು ಮಕ್ಕಳಿಗೆ ಇಷ್ಟವಾದಂತಹ ತಿಂಡಿ ತಿನಿಸುಗಳನ್ನು ಮಾಡುತ್ತಾಳೆ, ಹಾಗೆಯೇ ಮಕ್ಕಳಿಗೆ ಏನು ಬೇಕು ಬೇಡ ಎನ್ನುವುದನ್ನೂ ಗಮನಿಸುತ್ತಾಳೆ. ಅನಾರೋಗ್ಯವಿದ್ದಾಗ ಹಗಲು ರಾತ್ರಿ ಎಚ್ಚರವಿದ್ದು ಅವರ ಕಾಳಜಿ ತೆಗೆದುಕೊಳ್ಳುತ್ತಾಳೆ. ಇದೆಲ್ಲವನ್ನೂ ಮಾಡುತ್ತಿರುವಾಗ ತಾಯಿಯು ತನ್ನ ಕಡೆಗೆ ಎಳ್ಳಷ್ಟೂ ಗಮನ ಹರಿಸುವುದಿಲ್ಲ. ಅವಳ ಮನಸ್ಸಿನಲ್ಲಿ ಸತತವಾಗಿ ಮಕ್ಕಳ ಚಿಂತೆಯೇ ಇರುತ್ತದೆ. ತಂದೆಯೂ ಸಹ ಮಕ್ಕಳ ಎಲ್ಲಾ ಅವಶ್ಯಕತೆಗಳನ್ನು ಪೂರೈಸಲು ಮತ್ತು ಕುಟುಂಬದ ಪಾಲನೆ ಪೋಷಣೆ ಮಾಡಲು ಕಷ್ಟಪಟ್ಟು ಹಣ ಸಂಪಾದಿಸುತ್ತಾರೆ. ಮಕ್ಕಳಿಗೆ ಬೇಕಾದ್ದನ್ನು ತಂದು ಕೊಡುತ್ತಾರೆ. ಹೀಗಿರುವಾಗ ನಾವು ತಂದೆ ತಾಯಿಯರ ಮಾತನ್ನು ಕೇಳುತ್ತೇವೆಯೇ ಎಂದು ಮಕ್ಕಳು ಯೋಚಿಸಬೇಕು.

ಮಕ್ಕಳೇ, ನಿಜವಾಗಿ ನೋಡಿದರೆ ತಂದೆ ತಾಯಿಯರ ಸೇವೆಯನ್ನು ಎಷ್ಟು ಮಾಡಿದರೂ ಅವರ ಋಣವನ್ನು ತೀರಿಸಲಾಗುವುದಿಲ್ಲ, ಆದರೂ ತಂದೆ ತಾಯಿಯರ ಋಣದಿಂದ ಸ್ವಲ್ಪವಾದರೂ ಮುಕ್ತವಾಗಲು ಅವರು ಹೇಳಿದ್ದನ್ನು ಮನಃಪೂರ್ವಕವಾಗಿ ಕೇಳಬೇಕು, ಹಾಗೆಯೇ ಸತತವಾಗಿ ಅವರ ಜೊತೆಗೆ ಆದರದಿಂದ ನಡೆದುಕೊಳ್ಳಬೇಕು.

ತಂದೆ ತಾಯಿಯರ ಮೇಲಿನ ಪ್ರೀತಿಯನ್ನು ಕೃತಿಯ ಮೂಲಕ ವ್ಯಕ್ತಪಡಿಸಿ ಮಕ್ಕಳಿಗೆ ತಾಯಿ ತಂದೆಯರ ಮೇಲೆ ಪ್ರೀತಿ ಇದ್ದೇ ಇರುತ್ತದೆ; ಆದರೆ ಆ ಪ್ರೀತಿಯು ಕೃತಿಯಲ್ಲಿಯೂ ವ್ಯಕ್ತವಾಗಬೇಕು. ಮಕ್ಕಳು ತಮ್ಮ ಪ್ರೀತಿಯನ್ನು ಕೃತಿಯಿಂದ ವ್ಯಕ್ತಪಡಿಸಿದರೆ ತಂದೆ ತಾಯಿಯರಿಗೂ ಸಂತೋಷವಾಗುತ್ತದೆ. ಉದಾಹರಣೆಯೆಂದು ಕೆಲವು ಕೃತಿಗಳನ್ನು ಮುಂದೆ ನೀಡುತ್ತಿದ್ದೇವೆ. ತಂದೆ ತಾಯಿಯರು ಹೊರಗಿನಿಂದ ಬಂದ ಕೂಡಲೆ ಅವರಿಗೆ ಕುಡಿಯಲು ನೀರು ತಂದು ಕೊಡುವುದು : ಮಕ್ಕಳೇ ತಂದೆ ತಾಯಿಯರು ಹೊರಗಿನಿಂದ ಬಂದಾಗ ನಿಮ್ಮಲ್ಲಿ ಎಷ್ಟು ಜನ ಅವರು ಕೇಳದೆಯೇ ನೀರು ತಂದು ಕೊಡುತ್ತೀರಿ ನೀರು ಕೇಳಿದರು ಸಹ ನಿಮ್ಮಲ್ಲಿ ಎಷ್ಟು ಜನ ತಾಯಿಗೆ 'ನಿನಗೆ ನೀರು ಬೇಕಾದರೆ ನೀನೇ ತೆಗೆದುಕೊ' ಎಂದು ಹೇಳ್ತೀರಿ ಮಕ್ಕಳೇ, ಹೀಗೆ ಮಾತಾಡುವುದು ಅಯೋಗ್ಯವಾಗಿದೆ. ಅವರು ಹೊರಗಿನಿಂದ ದಣಿದು ಬಂದಿರುತ್ತಾರೆ. ಇಂತಹ ಸಮಯದಲ್ಲಿ ನೀವು ಅವರಿಗೆ ನೀರು ತಂದು ಕೊಟ್ಟರೆ ಅವರಿಗೂ ಒಳ್ಳೆಯದೆನಿಸುತ್ತದೆ. ತಾಯಿ ತಂದೆಯರಿಗೆ ಅವರ ಕೆಲಸಗಳಲ್ಲಿ ಸಹಾಯ ಮಾಡುವುದು: ತಾಯಿಗೆ ಗಿರಣಿಯಿಂದ ಹಿಟ್ಟು ತಂದು ಕೊಡುವುದು, ಮಾರುಕಟ್ಟೆಯಿಂದ ತರಕಾರಿ ತಂದುಕೊಡುವುದು ಇತ್ಯಾದಿ ಕೆಲಸಗಳನ್ನು ಮಾಡಬೇಕು. ಇದಕ್ಕಾಗಿ ಅವರಿಂದ ಚಾಕೊಲೇಟ್ ಕೇಳಬಾರದು. ತಾಯಿ ತಂದೆಯರು ಮಲಗಿದ್ದಾಗ ತನ್ನ ಕೆಲಸ ತಾನೇ ಮಾಡಿಕೊಳ್ಳುವುದು ! ತಾಯಿ ಮಲಗಿದ್ದಾಗ ತಾನೇ ಬಡಿಸಿಕೊಂಡು ಊಟ ಮಾಡುವ ಕು. ಮೃಣಾಲ್ : ಕು. ಮೃಣಾಲ್ 8 ವರ್ಷದವಳಿದ್ದಾಗ ಅವಳು ಶಾಲೆಯಿಂದ ಬರುವ ವೇಳೆಗೆ ನಾನು ಮಲಗಿರುತ್ತಿದ್ದೆ. ಆಗ ಅವಳು ನನ್ನನ್ನು ಎಬ್ಬಿಸದೇ ತಾನೇ ಬಡಿಸಿಕೊಂಡು ಊಟ ಮಾಡುತ್ತಿದ್ದಳು.

### ಮನೆಯ ಇತರ ಕೆಲಸಗಳನ್ನು ಮಾಡಬೇಕು

- ಊಟದ ಮೊದಲು ಎಲ್ಲರ ತಟ್ಟೆ, ಲೋಟಗಳು, ನೀರು, ಮಣೆಗಳನ್ನು ಇಡಬೇಕು. ಊಟದ ನಂತರ ಎಲ್ಲವನ್ನು ತೆಗೆದಿಡುವುದು, ಸ್ವಚ್ಛಗೊಳಿಸುವುದು ಮಾಡಬೇಕು.
- ರಾತ್ರಿ ಎಲ್ಲರ ಹಾಸಿಗೆ ಹಾಸಿಡಬೇಕು.
- ತಂದೆ ತಾಯಿಯರ ಕಾಲು ಒತ್ತಬಹುದು.

## ನ.16ರಂದು ಉತ್ತರಖಂಡ್: ಹರಿದ್ವಾರ, ಋಷಿಕೇಶ
## ಗಂಗಾತೀರದಲ್ಲಿ ರಾಷ್ಟ್ರೀಯ ಕರ್ನಾಟಕ ರಾಜ್ಯೋತ್ಸವ



• ಉದಯವಾಹಿನಿ, ಬೆಂಗಳೂರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘ (ರಿ.) ವತಿಯಿಂದ ಉತ್ತರಖಂಡ್‌ನ ಹರಿದ್ವಾರ ಮತ್ತು ಋಷಿಕೇಶದ ಸನ್ನಿಧಿಯಲ್ಲಿ ''ರಾಷ್ಟ್ರೀಯ ಕರ್ನಾಟಕ ರಾಜ್ಯೋತ್ಸವ ನವೆಂಬರ್ ದಿನಾಂಕ : 16-11-2024ರ ಶನಿವಾರ ಸಂಜೆ 4ಗಂಟೆಗೆ ಉತ್ತರಖಂಡ್‌ನ ಹರಿದ್ವಾರದ ಗಂಗಾನದಿ ತೀರದಲ್ಲಿ ಜರುಗಲಿದೆ ಇದರ ಕುರಿತು ಅಧ್ಯಕ್ಷರಾದ ಎ.ಅಮೃತ್ ರಾಜ್ ರವರು ಮಾಧ್ಯಮಗಳಿಗೆ ಮಾಹಿತಿ ನೀಡಿದರು.

ಹರಿದ್ವಾರ, ಋಷಿಕೇಶ ಗಂಗಾತೀರದಲ್ಲಿ ರಾಷ್ಟ್ರೀಯ ಕರ್ನಾಟಕ ರಾಜ್ಯೋತ್ಸವನ್ನು ಆಚರಿಸಲಾಗುತ್ತಿದೆ ಇದರ ಉದ್ಘಾಟನೆಯನ್ನು ಆದಾಯ ತೆರಿಗೆ ಇಲಾಖೆಯ ಆಯುಕ್ತರಾದ ಆರ್.ಎಲ್.ದೀಪಕ್ ರವರು ಕರ್ನಾಟಕ ರಾಜ್ಯ ಮಹಾನಗರ ಪಾಲಿಕೆ ನೌಕರರ ಸಂಘದ ಅಧ್ಯಕ್ಷರಾದ ಎ.ಅಮೃತ್ ರಾಜ್ ರವರು ಮುಖ್ಯ ಅತಿಥಿಗಳಾಗಿ ಮಾಜಿ ಮಹಾಪೌರರಾದ ಎಂ. ಗೌತಮ್ ಕುಮಾರ್ ,ಚಲನಚಿತ್ರ ನಟ ನೆನಪಿರಲಿ ಪ್ರೇಮ್ ,ಪಲಿಮಾರು ಮಠ ಪ್ರಬಂಧಕರು ಹರಿದ್ವಾರ್ ಹಾಗೂ ರಾಜ್ಯಾಧ್ಯಕ್ಷರು, ಹಿಂದು ರಕ್ಷಾ, ಸೇನಾ ಗೋ ಸೇವಾ ಸಮಿತಿಯ ಪ್ರಭಾಕರ್ ಮಂಜುನಾಥ್

ಮಹದೇವಪುರ ವಲಯ ಜಂಟಿ ಆಯುಕ್ತರಾದ ಡಾ|| ದಾಕ್ಷಾಯಿಣಿ, ಕೆ.ಎ.ಎಸ್,ವಕೀಲರಾದ ವಿ. ಶ್ರೀನಿವಾಸ್,ಭೀಮಪುತ್ರಿ ಬ್ರಿಗೇಡ್ ಅಧ್ಯಕ್ಷರಾದ ಭೀಮಪುತ್ರಿ ರೇವತಿರಾಜ್ ರವರು ಉದ್ಘಾಟನೆ ನೇರವೇರಿ ಸುವರು.

ಬಿಬಿಎಂಪಿ ಅಧಿಕಾರಿ ಮತ್ತು ನೌಕರರಿಂದ ಸಾಂಸ್ಕೃತಿಕ ಕಾರ್ಯಕ್ರಮ ಮತ್ತು ಖ್ಯಾತ ಗಾಯಕಿ ಎಂ.ಡಿ.ಪಲ್ಲವಿರವರಿಂದ ಭಾವಗೀತೆ ಮತ್ತು ಕುಮಾರಿ ಭಾಗ್ಯಶ್ರೀ ಗೌಡರವರಿಂದ ಚಲನಚಿತ್ರ ಗೀತೆ ಕಾರ್ಯಕ್ರಮ. ಹರಿದ್ವಾರದ ಕರ್ನಾಟಕ ರಾಜ್ಯೋತ್ಸವದಲ್ಲಿ ಉಪ ಆರೋಗ್ಯಧಿಕಾರಿ ಡಾ||ಸಂಧ್ಯಾ ಮತ್ತು ಆಡಳಿತಗಾರರ ಆಪ್ತ ಕಾರ್ಯದರ್ಶಿ ನಾರಾಯಣಸ್ವಾಮಿ , ಬಿಬಿಎಂಪಿ ನೌಕರರ ಕನ್ನಡ ಸಂಘದ ಅಧ್ಯಕ್ಷರಾದ ಸಾಯಿಶಂಕರ್ ರವರಿಗೆ ಗೌರವ ಸನ್ಮಾನ ಮಾಡಲಾಗುತ್ತದೆ. ಕನ್ನಡ ನಾಡಿನ ನಾಡು, ನುಡಿ ಸಂಸ್ಕೃತಿಯನ್ನು ಹೊರ ರಾಜ್ಯ ದೇಶದವರಿಗೆ ಪರಿಚಯಿಸಬೇಕು ಹಾಗೂ ಹೊರ ನಾಡ ಕನ್ನಡಿಗರ ಸಂಘಟನೆ ನಮ್ಮ ಕಲೆ, ಸಂಸ್ಕೃತಿ ಮಾತೃಭಾಷೆ ಮರೆಯಬಾರದು.

> ಕಾಶಿಯಲ್ಲಿ ಕರ್ನಾಟಕ ರಾಜ್ಯೋತ್ಸವ ಮತ್ತು ನೇಪಾಳದಲ್ಲಿ ಅಂತರಾಷ್ಟ್ರೀಯ ಕರ್ನಾಟಕ ರಾಜ್ಯೋತ್ಸವ ಆಚರಿಸಲಾಯಿತು ಇದೀಗ ಹರಿದ್ವಾರದಲ್ಲಿ ರಾಷ್ಟ್ರೀಯ ಕರ್ನಾಟಕ ರಾಜ್ಯೋತ್ಸವ ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ ಎಂದು ಹೇಳಿದರು.



### ಸಾಮಾಜಿಕ ಕಳಕಳಿ



ಹೆಚ್.ಎಸ್.ಪ್ರತಿಮಾ ಹಾಸನ್
ಸಾಹಿತಿ,ಶಿಕ್ಷಕಿ,ಸಾಮಾಜಿಕ ಚಿಂತಕಿ.ಹಾಸನ

• ಉದಯವಾಹಿನಿ, ವಿಶೇಷ

### ದಿನಕ್ಕೊಂದು ಮುಕ್ತಕ -23

ಅನ್ನಹಾಕುವ ಜನರ ಬಿಡದೆ ಕಾಯ್ವುದು ನಾಯಿ
ಹೊನ್ನುಗಳ ನೀಡಿ ತರುತಿಹರು ಮುದದಿ
ಚೆನ್ನುಡಿಯನಾಡುತಲಿ ಮನೆಯಲ್ಲಿ ಸಾಕುವರು
ಅನ್ಯರಿಗೆ ನೆರವದುವೆ ಲಕ್ಷ್ಮಿದೇವಿ....

ಭಾವಾರ್ಥ: ಮನೆಯಲ್ಲಿ ಸಾಕಿದಂಥ ನಾಯಿಗಳು ಯಾವುದೇ ಕಳ್ಳ ಕಾಕರನ್ನು ಒಳಗೆ ಬರಲು ಬಿಡುವುದಿಲ್ಲ. ಹಣವನ್ನು ಕೊಟ್ಟು ಸಾಕಲೆಂದು ಪ್ರೀತಿ ವಿಶ್ವಾಸದಲ್ಲಿ ತೆಗೆದುಕೊಂಡು ಬರುತ್ತಾರೆ. ತಂದಂತಹ ನಾಯಿಯನ್ನು ಪ್ರೀತಿಯ ಮಾತುಗಳಲ್ಲಿ ಅನ್ಯೋನ್ಯವಾಗಿ ಹೊಂದಿಕೊಳ್ಳುವಂತೆ ಸಾಕುತ್ತಾರೆ. ಅದಕ್ಕೆ ಬೇಕು ಬೇಡಗಳನ್ನೆಲ್ಲ ನೋಡಿಕೊಂಡು ಅದರ ಪೂರೈಕೆಗಳನ್ನು ಮಾಡಿ ಮನೆಯನ್ನು ಕಾಯುವ ನಿಯತ್ತಿನ ನಾಯಿ ಎಂದು ಅದನ್ನು ಪೋಷಿಸುತ್ತಾರೆ. ಒಟ್ಟಾರೆ ಸಾಕುವಂತಹ ನಾಯಿಯನ್ನು ನಿಯತ್ತಿಗೆ ಹೆಸರೆಂದು ಬಹಳ ಪ್ರೀತಿಯಿಂದ ಸಾಕುತ್ತಾರೆ .




## ಇದು ವಿಶೇಷ ಕಾರ್ತಿಕ ಏಕಾದಶಿ
## ತುಳಸಿ ವಿವಾಹದ ಮಹತ್ವ, ಪೂಜಾ ವಿಧಾನ, ಶುಭ ಮುಹೂರ್ತ

• ಉದಯವಾಹಿನಿ, ಬೆಂಗಳೂರು

ತುಳಸಿ ವಿವಾಹವನ್ನು ವರ್ಷಕ್ಕೊಮ್ಮೆ ನಡೆಸಲಾಗುತ್ತದೆ. ಧಾರ್ಮಿಕ ನಂಬಿಕೆಗಳ ಪ್ರಕಾರ, ಕಾರ್ತಿಕ ಮಾಸದಲ್ಲಿ ತುಳಸಿ ವಿವಾಹ ಪೂಜೆಯನ್ನು ಮಾಡುವುದರಿಂದ ಕುಟುಂಬಕ್ಕೆ ಸಂತೋಷ ಮತ್ತು ಸಮೃದ್ಧಿ ಸಿಗುತ್ತದೆ. ತುಳಸಿ ವಿವಾಹದಲ್ಲಿ, ತುಳಸಿ ಸಸ್ಯದ ಮದುವೆಯನ್ನು ವಿಷ್ಣುವಿನ ಶಾಲಿಗ್ರಾಮ್ ರೂಪದೊಂದಿಗೆ ನಡೆಸಲಾಗುತ್ತದೆ.

ತುಳಸಿ ವಿವಾಹ ಪೂಜೆಯನ್ನು ಮಾಡುವುದರಿಂದ ಮಗಳನ್ನು ಮದುವೆಯಲ್ಲಿ ನೀಡುವಷ್ಟೇ ಪ್ರಯೋಜನಗಳನ್ನು ನೀಡುತ್ತದೆ ಎಂದು ನಂಬಲಾಗಿದೆ. ಈ ವರ್ಷ ತುಳಸಿ ವಿವಾಹ ಯಾವಾಗ ನಡೆಯುತ್ತದೆ, ಶುಭ ಸಮಯ, ಪೂಜಾ ವಿಧಾನ ಮತ್ತು ಸಾಮಗ್ರಿಗಳನ್ನು ಕಂಡುಹಿಡಿಯೋಣ.

ಪಂಚಾಂಗದ ಪ್ರಕಾರ, ನವೆಂಬರ್ 13 ರಂದು ಬರುವ ಕಾರ್ತಿಕ ಮಾಸದ ಶುಕ್ಲ ಪಕ್ಷದ ದ್ವಾದಶಿ ತಿಥಿಯಂದು ತುಳಸಿ ವಿವಾಹ ಪೂಜೆಯನ್ನು ನಡೆಸಲಾಗುತ್ತದೆ. ದ್ವಾದಶಿ ತಿಥಿ ನವೆಂಬರ್ 12 ರಂದು ಸಂಜೆ 04:04 ಕ್ಕೆ ಪ್ರಾರಂಭವಾಗುತ್ತದೆ ಮತ್ತು ನವೆಂಬರ್ 13 ರಂದು ಮಧ್ಯಾಹ್ನ 01:01 ಕ್ಕೆ ಕೊನೆಗೊಳ್ಳುತ್ತದೆ.



> ತುಳಸಿ ವಿವಾಹ ಸಾಮಗ್ರಿಗಳಲ್ಲಿ ಮರದ ವೇದಿಕೆ, ಕುಂಕುಮ, ಹಣ್ಣುಗಳು, ಹೂವುಗಳು, ಶ್ರೀಗಂಧ, ಧೂಪದ್ರವ್ಯ, ತುಪ್ಪದ ದೀಪ, ಸಿಂಧೂರ, ಹೂವಿನ ಹಾರ, ಕೆಂಪು ಸ್ಕಾರ್ಫ್, ಮೇಕಪ್ ವಸ್ತುಗಳು, ಕಬ್ಬು, ಕಲಶ, ಗಂಗಾನದಿಯ ಪವಿತ್ರ ನೀರು, ಮಾವಿನ ಎಲೆಗಳು ಮತ್ತು ಸಿಹಿತಿಂಡಿಗಳು ಇತ್ಯಾದಿಗಳು ಸೇರಿವೆ.

ತುಳಸಿ ವಿವಾಹ ಆಚರಣೆ: ಹಿಂದೂ ಧರ್ಮದಲ್ಲಿ ತುಳಸಿ ಪೂಜೆಗೆ ಹೆಚ್ಚಿನ ಪ್ರಾಮುಖ್ಯತೆ ಇದೆ. ಬ್ರಹ್ಮ ಮುಹೂರ್ತದಲ್ಲಿ ಸ್ನಾನ ಮಾಡಿ ಮತ್ತು ಕೆಂಪು ಅಥವಾ ಹಳದಿ ಬಟ್ಟೆಗಳನ್ನು ಧರಿಸಿ. ಮಂತ್ರಗಳನ್ನು ಪಠಿಸುವಾಗ, ವಿಷ್ಣುವನ್ನು ಪ್ರಾರ್ಥಿಸಿ. ಗೋಧೂಳಿ ವೇಲಾ ಸಮಯದಲ್ಲಿ ಶಾಲಿಗ್ರಾಮ್ ಜೀ ಮತ್ತು ತುಳಸಿಯ ವಿವಾಹ ಸಮಾರಂಭವನ್ನು ನಡೆಸಿ. ಈ ಸಮಯದಲ್ಲಿ, ತುಳಸಿಯನ್ನು 16 ಆಭರಣಗಳಿಂದ ಅಲಂಕರಿಸಿ. ಶಾಲಿಗ್ರಾಮ್ ಜಿ ಅವರಿಗೆ ಶ್ರೀಗಂಧದ ಪೇಸ್ಟ್ ಹಚ್ಚಿ ಮತ್ತು ಅವರಿಗೆ ಹಳದಿ ಉಡುಪನ್ನು ಧರಿಸಿ. ಹೂವುಗಳು, ಹೂಮಾಲೆಗಳು, ಹಣ್ಣುಗಳು, ಪಂಚಾಮೃತ, ಧೂಪದ್ರವ್ಯ, ದೀಪಗಳು, ಪರದೆ ಮತ್ತು ಇತರ ಅಲಂಕಾರಗಳನ್ನು ಅರ್ಪಿಸಿ. ಮನೆಯಲ್ಲಿ ತುಳಸಿ ಗಿಡವನ್ನು ಹೊಂದಿರುವುದು ಶುಭವೆಂದು ಪರಿಗಣಿಸಲಾಗಿದೆ, ಏಕೆಂದರೆ ಇದು ಸಂತೋಷ, ಸಮೃದ್ಧಿ ಮತ್ತು ಲಕ್ಷ್ಮಿ ದೇವಿಯ ಉಪಸ್ಥಿತಿಯನ್ನು ಜೀವನದಲ್ಲಿ ತರುತ್ತದೆ ಎಂದು ನಂಬಲಾಗಿದೆ.

## ಕಣ್ಮನ ಸೆಳೆದ ನೂಪುರ ಧ್ವನಿಯ ನೃತ್ಯೋಲ್ಲಾಸ


ವೈ.ಕೆ. ಸಂಧ್ಯಾಶರ್ಮ
• ಉದಯವಾಹಿನಿ, ವಿಶೇಷ

ಅದೊಂದು ಅಪೂರ್ವ ಸಮ್ಮಿಲನ. ಮುದವಾದ ಸಂಜೆಯಲ್ಲಿ ರಂಗದ ಮೇಲೆ ನರ್ತಿಸುವ ಮುದ್ದಾದ ಹಕ್ಕಿಗಳ ಚಿಲಿಪಿಲಿ ರವ. ಕಣ್ಮನ ಸೂರೆಗೊಂಡ ಸುಂದರ ಹೆಜ್ಜೆ-ಗೆಜ್ಜೆಗಳ ಲಾಸ್ಯದ ರಸಾನುಭವ. ನಿಖರವಾದ ಅಡವುಗಳು, ಅಂಗಶುದ್ದವಾದ ಆಂಗಿಕಾಭಿನಯ, ಮುಗ್ಧ ಮುಖಗಳ ರಮಣೀಯ ಅಭಿನಯ ಬಹು ಆಪ್ಯಾಯಮಾನವಾಗಿ, ಅಚ್ಚುಕಟ್ಟಾಗಿ ಮೂಡಿಬಂತು. ಎಲೆಮರೆಯ ಕಾಯಿಯಂತೆ ನಿಶ್ಶಬ್ದ ನೃತ್ಯ ಸೇವೆಯಲ್ಲಿ ತೊಡಗಿಕೊಂಡಿರುವ ನುರಿತ ನೃತ್ಯ ಕಲಾವಿದೆ- 'ನೂಪುರ ಧ್ವನಿ' ಸಂಸ್ಥೆಯ ಬದ್ಧತೆಯ ನೃತ್ಯಗುರು ವಿದುಷಿ. ಪಾರ್ವತಿ ಬಾಲಕೃಷ್ಣನ್ ಅವರ ಪಳಗಿದ ಗರಡಿಯಲ್ಲಿ ತಯಾರಾದ ಪುಟಾಣಿ ಕಲಾವಿದರು ವಯಸ್ಸಿಗೇ ಮೀರಿದ ನೃತ್ಯ ಸಾಮರ್ಥ್ಯವನ್ನು ಮೆರೆದರು ಎಂದರೆ ಹೊಗಳಿಕೆಯಾಗದು. ಕಾರ್ಯ ಕ್ರಮದ ಉತ್ತಾರಾರ್ಧದಲ್ಲಿ ಗುರು ಪಾರ್ವತಿ ಭಕ್ತಿತಾದಾತ್ಮ್ಯತೆಯ ಕೃತಿಗಳನ್ನು ಪರಕಾಯ ಪ್ರವೇಶ ಮಾಡಿ ಪಾತ್ರದಳೊಂದಾಗಿ ಮನಮೋಹಕವಾಗಿ ನರ್ತಿಸಿದ್ದು ಹೃದಯಸ್ಪರ್ಶಿಯಾಗಿತ್ತು. ನೃತ್ಯ ಪ್ರದರ್ಶನದಲ್ಲಿ ಪ್ರಸ್ತುತಪಡಿಸಿದ ಕೃತಿಗಳ ಆಯ್ಕೆ ಬಹು ಸಮಂಜಸವಾಗಿತ್ತು. ಶುಭಾರಂಭದ 'ತೋಡಯ ಮಂಗಳಂ'- ( ದಂಡಾಯುಧ ಪಾಣಿ ಪಿಳ್ಳೈ ರಚನೆ) ಗುರು-ಹಿರಿಯರಿಗೆ, ದೇವಾನು ದೇವತೆಗಳಿಗೆ ವಂದಿಸುವ ಪ್ರಾರ್ಥನಾ ಕೃತಿ. ಪುಟ್ಟ ಮಕ್ಕಳಾದರೂ ಅವರ ಅಂಗಶುದ್ದ ನರ್ತನ, ಸುಂದರ ಹಸ್ತ ವಿನಿಯೋಗದಿಂದ ಕೂಡಿದ ನೃತ್ತ ನಮನದ ಅಚ್ಚುಕಟ್ಟು ಮತ್ತು ಅಭಿನಯಿಸಿದ 'ಶ್ಲೋಕಮಾಲ'ದ ಪುಟ್ಟ ಶ್ಲೋಕಗಳ ಸಾಕಾರ ಮುದ ನೀಡಿತು. ನಂತರ ಮುತ್ತುಸ್ವಾಮಿ ದೀಕ್ಷಿತರು ರಚಿಸಿದ ಮೀನಾಕ್ಷಿ ದೇವಿಯ ಕುರಿತ ಕೃತಿ ನಯನ ಮನೋಹರವಾಗಿ ಮೂಡಿಬಂತು. ಮುಂದೆ ಚತುರಶ್ರ ಜಾತಿಯ 'ಅಲರಿಪು'- ಹೆಸರಿಗೆ ಅನ್ವರ್ಥಕವಾಗಿ, ನೃತ್ಯದ ಪ್ರಾಥಮಿಕ ಅಂಶಗಳನ್ನು ಒಳಗೊಂಡ ಮುಗುಳು, ಹೂವಿನಂತೆ ಪ್ರಫುಲ್ಲವಾಗಿ ವಿಕಸಿತಗೊಂಡ ನೃತ್ಯಾರ್ಪಣೆ, ಗುರು ಪಾರ್ವತಿ ಅವರ ಸ್ಫುಟವಾದ ನಟುವಾಂಗದಲ್ಲಿ ಮನಮುಟ್ಟಿತು. ಮುಂದಿನ 'ಗಣೇಶ ಪಂಚರತ್ನಂ, ಜತಿಸ್ವರ ತಾಳ-ಲಯಬದ್ಧವಾಗಿ, ಸುಂದರಾಭಿನಯದಲ್ಲಿ ಅರ್ಪಣೆಗೊಂಡಿತು. ಶಿವಕಾಮಿಯ ವರ್ಣನೆಯನ್ನು ಕಣ್ಮುಂದೆ ಕಟ್ಟಿದಂತೆ ಅಭಿನಯಕ್ಕೆ ತೆರೆದುಕೊಂಡ - 'ಚಿನ್ನಂ ಚಿರು ಪೆಣ್ ಪೋಲೆ' ಕೃತಿ ಪಾರ್ವತಿಯವರ ನೃತ್ಯಸಂಯೋಜನೆಯಲ್ಲಿ ಆಕರ್ಷಿಸಿತು. ಮುಂದಿನ ರಸಘಟ್ಟ- 'ಪದವರ್ಣ' ಕಾರ್ಯಕ್ರಮದ ಕೇಂದ್ರ ಬಿಂದುವಾಗಿತ್ತು. ದೀರ್ಘಬಂಧವಾದ 'ವರ್ಣ' ದಲ್ಲಿ ನೃತ್ತ ಸಾಮರ್ಥ್ಯ ಮತ್ತು ಅಭಿನಯ ಪ್ರಾವೀಣ್ಯ ಎರಡೂ ಸಮರಸವಾಗಿ ಬೆರೆತು ನೋಡುಗರ ಕಣ್ಣಿಗೆ ಹಬ್ಬ ನೀಡುತ್ತದೆ ಎಂದರೆ ಅತಿಶಯೋಕ್ತಿಯಲ್ಲ. ಈ ಎರಡೂ ಅಂಶಗಳಲ್ಲಿಯೂ ಪ್ರಭುತ್ವ ಬಯಸುವ ಈ ಕೃತಿಯನ್ನು ಕಲಾವಿದೆ ಪಾರ್ವತಿ ಬಾಲಕೃಷ್ಣನ್ ಬಹು ಪ್ರಬುದ್ಧತೆಯಿಂದ ನಿರ್ವಹಿಸಿದರು.

ಭಕ್ತಿ ತಾದಾತ್ಮ್ಯತೆಯ ಅವರ ರಸಪೂರ್ಣ ಅಭಿನಯ, ಮಿಂಚಿನ ಸಂಚಾರದ ಮನಮೋಹಕ ನೃತ್ತ ಸೌಂದರ್ಯ ನೋಡುಗರನ್ನು ಹಿಡಿದುಕೂರಿಸಿತು. ಷಣ್ಮುಖಪ್ರಿಯ ರಾಗ ಆದಿತಾಳದ, ಡಾ.ಎಂ. ಬಾಲಮುರಳಿಕೃಷ್ಣ ರಚನೆಯ ' ಓಂಕಾರ ಪ್ರಣವನಾದ ಶ್ರುತಿಲಯ' ಶ್ರೀಕೃಷ್ಣನ, ಸೃಷ್ಟಿ-ಸ್ಥಿತಿ-ಲಯಕಾರ ಮಹಾಮಹಿಮನ ವೈಶಿಷ್ಟ್ಯ, ಮಹತ್ವ- ದಿವ್ಯ ರೂಪಗಳನ್ನು ಕಲಾವಿದೆ, ಸುಮನೋಹರವಾಗಿ ತಮ್ಮ ನುರಿತಾಭಿನಯದಿಂದ ಸಾಕ್ಷಾತ್ಕರಿಸಿದ್ದು ಹೃದಯಂಗಮವಾಗಿತ್ತು. ಪಾತ್ರದಲ್ಲಿ ತಲ್ಲೀನತೆ- ಭಕ್ತಿಭಾವದ ಆರ್ದ್ರ ಆಭಿನಯ, ಚೈತನ್ಯಪೂರ್ಣ ನೃತ್ಯದ ಪಲುಕುಗಳು ಸ್ತುತ್ಯಾರ್ಹವಾಗಿದ್ದವು. ಸುಂದರಭಂಗಿಗಳು, ಆಕಾಶಚಾರಿ, ಭ್ರಮರಿ, ನೃತ್ತ ವೈವಿಧ್ಯ ಗಮನಾರ್ಹವಾಗಿದ್ದವು. ಮುಂದೆ- ಕವಿ ಪಾಪನಾಶಂ ಶಿವನ್ 'ನಂಬಿ ಕೆಟ್ಟವರೇವರಯ್ಯ ' ಎಂದು ಪ್ರಶ್ನಿಸಿರುವ ಕೃತಿಯನ್ನು ಅರ್ಥಪೂರ್ಣ ಆಂಗಿಕಾಭಿನಯ- ಪರಿಣಾಮಕಾರಿ ಅಭಿನಯದಲ್ಲಿ ಕಲಾವಿದೆ, ನಂಬಿರುವ ಶಿವನನ್ನು ಬಲವಿದ್ದಾಗ ಸತತ ಭಜಿಸಿ, ಜೀವನ ಸಾರ್ಥಕಪಡಿಸಿಕೊಳ್ಳಿರೆಂಬ ಉತ್ತಮ ಸಂದೇಶವನ್ನು ಬಿತ್ತರಿ ಸಿದರು. ನಯನ ಮನೋಹರವಾದ ರಸಾಭಿನಯ, ಮಾರ್ದವತೆಯಿಂದ ಕೂಡಿದ ಕಲಾವಿದೆಯ ಮನಮುಟ್ಟುವ ಭಾವ ತಲ್ಲಿನತೆಯ ಭಾವ-ಭಂಗಿಗಳು ಅಪ್ತವೆನಿಸಿದವು. ಅಂತ್ಯದಲ್ಲಿ ಭಕ್ತಿ ರಸಾಯನ ಉಣಿಸಿದ ರಾಮ ಭಜನೆ ಬೇರಾವುದೋ ಲೋಕಕ್ಕೆ ಕೊಂಡೊಯ್ದರೆ, ಮನಮೋಹಕ 'ತಿಲ್ಲಾನ' ಕಾರ್ಯಕ್ರಮಕ್ಕೆ ಸುಂದರ ಸಂಪನ್ನತೆಯನ್ನು ನೀಡಿತು. ಅಚ್ಚುಕಟ್ಟಾಗಿ ಮೂಡಿಬಂದ, ಭಕ್ತಿಪ್ರಧಾನ ನೃತ್ಯ ಕಾರ್ಯಕ್ರಮಕ್ಕೆ ತಮ್ಮ ಪೂರಕ ಸಾಂಗತ್ಯದಿಂದ ಕಳೆ ತಂದವರೆಂದರೆ- ಸುಶ್ರಾವ್ಯ ಗಾಯನದಲ್ಲಿ ನಂದಕುಮಾರ್ ಉನ್ನಿಕೃಷ್ಣನ್, ಕರ್ಣಾನಂದ ಮೃದಂಗವಾದನದಲ್ಲಿ ನಾರಾಯಣ ಸ್ವಾಮಿ, ಹೃದಯಂಗಮ ಮುರಳೀ ಗಾನದಲ್ಲಿ ಕಾರ್ತೀಕ್. ಆರ್. ಸಾರ್ಥವಳ್ಳಿ, ಪ್ರೇರಣಾದಾಯಕ ಸೊಗಸಾದ ನಟುವಾಂಗದಲ್ಲಿ ಪಾರ್ವತಿ ಬಾಲಕೃಷ್ಣನ್ ತೇಜಶ್ರೀ ಶ್ರೀನಿವಾಸ್ ಮುಂತಾದವರು.



## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ** ಆರೋಗ್ಯಕ್ಕೆ ಸಂಬಂಧಿಸಿದಂತೆ ನೀವು ತಿನ್ನುವುದರ ಬಗೆಗೆ ಜಾಗರೂಕರಾಗಿರಿ. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ. ಕುಟುಂಬದ ಸದಸ್ಯರ ಅಗತ್ಯಗಳಿಗೆ ಆದ್ಯತೆ ನೀಡಿ.

**ವೃಷಭ** ಸಂಘರ್ಷವು ನಿಮ್ಮ ಅನಾರೋಗ್ಯವನ್ನು ಇನ್ನಷ್ಟು ಹಾಳುಮಾಡಬಹುದಾದ್ದರಿಂದ ಅದನ್ನು ತಪ್ಪಿಸಿ. ನಿಮ್ಮ ತಂದೆ ತಾಯಿಯರಲ್ಲಿ ಯಾರಾದರೂ ಒಬ್ಬರು ಹಣವನ್ನು ಸಂಗ್ರಹಿಸುವ ಬಗ್ಗೆ ಉಪನ್ಯಾಸಗಳನ್ನು ನೀಡಬಹುದು.

**ಮಿಥುನ** ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಧೃತಿಗೆಡಬೇಡಿ ಹಾಗೂ ನಿರೀಕ್ಷಿತ ಫಲಿತಾಂಶ ಪಡೆಯಲು ಕಠಿಣ ಪರಿಶ್ರಮಪಡಿ. ಈ ಹಿನ್ನಡೆಗಳು ನಿಮ್ಮ ಯಶಸ್ಸಿನ ಸೋಪಾನಗಳಾಗಿರಲಿ.

**ಕರ್ಕಾಟಕ** ನಿಮ್ಮ ಜೀವನವನ್ನು ಲಘುವಾಗಿ ತೆಗೆದುಕೊಳ್ಳಬೇಡಿ, ಬದುಕಿನ ರಕ್ಷಣೆ ನಿಜವಾದ ಆಣೆ. ನೀವು ಯಾತ್ರೆಯಲ್ಲಿ ಹೋಗುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ಗಮನ ಹರಿಸಿ ಅವುಗಳನ್ನು ಕಡಿಯುವ ಸಧ್ಯತೆ ಇದೆ.

**ಸಿಂಹ** ನೀವು ವ್ಯಾಯಾಮದ ಮೂಲಕ ನಿಮ್ಮ ತೂಕವನ್ನು ನಿಯಂತ್ರಿಸಬಹುದು. ನಿಮ್ಮ ತಂತ್ರಗಳನ್ನು ಅಳವಡಿಸಿದಲ್ಲಿ ಇಂದು ಸ್ವಲ್ಪ ಹೆಚ್ಚುವರಿ ಹಣ ಸಂಪಾದಿಸುತ್ತೀರಿ. ಮನೆಯ ಸುಧಾರಣೆಯ ಯೋಜನೆಗಳನ್ನು ಪರಿಗಣಿಸಬೇಕು.

**ಕನ್ಯಾ** ನಿಮ್ಮ ಸಿಹಿಯಾದ ಪ್ರೀತಿಯ ಜೀವನದಲ್ಲಿನ ಉತ್ಕಟತೆಯನ್ನು ಆನಂದಿಸುತ್ತೀರಿ. ನೀವು ಯಾವುದೊ ಹೊಸ ಪುಸ್ತಕವನ್ನು ಖರೀದಿಸಿ, ಯಾವುದೇ ಕೊಠಡಿಯಲ್ಲಿ ಸ್ವತಃ ಲಾಕ್ ಮಾಡಿ ಇಡೀ ದಿನವನ್ನು ಕಳೆಯಬಹುದು.

**ತುಲಾ** ಆರೋಗ್ಯ ಪರಿಪೂರ್ಣವಾಗಿರುತ್ತದೆ. ಇಂದು ಹಣಕಾಸಿನ ಭಾಗವು ಉತ್ತಮವಾಗಿರುತ್ತದೆ ಆದರೆ ಇದರೊಂದಿಗೆ ನೀವು ನಿಮ್ಮ ಹಣವನ್ನು ವ್ಯರ್ಥವಾಗಿ ಖರ್ಚು ಮಾಡದಂತೆ ನೋಡಿಕೊಳ್ಳಬೇಕು.

**ವೃಶ್ಚಿಕ** ನೀವು ನಿಮ್ಮ ಪ್ರಯತ್ನಗಳ ಮೇಲೆ ಗಮನ ಹರಿಸಬೇಕು. ಕೆಲಸದ ಪ್ರದೇಶದಲ್ಲಿ ಯಾವುದೇ ಕೆಲಸ ಸಿಲುಕಿ ಕೊಂಡಿರುವ ಕಾರಣದಿಂದಾಗಿ ಇಂದು ನಿಮ್ಮ ಸಂಜೆಯ ಅಮೂಲ್ಯವಾದ ಸಮಯ ಹದಗೆಡಬಹುದು.

**ಧನಸ್ಸು** ನಿಮ್ಮ ಮಾರ್ಗದಲ್ಲಿ ಆಫೀಸಿನ ಕೆಲಸದಲ್ಲಿ ಗುಣಮಟ್ಟದ ಸುಧಾರಣೆಯನ್ನು ಅನುಭವಿಸುತ್ತೀರಿ. ಪ್ರಯಾಣ ಹೊಸ ಸ್ಥಳಗಳನ್ನು ನೋಡಲು ಮತ್ತು ಪ್ರಮುಖರನ್ನು ಭೇಟಿಯಾಗಲು ನಿಮಗೆ ಅವಕಾಶ ನೀಡುತ್ತದೆ.

**ಮಕರ** ನಿಮ್ಮ ಜೀವನವನ್ನು ಲಘುವಾಗಿ ತೆಗೆದುಕೊಳ್ಳಬೇಡಿ ನೆನಪಿಡಿ, ಬದುಕಿನ ರಕ್ಷಣೆ ನಿಜವಾದ ಆಣೆ. ಆಸ್ತಿ ವ್ಯವಹಾರಗಳು ಅಸಾಧಾರಣ ಲಾಭ ತರುತ್ತವೆ. ವೈಯಕ್ತಿಕ ವಿಷಯಗಳನ್ನು ಬಗೆಹರಿಸುವಲ್ಲಿ ಉದಾರತೆ ತೋರಿ.

**ಕುಂಭ** ಇಂದು ನಿಮ್ಮ ವ್ಯಕ್ತಿತ್ವ ಒಂದು ಸುಗಂಧದಂತೆ ಕೆಲಸ ಮಾಡುತ್ತದೆ. ನೀವು ಇಂದು ಹಣ ಉಳಿಸುವುದು ಕಷ್ಟ. ನೀವು ಇಂದು ಅತಿಯಾಗಿ ಖರ್ಚು ಮಾಡುವ ಅಥವಾ ನಿಮ್ಮ ಪರ್ಸ್ ಕಳೆದುಕೊಳ್ಳುವ ಸಾಧ್ಯತೆಗಳಿವೆ.

**ಮೀನ** ಸಂಗಾತಿಯು ಸಂತೋಷ ನೀಡಲು ಪ್ರಯತ್ನ ಮಾಡಿದಾಗಿನ ಪೂರ್ಣ ಸಂತೋಷದ ಒಂದು ದಿನ. ಸಹಭಾಗಿತ್ವ ಯೋಜನೆಗಳು ಲಾಭಕ್ಕಿಂತ ಹೆಚ್ಚಾಗಿ ಸಮಸ್ಯೆಗಳನ್ನು ಸೃಷ್ಟಿಸುತ್ತವೆ.

# ವಕ್ಫ್ ಹಠಾವ್ರೋ ದೇಶ ಬಚಾವ್ರೋ: ಸರ್ಕಾರದ ವಿರುದ್ಧ ಘೋಷಣೆ

## • ವಿಹೆಚ್‌ಪಿ ಭಜರಂಗದಳ ,ರೈತ, ಮಾಜಿ ಸೈನಿಕರ ಸಂಘದಿಂದ ರಸ್ತಾ ರೋಖೋ ಚಳುವಳಿ


• ಉದಯವಾಹಿನಿ ಮುದ್ದೇಬಿಹಾಳ

ಮುದ್ದೇಬಿಹಾಳ ಪಟ್ಟಣದ ತಹಶಿಲ್ದಾರ ಕಚೇರಿಯ ಆವರಣದಲ್ಲಿ ಕುಂಟೋಜಿ,ಬಿದರಕುಂದಿ ರೈತರ ಜಮೀನುನಲ್ಲಿ ವಕ್ಪ ಹೆಸರು ನಮೂದು ಹಿನ್ನೆಲೆ ನಡೆಯುತ್ತಿರುವ ರೈತರ ಹೋರಾಟಕ್ಕೆ ವಿಶ್ವ ಹಿಂದೂ ಪರಿಷತ್ತು ,ಭಜರಂಗದಳ ,ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಮಾಜಿ ಸೈನಿಕ ಸಂಘದಿಂದ ರೈತರ ಹಾಗೂ ಸಾರ್ವಜನಿಕರ ಆಸ್ತಿ ಉಳುವಿಗಾಗಿ ರಸ್ತಾ ರೋಖೋ ಚಳುವಳಿಯನ್ನು ಅಂಬೇಡ್ಕರ್ ವೃತ್ತ ಹಾಗೂ ಬಸವೇಶ್ವರ ವೃತ್ತದಲ್ಲಿ ಚಕ್ಕಡಿ ಗಾಡಿ ಸಮೇತ ರಸ್ತೆ ಬಂದ್ ಮಾಡಿ ರೈತರ ಜಮೀನು ಉತಾರೆಯಲ್ಲಿಯ ವಕ್ಪ ಬೋರ್ಡ್ ಹೆಸರನ್ನು ತಗೆದು ಹಾಕುವಂತೆ ಕಾಂಗ್ರೆಸ್ ಸರ್ಕಾರದ ವಿರುದ್ಧ ಘೋಷಣೆ ಕೋಗಿ ಎರಡು ವೃತ್ತದಲ್ಲಿ ರಸ್ತೆ ತಡೆ ಮಾಡಿ ಪ್ರತಿಭಟಿಸಿದರು

ತಹಶಿಲ್ದಾರ ಕಚೇರಿಯ ಆವರಣದಲ್ಲಿ ನಡೆಯುತ್ತಿರುವ ರೈತರ ಹೋರಾಟಕ್ಕೆ ಬೆಂಬಲಿಸಿ ವಿಶ್ವ ಹಿಂದೂ ಪರಿಷತ್ತಿನ ಶಿವಯೋಗಪ್ಪ ರಾಂಪೂರ, ಮಾಜಿ ಸೈನಿಕರ ಸಂಘದ ಪಿ ಜಿ ಬಿರಾದಾರ, ಬಿಜೆಪಿ ಹಿರಿಯ ಮುಖಂಡ ಪ್ರಭು ಕಡಿ ,ರೈತ ಸಂಘದ ಸಂಗಣ್ಣ ಬಿರಾದಾರ, ವೈ ಎಲ್ ಬಿರಾದಾರ, ಮಾಜಿ ಸೈನಿಕ ನಾಗಲಿಂಗಯ್ಯ ಮಠ ಮಾತನಾಡಿ ವಕ್ಪ ಹೆಸರಿನಲ್ಲಿ ರಾಜ್ಯ ಕಾಂಗ್ರೇಸ್ ಸರಕಾರ ರೈತರ ಜಮೀನಲ್ಲಿ ವಕ್ಪ ಹೆಸರನ್ನು ನಮೂದಿಸಿ ರೈತರನ್ನು ಒಕ್ಕಲಭಿಸುತ್ತಿದೆ ರೈತರ ಜಮೀನು ಪಹಣಿಯಲ್ಲಿ ದಾಖಲಾಗಿರುವ ವಕ್ಪ್ ಬೋರ್ಡ್ ಕರ್ನಾಟಕ ಸರಕಾರ ಎನ್ನುವುದು ತಗೆದುಹಾಕಬೇಕು .

**ಇವರಿಗೆಲ್ಲಾ ಕ್ಷಮೆ ಇದೆಯಾ?**

**ರಾಜ್ಯಾದೆಲ್ಲಡೆ ಸಮಸ್ಯೆಗೆ ಕಾರಣವಾಗಿರುವ ವಕ್ಪ್ ಕಾಯಿದೆಯನ್ನು ರದ್ದುಗೊಳಿಸಬೇಕು ತಲೆ ತಲಾಂತರದಿಂದ ಬಂದ ರೈತರ ಆಸ್ತಿ ಮಠ ಮಾನ್ಯಗಳು ಸರಕಾರಿ ಕಚೇರಿ ಶಾಲೆಗಳನ್ನು ಬಿಟ್ಟು ಕೊಡುವ ಪ್ರಶ್ನೆಯೇ ಇಲ್ಲವೆಂದು ಆಕ್ರೋಶ ವ್ಯಕ್ತಪಡಿಸಿದರು ಮತ್ತು ರೈತರ ಪಹಣಿಯಲ್ಲಿಯ ವಕ್ಪ ಹೆಸರನ್ನು ತಗೆಯಲು ಸರಕಾರ ಆದೇಶ ನೀಡಿದೆ ಆದರೆ ಇನ್ನೂ ತೆಗೆದಿಲ್ಲ ತಗೆದು ಹಾಕುವವರಗೆ ನಮ್ಮ ಹೋರಾಟ ನಿಲ್ಲುವುದಿಲ್ಲವೆಂದು ಕಾಂಗ್ರೇಸ್ ಸರ್ಕಾರದ ವಿರುದ್ಧ ಸಿಎಂ ವಿರುದ್ಧ ಕಿಡಿಕಾರಿದರು.**


ಉದಯವಾಹಿನಿ ಚಿತ್ರ

ರೈತಪರ ಹೋರಾಟಗಾರರಿಂದ ಮನವಿಯನ್ನು ಸ್ವೀಕರಿಸಿ ಮಾತನಾಡಿದ ತಹಶಿಲ್ದಾರ ಬಲರಾಮ ಕಟ್ಟಿಮನಿ ಸರ್ಕಾರದ ಆದೇಶದಂತೆ ನ 20 ವರಗೆ ಪರಿಶೀಲನೆ ನಡೆಸಿ ನಂತರ ಸಮಸ್ಯೆ ಪರಿಹರಿಸಲಾಗುತ್ತದೆ ಎಂದು ತಿಳಿಸಿದಾಗ ಇದಕ್ಕೆ ಒಪ್ಪದ ರೈತರು ಈಗಲೇ ಸಮಸ್ಯೆ ಬಗೆಹರಿಸುವಂತೆ ಪಟ್ಟು ಹಿಡಿದರು ಈ ವೇಳೆ ರೈತ ಮುಖಂಡರಾದ ಗುರಸಂಗಪ್ಪಗೌಡ ಹಂಡರಗಲ್ಲ, ಕುಲಸುಂಬಿ ಬಾಗೇವಾಡಿ, ಮಹಾದೇವಿ ಕೋಳೂರ ತಹಶಿಲ್ದಾರರೊಂದಿಗೆ ಮಾತಿನ ಚಕಮಕಿ ನಡೆಸಿದರು ನಮ್ಮ ಪಹಣಿಯಲ್ಲಿ ನಮ್ಮನ್ನು ಕೇಳದೆ ಯಾವ ದಾಖಲೆಯನ್ನು ಪಡೆಯದೆ ವಕ್ಪ ಹೆಸರು ದಾಖಲಿಸಿದಂತೆ ನಮ್ಮನ್ನು ಏನು ಕೇಳದೆ ವಕ್ಪ ಹೆಸರನ್ನು ತೆಗೆಯಬೇಕು ಇಲ್ಲವಾದರೆ ನಮ್ಮ ಪ್ರಾಣ ಹೋದರು ಪ್ರತಿಭಟನೆ ಕೈ ಬಿಡುವುದಿಲ್ಲ ತಹಶಿಲ್ದಾರ ಕಚೇರಿಗೆ ಬೀಗ ಹಾಕುವುದಾಗಿ ಎಚ್ಚರಿಕೆ ನೀಡಿದರು .

**ರೈತರ ಆಕ್ರೋಶಕ್ಕೆ ಮಣಿದ ತಹಶಿಲ್ದಾರ ನ 16 ಒಳಗೆ ಸಮಸ್ಯೆ ಇತ್ಯರ್ಥಗೂಳಿಸುವುದಾಗಿ ಸಮಾಧಾನ ಪಡಿಸಿ ನಾವು ರೈತರ ಪರವಾಗಿ ಇದ್ದೇವೆ ಸಂಪೂರ್ಣ ಸಹಕಾರ ನೀಡುವುದಾಗಿ ಹೇಳಿದ ಹಿನ್ನೆಲೆ ರೈತರ ಧರಣಿ ಸತ್ಯಾಗ್ರಹ ತಾತ್ಕಾಲಿಕವಾಗಿ ನೆ 16.ವರಗೆ ಹಿಂಪಡೆದು ಅಂತ್ಯಗೂಳಿಸಲಾಯಿತು.**

**ರಸ್ತೆ ಬಂದ್ ಮಾಡಿ ಆಕ್ರೋಶ**

ಈ ವೇಳೆ ಗುರುಲಿಂಗಪ್ಪ ಸುಳ್ಳೂಳ್ಳಿ, ಮಾಜಿ ಸೈನಿಕ ಸಂಘದ ಅಧ್ಯಕ್ಷ ನಾನಪ್ಪ ನಾಯಕ, ಅಯ್ಯಣ್ಣ ಬಿದರಕುಂದಿ, ಬಿಜೆಪಿ ಮಂಡಲ ಅಧ್ಯಕ್ಷ ಜಗದೀಶ್ ಪಂಪಣ್ಣನವರ, ಬಸಯ್ಯ ನಂದಿಕೇಶ್ವರಮಠ, ಉದಯಸಿಂಗ್ ರಾಯಚೂರು, ಸಂಜಯ ಬಾಗೇವಾಡಿ, ಶ್ರೀಶೈಲ್ ದೂಡಮನಿ, ವಿಕ್ರಮ ಓಸ್ವಾಲ್ ಮಾಣಿಕಚಂದ ದಂಡಾವತಿ, ಡಾ.ವಿರೇಶ ಪಾಟೀಲ್, ರವಿ ಜಗಲಿ, ಪುನಿತ್ ಹಿಪ್ಪರಗಿ, ರವೀಂದ್ರ ಬಿರಾದಾರ ಗಿರೀಶಗೌಡ ಪಾಟೀಲ್ ನಾಲತವಾಡ, ಗಿರೀಶಗೌಡ ಪಾಟೀಲ್ ಮುರಾಳ, ಸಂಗಮೇಶ ಹತ್ತಿ, ಹಣಮಂತ ಕಲ್ಯಾಣಿ, ನಾಗೇಶ ಕವಡಿಮಟ್ಟಿ ಪ್ರವೀಣ ಚಿನಿವಾರ ಸಂತೋಷ ಬಾದರಬಂಡಿ, ಅಶೋಕ ರಾಠೋಡ, ಬಿಜೆಪಿ ಮಹಿಳಾ ಘಟಕದ ಪ್ರೀತಿ ಕಂಬಾರ,ಕಾವೇರಿ ಕಂಬಾರ, ರೇಖಾ ಕೊಂಡಗೂಳಿ, ರೈತರಾದ ಗುರಂಗಪ್ಪಗೌಡ ಹಂಡರಗಲ್,ಸೇರಿದಂತೆ ವಿ ಹೆಚ್ ಪಿ ಭಜರಂಗದಳ, ಮಾಜಿ ಸೈನಿಕರ, ರೈತ ಸಂಘದ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು

ಸಿಪಿಐ ಮಲ್ಲಿಕಾರ್ಜುನ ತುಳಸಿಗೇರಿ, ಪಿಎಸೈಗಳಾದ ಸಂಜಯ ತಿಪ್ಪರೆಡ್ಡಿ, ಆರ್ ಎಲ್ ಮನ್ನಾಬಾಯಿ ಸೇರಿದಂತೆ ಸ್ಥಳೀಯ ಪೂಲೀಸ ಸಿಬ್ಬಂದಿ ಬಂದೂಬಸ್ತ ಒದಗಿಸಿದ್ದರು.

# ಕೆಓಎಫ್ ರಾಜ್ಯ ಅಧ್ಯಕ್ಷರಾಗಿ ನಾಡಗೌಡ ಆಯ್ಕೆ

• ಉದಯವಾಹಿನಿ, ಸಿಂಧನೂರು

ಕೆಓಎಫ್ ರಾಜ್ಯ ಅದ್ಯಕ್ಷರಾಗಿ ವೆಂಕಟರಾವ್ ನಾಡಗೌಡ ಅವರು ಮತ್ತೊಮ್ಮೆ ಮರು ಆಯ್ಕೆಯಾಗಿದ್ದಾರೆ ಈ ಹಿನ್ನೆಯಲ್ಲಿ ಮಾಜಿ ನಾಡಗೌಡ ಅವರು ಅಭಿಮಾನಿಗಳು ಸಿಹಿ ಹಂಚಿ ಸಂಭ್ರಮ ಸಡಗರದಿಂದ ಹರ್ಷವನ್ನು ವ್ಯಕ್ತಪಡಿಸಿದರು.

ಮಾಜಿ ಸಚಿವ ವೆಂಕಟರಾವ್ ನಾಡಗೌಡ ಅವರು ಕರ್ನಾಟಕ ರಾಜ್ಯ ಎಣ್ಣೆ ಬೀಜ ಬೆಳೆಗಾರರ ಮಂಡಳಿಯಲ್ಲಿ ನಡೆದ ಅಧ್ಯಕ್ಷರು ಚುನಾವಣೆಯಲ್ಲಿ ಮತ್ತೆ ನಾಡ ಗೌಡ ನಾಮ ಪತ್ರ ಸಲ್ಲಿಸಿದರು ಇವರು ವಿರುದ್ಧವಾಗಿ ಯಾರು ಸಹ ನಾಮ ಪತ್ರ ಸಲ್ಲಿಸಿರುವುದು ಹಾಗಾಗಿ ಮತೊಮ್ಮೆ ಅ ವಿರೋಧವಾಗಿ ಕೆಓಎಫ್ ರಾಜ್ಯ ಅಧ್ಯಕ್ಷರಾಗಿವಾಗಿ ಆಯ್ಕೆಯಾದರು .

ಎಂದು ಅವರು ಧರ್ಮ ಪತ್ನಿ ಹಾಗೂ ಜೆಡಿಎಸ್ ಪಕ್ಷದ ಹಿರಿಯ ಮುಖಂಡರು ಕಾರ್ಯಕರ್ತರು ಕೆಓಎಫ್ ನಿರ್ದೇಶಕರಾದ ವೆಂಕಟರಾವ್ ನಾಡಗೌಡ ಅವರನ್ನು ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ. ಜೆಡಿಎಸ್ ಪಕ್ಷದ ರಾಜ್ಯಾಧ್ಯಕ್ಷ ಮಹಾಂತೇಶ ಪಾಟೀಲ, ವೆಂಕಟೇಶ್ ನಂಜಲದಿನ್ನಿ, ನಾಗೇಶ್ ಹಂಚಿನಾಳ, ಧರ್ಮನಗೌಡ ಮಲ್ಕಾಪುರ್ ಅಜಯ್ ನಾಡಗೌಡ ಅರ್ಜುನ್ ನಾಡಗೌಡ ಅಸೇಪ್ ಸಿಂಧನೂರು. ಸೈಯದ್ ಬಾಬು ಸೇರಿದಂತೆ ಇತರರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

# ಅಕ್ರಮ ಮರಳು ದಂಧೆ ತಡೆಗಟ್ಟಲು ಆಗ್ರಹ

• ಉದಯವಾಹಿನಿ, ಲಕ್ಷ್ಮೇಶ್ವರ

ತಾಲ್ಲೂಕು ವ್ಯಾಪ್ತಿಯ ಅಕ್ಕಿಗುಂದ, ಬಟ್ಟೂರು, ಅಮರಾಪೂರ, ಹುಲ್ಲೂರು, ಅದರಹಳ್ಳಿ, ಕೋಗನೂರು ಗ್ರಾಮಗಳಲ್ಲಿ ಅಕ್ರಮ ಮರಳು ದಂಧೆ ಅವ್ಯಾಹತವಾಗಿ ನಡೆಯುತ್ತಿದ್ದು ಅದಕ್ಕೆ ಕಡಿವಾಣ ಹಾಕಬೇಕು ಎಂದು ಆಗ್ರಹಿಸಿ ಸೋಮವಾರ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ಜಿಲ್ಲಾಧ್ಯಕ್ಷ ಶರಣು ಗೋಡಿ ನೇತೃತ್ವದಲ್ಲಿ ಕಾರ್ಯಕರ್ತರು ತಹಶೀಲ್ದಾರ್ ವಾಸುದೇವ ಸ್ವಾಮಿ ಅವರಿಗೆ ಮನವಿ ಸಲ್ಲಿಸಿದರು.

ಕೆಲವರು ಟಿಪ್ಪರ್ ಮತ್ತು ಲಾರಿಗಳ ದೂರ ದೂರದ ಊರುಗಳಿಗೆ ಪಾಸ್ ತೆಗೆದು ಕೊಂಡು ಒಂದೇ ಪಾಸು ಪಡೆದು ತಮಗೆ ಎಲ್ಲಿ ಬೇಕೆಂದಲ್ಲಿ ಮರಳನ್ನು ತುಂಬಿ ಕೊಂಡು ಅದೇ ಪಾಸ್‌ನಲ್ಲಿ ನಾಲ್ಕೈದು ಟ್ರಿಪ್ ಮರಳು ಸಾಗಾಟ ಮಾಡುತ್ತಿದ್ದಾರೆ. ಟ್ರ್ಯಾಕ್ಟರ್ ಗಳಲ್ಲಿ ಅಕ್ರಮ ಮರಳು ಸಾಗಾಣಿಕೆ ಅವ್ಯಾಹತವಾಗಿ ನಡೆದಿದ್ದು ಇದರಿಂದಾಗಿ ರಾಜ್ಯ ಸರ್ಕಾರದ ಬೊಕ್ಕಸಕ್ಕೆ ನಷ್ಟವಾಗುತ್ತಿದೆ' ಎಂದು ಆರೋಪಿಸಿದರು.



ಉದಯವಾಹಿನಿ ಚಿತ್ರ

**ಸರ್ಕಾರದ ಬೊಕ್ಕಸಕ್ಕೆ ನಷ್ಟ**

**ಲಾರಿ ಮತ್ತು ಟಿಪ್ಪರ್‌ಗಳಿಗೆ ಜಿಪಿಎಸ್ ಇದ್ದರೂ ನಂಬಂಧಪಟ್ಟ ಇಲಾಖೆಯ ಕಣ್ಣು ತಪ್ಪಿಸಿ ಜಿಪಿಎಸ್ ಬಂದ್ ಮಾಡಿ ಮರಳು ಗುತ್ತಿಗೆದಾರರ ಜೊತೆ ಹೊಂದಾಣಿಕೆಯಾಗಿ ಸಕ್ರಮದ ಜೊತೆ ಅಕ್ರಮ ಮರಳು ಸಾಗಾಣಿ ಮಾಡಿ ಸರ್ಕಾರಕ್ಕೆ ನಷ್ಟ ಮಾಡುತ್ತಿದ್ದಾರೆ. ಮರಳು ದಂಧೆಕೋರರ ಮೇಲೆ ಸೂಕ್ತ ಕಾನೂನುಕ್ರಮ ಒಂದು ವಾರದೊಳಗೆ ಜರುಗಿಸಬೇಕು. ಇಲ್ಲದಿದ್ದರೆ ಉಗ್ರ ಹೋರಾಟ ಹಮ್ಮಿಕೊಳ್ಳಗುವುದು**

**-ನಾಗೇಶ ಅಮರಾಪುರ,**
**ತಾಲ್ಲೂಕು ಘಟಕದ ಅಧ್ಯಕ್ಷ**

# ಕನ್ನಡಕ್ಕೆ ಹಾಗೂ ಕನ್ನಡ ನಾಡಿಗೆ ಕುವೆಂಪು ಕೊಡುಗೆ ಅಪಾರ

• ಉದಯವಾಹಿನಿ, ಚಿತ್ರದುರ್ಗ

ಕನ್ನಡಕ್ಕೆ, ಕನ್ನಡ ನಾಡಿಗೆ ಕುವೆಂಪು ನೀಡಿದ ಕೊಡುಗೆ ಅಪಾರ ಎಂದು ಖ್ಯಾತ ಅಂಕಣಕಾರ ಹಾಗೂ ಸಾಹಿತಿ ಹೆಚ್.ಅನಂತಕುಮಾರ್ ಹೇಳಿದರು.

ಕಣಿವೆ ಮಾರಮ್ಮ ಸಂಘ ಹಾಗೂ ನಗರ ಕೇಂದ್ರ ಗ್ರಂಥಾಲಯ ವತಿಯಿಂದ ಸೋಮವಾರ ನಗರದ ಮಕ್ಕಳ ಗ್ರಂಥಾಲಯ ಸಭಾಂಗಣದಲ್ಲಿ ಕುವೆಂಪು ನುಡಿ ನಮನ ಸಂಸ್ಮರಣೆ ಕಾರ್ಯಕ್ರಮದಲ್ಲಿ ಕುವೆಂಪು ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು.

ಕುವೆಂಪು ಹಲವು ಮೊದಲುಗಳಿಗೆ ಸಾಕ್ಷಿ ಪ್ರಜ್ಞೆಯಾಗಿ ಕನ್ನಡದ ಅಸ್ತಿತ್ವದ ಅನನ್ಯತೆಯ ಹಿಮಾಲಯ ಸದೃಶ ವ್ಯಕ್ತಿ. ಅಷ್ಟೇ ಅಲ್ಲದೇ ಈ ನಾಡಿನ ಶಕ್ತಿ. ತಮ್ಮ ವೈಚಾರಿಕ ಬರಹ ಮತ್ತು ಚಿಂತನೆಗಳೊಂದಿಗೆ ನೆಲಮೂಲ ಸಂಸ್ಕೃತಿಯ ಆಶಯಗಳನ್ನು ಮುನ್ನಲೆಯಾಗಿಸಿಕೊಂಡು ಶೋಷಿತರ, ದಮನಿತರ ಪರವಾದ ಬರವಣಿಗೆಯ ಮೂಲಕ ಗಟ್ಟಿದನಿಯಾದವರು ಕುವೆಂಪು. ಅವರ ಗೊಬ್ಬರ ಕವಿತೆ ಇದಕ್ಕೆ ಸಾಕ್ಷಿ ಎಂದರು.


ಉದಯವಾಹಿನಿ ಚಿತ್ರ

ಪರಿಸರ ಪ್ರೇಮಿ ಮಾಸ್ಟರ್ ಮಲ್ಲಿಕಾರ್ಜುನ್ ಮಾತನಾಡಿ, ಅತಿರಥ ಮಹಾಶಯ ಕವಿಗಳಲ್ಲಿ ಶ್ರೇಷ್ಠರು. ಕನ್ನಡಕ್ಕೆ ಮೊದಲ ಜ್ಞಾನಪೀಠ ಪ್ರಶಸ್ತಿ ತಂದುಕೊಟ್ಟ ಕವಿ ಪುಣ್ಯರು. ಮಲೆನಾಡಿನ ಅಪಾರವಾದ ಪ್ರಕೃತಿ ಸಾಂಗತ್ಯದಲ್ಲಿ ಬೆಳೆದು ಪ್ರೇರೇಪಿತರಾಗಿ ರಸ ಋಷಿಯಾದರು. ಕನ್ನಡಕ್ಕಾಗಿ ಕೈ ಎತ್ತು ನಿನ್ನ ಕೈ ಕಲ್ಪವೃಕ್ಷವಾಗುತ್ತದೆ. ಎಲ್ಲೇ ಇರು ಹೇಗೆ ಇರು ಕನ್ನಡಕ್ಕಾಗಿ ಹೋರಾಡು. ಹಲವಾರು ಕವನಗಳ ಮೂಲಕ ಹುರಿದುಂಬಿಸಿದರು. ಅವರು ರಚಿಸಿದ ಕಾವ್ಯ, ಕಥೆ, ಕವನ, ಕಾದಂಬರಿ, ಕೃತಿಗಳು ಇಂದಿಗೂ ಶ್ರೇಷ್ಠ ಎಂದರು. ಪ್ರಾರ್ಥನೆ ಜನಪದ ಸಾಹಿತಿ ಪ್ಯಾರೇಜಾನ್, ಕನ್ನಡ ಸ್ವರಚಿತ ಸ್ವರ ಗೀತೆಯನ್ನು ಹಾಡಿದರು. ಪ್ರಸಾರ ಭಾರತಿ ಆಕಾಶವಾಣಿಯ ಡಾ.ನವೀನ್ ಮಸ್ಕಲ್ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮದ ಆಯೋಜಕರು ಹಾಗೂ ಕಣಿವೆ ಮಾರಮ್ಮ ಸಂಘದ ಅಧ್ಯಕ್ಷ ತಿಪ್ಪೇಸ್ವಾಮಿ, ಪ್ರಹ್ಲಾದ್, ಮಾಜಿ ಜಿ.ಪಂ.ಉಪಾಧ್ಯಕ್ಷ ಕೆ. ಪಾಪಯ್ಯ ಮತ್ತಿತರು ಉಪಸ್ಥಿತರಿದ್ದರು.

**ಯುಗದ ಕವಿ, ಜಗದ ಕವಿ, ವಿಶ್ವ ಮಾನವ ಸಂದೇಶ ಸಾರಿದ ಮಹಾನ್ ಚೇತನ ಕುವೆಂಪು. ಇಂದಿನ ಯುವ ಪೀಳಿಗೆ ಸುಖಾ ಸುಮ್ಮನೆ ಕಾಲಹರಣ ಮಾಡದೇ, ಇಂತಹ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಮೂಲಕ ಮಹಾನ್ ವ್ಯಕ್ತಿಗಳ ಜೀವನ, ಸಾಧನೆ ಆದರ್ಶಗಳನ್ನು ಜೀವನದಲ್ಲಿ ಮೈಗೂಡಿಸಿಕೊಳ್ಳಬೇಕು. ಯಾರ ಜೊತೆ, ಯಾವ ಪುಸ್ತಕಗಳ ಜೊತೆ ಸಾಂಗತ್ಯ ಬೆಳೆಸಿ ಒಡನಾಡಿಗಳಾಗುತ್ತೇವೆಯೋ ಅದೇ ರೀತಿ ನಮ್ಮ ಮನಸ್ಸು ಮತ್ತು ನಾವು ಬೆಳೆಯಲು ನಿದರ್ಶನವಾಗುತ್ತದೆ**

**-ಬಸವರಾಜ್ ಕೊಳ್ಳಿ,**
**ಮುಖ್ಯ ಗ್ರಂಥಾಲಯದಿಕಾರಿ**

# ಆಜಾದ್ ಉರ್ದುವಿನಲ್ಲಿ ಕವನಗಳು ರಚಿಸಿ ಧರ್ಮ ಮತ್ತು ತತ್ತ್ವಶಾಸ್ತ್ರದ ಗ್ರಂಥಗಳ ರಚನೆ

• ಉದಯವಾಹಿನಿ, ಚಿಂಚೋಳಿ

ಡಾ.ಮೌಲಾನಾ ಅಬುಲ್ ಕಲಾಂ ಅಜಾದ್ ಅವರು ಭಾರತದ ಮೊದಲ ಶಿಕ್ಷಣ ಮಂತ್ರಿಯಾಗಿದ್ದರು,ಆಜಾದ್ ಉರ್ದುವಿನಲ್ಲಿ ಕವನಗಳನ್ನು ರಚಿಸಿ ಜೋತೆಗೆ ಧರ್ಮ ಮತ್ತು ತತ್ತ್ವ ಶಾಸ್ತ್ರದ ಗ್ರಂಥಗಳನ್ನು ರಚನೆ ಮಾಡಿದರು ಎಂದು ಕರ್ನಾಟಕ ಪಬ್ಲಿಕ್ ಶಾಲೆಯ ಗುರುಗಳಾದ ನುಸರತ್ ಮೋಹಿಯೋದ್ದೀನ್ ಹೇಳಿದರು. ಪಟ್ಟಣದ ಚಂದಾಪೂರದ ಕೆಪಿಎಸ್ ಶಾಲೆಯಲ್ಲಿ ಸೋಮವಾರ ಡಾ.ಮೌಲಾನಾ ಅಬ್ದುಲ್ ಕಲಾಂ ಆಜಾದ್‌ರವರ ಜಯಂತ್ಯೋತ್ಸವ ಆಚರಿಸಿ ಮಾತನಾಡಿದ ಅವರು,ಆಜಾದರವರು ಪತ್ರಕರ್ತರಾಗಿ ತಮ್ಮ ಕೆಲಸದ ಮೂಲಕ ಪ್ರಾಮುಖ್ಯತೆಗೆ ಸಾಗಿ ಬ್ರಿಟಿಷ್‌ರನ್ನು ಟೀಕಿಸುವ ಕೃತಿಗಳನ್ನು ಪ್ರಕಟಿಸುತ್ತಿದರು. ಆಜಾದ್ ರವರು ಮಹಾತ್ಮ ಗಾಂಧೀಜಿಯವ ರೊಂದಿಗೆ ನಿಕಟ ಸಂಪರ್ಕ ಹೊಂದಿದರು,1919ರಲ್ಲಿ ರೌಲಟ್ ಕಾಯಿದೆಗಳನ್ನು ವಿರೋಧಿಸಿ ಅಸಹಕಾರ ಚಳುವಳಿಯನ್ನು ಸಂಘಟಿಸಲು ಕೆಲಸ ಮಾಡಿದವರು,ಸ್ವದೇಶಿ ಉತ್ಪನ್ನಗಳನ್ನು ಉತ್ತೇಜಿಸುವುದು ಮತ್ತು ಭಾರತಕ್ಕೆ ಸ್ವರಾಜ್ ಸೇರಿದಂತೆ ಗಾಂಧಿಯವರ ಆದರ್ಶಗಳಿಗೆ ಆಜಾದ್ ಬದ್ಧರಾಗಿದ್ದರು ಎಂದರು.

ಸಾಗರ ಆನಂದಿ ನೀಮಾಹೋಸಳ್ಳಿ, ಭಾಗವಹಿಸಿದರು,ಮಲ್ಲಿನಾಥ,ಸಂಜಯಕುಮಾರ ದುಬ್ಬಾಸ,ಶಾಮರಾವ ಮೋಘಾ,ಸೇರಿದಂತೆ ಅನೇಕ ವಿಧ್ಯಾರ್ಥಿಗಳು ಭಾಗವಹಿಸಿದ್ದರು.



ಉದಯವಾಹಿನಿ ಚಿತ್ರ

**ಅಬ್ದುಲ್ ಕಲಾಂ ಆಜಾದ್‌ರವರ ಜಯಂತ್ಯೋತ್ಸವ**

# ವಿಶ್ವ ಆರೈಕೆದಾರರ ದಿನ ಆಚರಣೆ

• ಉದಯವಾಹಿನಿ, ಚಿತ್ರದುರ್ಗ


ಉದಯವಾಹಿನಿ ಚಿತ್ರ

ಚಿತ್ರದುರ್ಗ ನಗರದ ಬಿಆರ್ಸಿ ಸಭಾಂಗಣದಲ್ಲಿ ಈಚೆಗೆ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ದಿ ಅಸೋಸಿಯೇಷನ್ ಆಫ್ ಪೀಪಲ್ ವಿತ್ ಡಿಸಬಿಲಿಟಿ ಹಾಗೂ ತಾಲ್ಲೂಕು ಪಂಚಾಯಿತಿ ಸಹಯೋದಲ್ಲಿ ಆರೈಕೆದಾರರು ಮತ್ತು ವಿಶೇಷ ಚೇತನ ಮಕ್ಕಳೊಂದಿಗೆ ''ವಿಶ್ವ ಆರೈಕೆದಾರ ದಿನ'' ಆಚರಿಸಲಾಯಿತು. ಚಿತ್ರದುರ್ಗ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ವೈ.ರವಿ ಕುಮಾರ್ ಅವರು ಸಸಿಗೆ ನೀರು ಎರೆಯುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ, ಆರೈಕೆದಾರರು ಎಂದರೆ ಯಾರು, ಆರೈಕೆದಾರರ ಸಮಸ್ಯೆಗಳು ಮತ್ತು ಆರೈಕೆದಾರರ ದಿನಾಚರಣೆಯ ಉದ್ದೇಶ ತಿಳಿಸಿದ ಅವರು, ವಿಶೇಷ ಚೇತನ ಮಕ್ಕಳ ಅಭಿವೃದ್ಧಿಗಾಗಿ ಶ್ರಮಿಸುತ್ತಾ, ಲಾಲನೆ ಪೋಷಣೆ ಮಾಡುವ ಆರೈಕೆದಾರರ ಕೆಲಸ ಶ್ಲಾಘನೀಯ ಎಂದರು.

ಇದೇ ಸಂದರ್ಭದಲ್ಲಿ 61 ವಿಶೇಷ ಚೇತನ ಮಕ್ಕಳಿಗೆ ಪೌಷ್ಠಿಕಾಂಶಯುಕ್ತ ಆಹಾರ ಕಿಟ್ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಎಪಿಡಿ ಸಂಸ್ಥೆಯ ನಂದಿನಿ, ಐಆರ್ಟಿ ಟೀಚರ್ ರಾಜಣ್ಣ ಹಾಗೂ ಎಂಆರ್ಡಬ್ಲ್ಯು ಮೈಲಾರಪ್ಪ ಇದ್ದರು.

# ಕಸ್ಟಡಿಯಲ್ಲಿದ್ದ ಆರೋಪಿ ಸಾವು ಪ್ರಕರಣ ಸಬ್ ಇನ್ಸ್‌ಪೆಕ್ಟರ್, ಕಾನ್ಸ್‌ಟೇಬಲ್ ಸಸ್ಪೆಂಡ್

• ಉದಯವಾಹಿನಿ, ಉಡುಪಿ

ಬ್ರಹ್ಮಾವರ ಠಾಣೆಯಲ್ಲಿ ಪೊಲೀಸ್ ಕಸ್ಟಡಿಯಲ್ಲಿದ್ದ ಆರೋಪಿ ಸಾವು ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ಪೊಲೀರನ್ನು ಅಮಾನತುಗೊಳಿಸಲಾಗಿದೆ.

ಉಡುಪಿ ಜಿಲ್ಲೆಯ ಬ್ರಹ್ಮಾವರ ಠಾಣೆಯ ಸಬ್ ಇನ್ಸ್ ಪೆಕ್ಟರ್ ಮಧು ಹಾಗೂ ಕಾನ್ಸ್ ಟೇಬಲ್ ಸುಜಾತಾ ಅಮಾನತುಗೊಂಡವರು. ಇಬ್ಬರನ್ನು ಅಮಾನತುಗೊಳಿಸಿ ಉಡುಪಿ ಎಸ್ ಪಿ ಅರುಣ್ ಕುಮಾರ್ ಆದೇಶ ಹೊರಡಿಸಿದ್ದಾರೆ.

ಆರೋಪಿಯನ್ನು ಬಂಧಿಸುವಾಗ ಸುಪ್ರೀಂ ಕೋರ್ಟ್ ನಿರ್ದೇಶನ ಸರಿಯಾಗಿ ಪಾಲಿಸಿಲ್ಲ, ಬಂಧನದ ವೇಳೆ ಸೂಕ್ತ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿ ಇಬ್ಬರನ್ನು ಸಸ್ಪೆಂಡ್ ಮಾಡಲಾಗಿದೆ. ಮಹಿಳೆಯನ್ನು ಚುಡಾಯಿಸಿದಕ್ಕೆ ಆರೋಪಿ ಬಿಜು ಮೋಹನ್ ಎಂಬಾತನನ್ನು ಬ್ರಹ್ಮಾವರ ಪೊಲೀಸರು ಬಂಧಿಸಿದ್ದರು. ಆದರೆ ಕಸ್ಟಡಿಯಲ್ಲಿದ್ದ ಬಿಜು ಮೋಹನ್ ಅ.10ರಂದು ಇದ್ದಕ್ಕಿದ್ದಂತೆ ಸಾವನ್ನಪ್ಪಿದ್ದ. ಈ ಹಿನ್ನೆಲೆಯಲ್ಲಿ ಇಬ್ಬರು ಪೊಲೀಸರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ.

# ಡಿಟಿಎ ಅಧಿಕಾರಿಯಿಂದ ಅಕ್ರಮ ಆಸ್ತಿ ಸಂಪಾದನೆ ಲೋಕಾಯುಕ್ತ ಪೊಲೀಸರಿಂದ ಶೋಧ

• ಉದಯವಾಹಿನಿ, ಬೀದರ್

ಇಲ್ಲಿನ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ (ಡಿಟಿಎ) ಅಧಿಕಾರಿ ರವೀಂದ್ರ ರೊಟ್ಟೆ ಅವರು ಅಕ್ರಮವಾಗಿ ಆಸ್ತಿ ಸಂಪಾದನೆ ಮಾಡಿದ್ದಾರೆ ಎಂಬ ದೂರುಗಳ ಮೇರೆಗೆ ಲೋಕಾಯುಕ್ತ ಪೊಲೀಸರು ಅವರಿಗೆ ಸೇರಿದ ಎರಡೂ ಸ್ಥಳಗಳಲ್ಲಿ ಮಂಗಳವಾರ ಶೋಧ ಕಾರ್ಯಾಚರಣೆ ನಡೆಸಿದರು.


ಉದಯವಾಹಿನಿ ಚಿತ್ರ

ಡಿವೈಎಸ್ಪಿ ಹನುಮಂತ ನೇತೃತ್ವದಲ್ಲಿ ನಾಲ್ಕು ಖಾಸಗಿ ವಾಹನಗಳಲ್ಲಿ ಬಂದ ಅಧಿಕಾರಿ, ಸಿಬ್ಬಂದಿ ವರ್ಗ, ನೌಬಾದ್‌ನ ಡಯಟ್ ಕಚೇರಿ ಹಾಗೂ ಗುಂಪಾದಲ್ಲಿರುವ ರವೀಂದ್ರ ಅವರ ಮನೆಗಳಿಗೆ ತೆರಳಿ, ದಾಖಲೆ ಪತ್ರಗಳನ್ನು ಪರಿಶೀಲಿಸಿದರು. ರವೀಂದ್ರ ಅದರು ಬೀದರ್ ಜಿಲ್ಲಾಧಿಕಾರಿ ಕಚೇರಿಯಲ್ಲಿ ಶಿರಸ್ತೇದಾರ ಹಾಗೂ ಬೆಂಗಳೂರಿನ ಬಿಬಿಎಂಪಿಯಲ್ಲಿ ಅಧಿಕಾರಿಯಾಗಿ ಕೆಲಸ ನಿರ್ವಹಿಸಿದ್ದಾರೆ.

# ಲೋಕಾಯುಕ್ತ ದಾಳಿ: ಹಣದ ಗಂಟನ್ನು ಕಿಟಕಿಯಿಂದ ಹೊರಗೆ ಎಸೆದ ಇಂಜಿನಿಯರ್

• ಉದಯವಾಹಿನಿ, ಹಾವೇರಿ



ಉದಯವಾಹಿನಿ ಚಿತ್ರ

ಲೋಕಾಯುಕ್ತ ಅಧಿಕಾರಿಗಳು ಬೆಳಿಗ್ಗೆಯಿಂದಲೇ ರಾಜ್ಯದ ವಿವಿಧೆಡೆ ದಾಳಿ ನಡೆಸಿ ಭ್ರಷ್ಟ ಅಧಿಕಾರಿಗಳ ಚಳಿ ಬಿಡಿಸಿದ್ದಾರೆ.

ಹಾವೇರಿಯಲ್ಲಿ ಇಬ್ಬರು ಅಧಿಕಾರಿಗಳ ಮನೆ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಲೋಕಾಯುಕ್ತ ಡಿವೈಎಸ್ಪಿ ಚಂದ್ರಶೇಖರ ನೇತೃತ್ವದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಶ್ರೀನಿವಾಸ್ ಮನೆ ಮೇಲೆ ದಾಳಿ ನಡೆಸಲಾಗಿದೆ. ಇನ್ನೊಂದೆಡೆ ರಾಜ್ಯ ಪಂಚಾಯತ್ ಇಂಜಿನಿಯರಿಂಗ್ ಸಹಾಯಕ ಇಂಜಿನಿಯರ್ ಕಾಶಿನಾಥ್ ಭಜಂತ್ರಿ ಮನೆ ಮೇಲೆ ದಾಳಿ ನಡೆದಿದೆ.

ಇಬ್ಬರು ಅಧಿಕಾರಿಗಳ ಮನೆ, ಕಚೇರಿ, ಫಾರ್ಮ್ ಹೌಸ್ ಗಳ ಮೇಲೆ ದಾಳಿ ನಡೆಸಿ ಪರಿಶೀಲನೆ ನಡೆಸಿದ್ದಾರೆ. ಈ ವೇಳೆ ಇಂಜಿನಿಯರ್ ಕಾಶಿನಾಥ್ ಭಜಂತ್ರಿ ಲಕ್ಷ ಕ್ಷ ಹಣವನ್ನು ತನ್ನ ಬೆಡ್ ರೂಂ ನಲ್ಲಿ ಹಾಸಿಗೆ ಕೆಳಗೆ ಬಚ್ಚಿಟ್ಟಿದ್ದಾರೆ. ಅಧಿಕಾರಿಗಳು ಮನೆ ಮೇಲೆ ದಾಳಿ ನಡೆಸುತ್ತಿದ್ದಂತೆ 9 ಲಕ್ಷ ರೂಪಾಯಿ ಹಣವನ್ನು ಎರಡು ಗಂಟ್ ಗಳಲ್ಲಿ ಕಟ್ಟಿ ಕಿಟಕಿಯಿಂದ ಹೊರಗೆ ಬಿಸಾಕಿದ್ದಾರೆ.

ಲೋಕಾಯುಕ್ತ ದಾಳಿ ವೇಳೆ ಕಾಶಿನಾಥ್ ಭಜಂತ್ರಿ ನಿವಾಸದಲ್ಲಿ ಅಪಾರ ಪ್ರಮಾಣದ ಹಣ ಪತ್ತೆಯಾಗಿದೆ ಎಂದು ತಿಳಿದುಬಂದಿದೆ.

# ಪತ್ನಿ, ಮಗನ ಕೊಂದು ಪತಿ ಆತ್ಮಹತ್ಯೆ ಪ್ರಕರಣ ಅಪ್ಪ-ಅಮ್ಮ- ಸಹೋದರಿ ಅರೆಸ್ಟ್

• ಉದಯವಾಹಿನಿ, ಮಂಗಳೂರು

ಎರಡು ದಿನಗಳ ಹಿಂದೆಯಷ್ಟೇ ಸಹಕಾರಿ ಬ್ಯಾಂಕ್ ಉದ್ಯೋಗಿ ಕಾರ್ತಿಕ್ ಭಟ್, ಪತ್ನಿ ಹಾಗೂ ಮಗನನ್ನು ಕೊಂದು ಬಳಿಕ ರೈಲಿಗೆ ತಲೆಕೊಟ್ಟು ಆತ್ಮಹತ್ಯೆಗೆ ಶರಣಾಗಿರುವ ಘಟನೆ ದಕ್ಷಿಣ ಕನ್ನಡದಲ್ಲಿ ನಡೆದಿತ್ತು. ಈ ಘಟನೆಗೆ ಸಂಬಂಧಿಸಿದಂತೆ ಇದೀಗ ಮೂವರು ಆರೋಪಿಗಳನ್ನು ಮುಲ್ಕಿ ಪೊಲೀಸರು ಬಂಧಿಸಿದ್ದಾರೆ.

ಕಾರ್ತಿಕ್ ಭಟ್ ತನ್ನ ಪತ್ನಿ ಪ್ರಿಯಾಂಕ ಹಾಗೂ ಮಗ ಹೃದಯ್ ನನ್ನು ಹತ್ಯೆಗೈದು ಬಳಿಕ ಮಂಗಳೂರಿನ ಮುಲ್ಕಿ ಹೊರವಲಯದ ಬೆಳ್ಳಾಯುರುವಿನಲ್ಲಿ ರೈಲಿಗೆ ತಲೆ ಕೊಟ್ಟು ತಾನೂ ಆತ್ಮಹತ್ಯೆಗೆ ಶರಣಾಗಿದ್ದ. ಪ್ರಕರಣದ ತನಿಖೆ ವೇಳೆ ಪೊಲಿಸರಿಗೆ ಕಾರ್ತಿಕ್ ಭಟ್ ಬರೆದಿರುವ ಡೆತ್ ನೋಟ್ ಲಭ್ಯವಾಗಿದೆ. ಅದರಲ್ಲಿ ನಮ್ಮ ಸಂಸಾರ ಹಾಳು ಮಾಡಿದ್ದೇ ತಂದೆ-ತಾಯಿ, ಸಹೋದರಿ. ಇಂತಹ ತಂದೆ, ತಾಯಿ ಯಾರಿಗೂ ಸಿಗಬಾರದು. ನನ್ನ ಈ ಪರಿಸ್ಥಿತಿಗೆ ಇವರೇ ಕಾರಣ. ನಾವು ಸತ್ತ ಮೇಲೆ ದಯವಿಟ್ಟು ನಮ್ಮ ಅಂತ್ಯಸಂಸ್ಕಾರವನ್ನು ಅತ್ತೆ ಮಾವ ನಡೆಸಿಕೊಡಬೇಕು ಎಂದು ಕಾರ್ತಿಕ್ ಬರೆದಿದ್ದಾರೆ. ಇನ್ನು ಕಾರ್ತಿಕ್ ಅತ್ತೆ-ಮಾವ ಅಂದರೆ ಪ್ರಿಯಾಂಕಾ ಪೋಷಕರು ಕೂಡ ದೂರು ನೀಡಿದ್ದಾರೆ.


ಉದಯವಾಹಿನಿ ಚಿತ್ರ

ಈ ಹಿನ್ನೆಲೆಯಲ್ಲಿ ಮೃತ ಕಾರ್ತಿಕ್‌ನ ತಂದೆ, ತಾಯಿ ಶ್ಯಾಮಲಾ ಭಟ್, ಸಹೋದರಿ ಕಣ್ಮಣಿ ಎಂಬುವವರನ್ನು ಪೊಲೀಸರು ಬಂಧಿಸಿದ್ದಾರೆ.

# ರೈತರಿಂದ ಕಬ್ಬು ಖರೀದಿ: ಬೆಲೆ ನಿಗದಿ ಮಾಡಿದ ಜಿಲ್ಲಾಡಳಿತ

## ಕಬ್ಬು ಕಟಾವು ಮಾಡದೇ ರೈತರಲ್ಲಿ ಗೊಂದಲ ಉಂಟು ಮಾಡಿದರೆ ಕಾರ್ಖಾನೆಯ ಫೀಲ್ಡ್ ಆಫೀಸರ್‌ಗಳ ಮೇಲೆ ಕ್ರಮ

• ಉದಯವಾಹಿನಿ, ಕಾರವಾರ

ಈ ವರ್ಷದ ಕಬ್ಬು ಅರೆಯುವ ಹಂಗಾಮು ಪ್ರಾರಂಭ ಮಾಡುವುದಕ್ಕೂ ಮೊದಲು ಉತ್ತರ ಕನ್ನಡ ಜಿಲ್ಲಾಡಳಿತ ರೈತರಿಗೆ ಸಿಹಿಸುದ್ದಿ ನೀಡಿದೆ. ರೈತರಿಂದ ಕಬ್ಬು ಖರೀದಿ ಬೆಲೆ ನಿರ್ಧಾರಣೆ ಮಾಡುವ ಬಗ್ಗೆ ಸಕ್ಕರೆ ಕಾರ್ಖಾನೆ ಹಾಗೂ ಕಬ್ಬು ಬೆಳೆಗಾರ ರೈತ ಮುಖಂಡರೊಂದಿಗೆ ಜಿಲ್ಲಾಧಿಕಾರಿಗಳು ಸಭೆ ನಡೆಸಿದ್ದಾರೆ.

ಹಳಿಯಾಳ ತಹಶೀಲ್ದಾರ್ ಕಛೇರಿಯ ಸಭಾ ಭವನದಲ್ಲಿ ಈ ವರ್ಷದ ಕಬ್ಬು ಅರೆಯುವ ಹಂಗಾಮು ಪ್ರಾರಂಭ ಮಾಡುವುದಕ್ಕೆ ಸಂಬಂಧಿಸಿದಂತೆ ಬೆಲೆ ನಿರ್ಧಾರಣೆ ಮಾಡುವ ಬಗ್ಗೆ ಸಕ್ಕರೆ ಕಾರ್ಖಾನೆ ಹಾಗೂ ಕಬ್ಬು ಬೆಳೆಗಾರ ರೈತ ಮುಖಂಡರೊಂದಿಗೆ ಜಿಲ್ಲಾಧಿಕಾರಿಗಳು ಸಭೆಯನ್ನು ನಡೆಸಿದರು.

ಸಭೆಯಲ್ಲಿ ವಿವರವಾಗಿ ಚರ್ಚೆ ನಡೆಸಿದ ಬಳಿಕ ಉತ್ತರ ಕನ್ನಡ ಜಿಲ್ಲಾಧಿಕಾರಿಗಳು ಕಬ್ಬು ಖರೀದಿ ಬೆಲೆಯನ್ನು ನಿಗದಿ ಮಾಡಿದ್ದಾರೆ. ನಿಯಮದಂತೆ ಕಬ್ಬು ಕಟಾವು ಮಾಡದೇ ರೈತರಲ್ಲಿ ಗೊಂದಲ ಉಂಟು ಮಾಡಿದರೆ ಕಾರ್ಖನೆಯ ಫೀಲ್ಡ್ ಆಫೀಸರ್‌ಗಳ ಮೇಲೆ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಕೆಯನ್ನು ನೀಡಲಾಗಿದೆ.

2023-24ನೇ ಸಾಲಿನಲ್ಲಿ ಸರ್ಕಾರವು ನಿಗದಿ ಪಡಿಸಿದ ಎಫ್‌ಆರ್‌ಪಿ ದರವು ಪ್ರತಿ ಟನ್ ಕಬ್ಬಿಗೆ 3678 ರೂ.ಗಳಿದ್ದು ಪ್ಯಾರಿ ಸಕ್ಕರೆ ಕಾರ್ಖಾನೆಯವರು ಕಟಾವು ಮತ್ತು ಸಾಗಾಣಿಕೆ ವೆಚ್ಚವನ್ನು ಕಳೆದು 2826 ರೂ.ಗಳನ್ನು ರೈತರಿಗೆ ಪಾವತಿಸುತ್ತಿದ್ದರು. ಈ ವರ್ಷಕ್ಕೆ ದರ ನಿಗದಿ ಮಾಡುವ ಬಗ್ಗೆ ರೈತರು ಮನವಿ ಮಾಡಿರುವಂತೆ ಜಿಲ್ಲಾಧಿಕಾರಿಗಳು ದಿನಾಂಕ 30-10-2024ರಂದು ಪ್ರಾಥಮಿಕ ಹಂತದ ಸಭೆ ನಡೆಸಿದ್ದು ನಂತರ ದಿನಾಂಕ 9-11-2024ರಂದು ಜಿಲ್ಲಾಡಳಿತವು ಹಳಿಯಾಳದಲ್ಲಿ ರೈತರು ಮತ್ತು ಪ್ಯಾರಿ ಕಾರ್ಖಾನೆಯವರೊಂದಿಗೆ ಅಂತಿಮ ಸಭೆ ನಡೆಸಿ ಈ ವರ್ಷಕ್ಕೆ ಸರ್ಕಾರವು ನಿಗದಿ ಪಡಿಸಿರುವ ದರ ಪ್ರತಿ ಟನ್ ಕಬ್ಬಿಗೆ 3685 ರೂ.ಗಳಲ್ಲಿ ಕಬ್ಬು ಕಟಾವು ಮತ್ತು ಸಾಗಾಣಿಕೆ ವೆಚ್ಚವನ್ನು ಕಡಿತಗೊಳಿಸಿ ಪ್ರತಿ ಟನ್ ಕಬ್ಬಿಗೆ 2975 ರೂ. ಗಳನ್ನು ರೈತರಿಗೆ ಪಾವತಿಸಲು ಪ್ಯಾರಿ ಕಾರ್ಖಾನೆಯವರು ಒಪ್ಪಿರುತ್ತಾರೆ.

**ಕಬ್ಬು ಖರೀದಿಗೆ ಬೆಲೆ ನಿಗದಿ**


ಉದಯವಾಹಿನಿ ಚಿತ್ರ

**ರೈತರ ಕಬ್ಬನ್ನು ಪ್ಯಾರಿ ಸಕ್ಕರೆ ಕಾರ್ಖಾನೆಯವರು ಸ್ಥಾಪಿಸಿರುವ ತೂಕದ ಯಂತ್ರದಲ್ಲಿ ಅಳತೆ ಮಾಡಿದ ವಿವರಗಳನ್ನು ತಕ್ಷಣವೇ ರೈತರಿಗೆ SMS ಮೂಲಕ ಕಳುಹಿಸುವ ವ್ಯವಸ್ಥೆಯನ್ನು ಕಾರ್ಖಾನೆಯವರು ಮಾಡಬೇಕು ಹಾಗೂ ಈ ಬಗ್ಗೆ ರೈತರಿಗೆ ರಶೀದಿ ನೀಡಬೇಕು ಎಂದು ಸೂಚನೆ ನೀಡಲಾಗಿದೆ.**

ಪ್ಯಾರಿ ಸಕ್ಕರೆ ಕಾರ್ಖಾನೆ ಆವರಣದಲ್ಲಿ ಕಟಾವಣೆ ಮಾಡಿದ ಕಬ್ಬಿನ ತೂಕ ಮಾಡಲು ಮತ್ತು ಸಕ್ಕರೆ ಇಳುವರಿಯ ಬಗ್ಗೆ ಪರಿಶೀಲಿಸಿ ವರದಿ ಸಲ್ಲಿಸುವ ಬಗ್ಗೆ ಜಿಲ್ಲಾಧಿಕಾರಿಗಳು ಉತ್ತರ ಕನ್ನಡ, ಕಾರವಾರ ರವರು ತಹಶೀಲ್ದಾರ್ ಹಳಿಯಾಳ ಅವರ ಅಧ್ಯಕ್ಷತೆಯಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ರೈತ ಮುಖಂಡರನ್ನೊಳಗೊಂಡ ಸಮಿತಿಯನ್ನು ರಚನೆ ಮಾಡಿರುತ್ತಾರೆ. ಈ ಸಮಿತಿಯು ಕಾಲಕಾಲಕ್ಕೆ ಕಾರ್ಖಾನೆಗೆ ಭೇಟಿ ನೀಡಿ ಕಬ್ಬಿನ ತೂಕ ಮತ್ತು ಕಬ್ಬಿನ ಇಳುವರಿಯ ಬಗ್ಗೆ ಪರಿಶೀಲನೆ ನಡೆಸಲಿದೆ. ಪ್ಯಾರಿ ಕಾರ್ಖಾನೆಯವರು ಕಾರ್ಯಾಲಯದಲ್ಲಿ ನಡೆಸಿದ ಸಭೆಯಲ್ಲಿ ಒಪ್ಪಿರುವಂತೆ ಆದ್ಯತೆಯನುಸಾರ ಕಬ್ಬು ಕಟಾವಣೆ ಮಾಡಲು ಗ್ರಾಮವಾರು ಪಟ್ಟಿಯನ್ನು ಉತ್ತರ ಕನ್ನಡ ಜಿಲ್ಲೆಯ ತಾಲ್ಲೂಕುಗಳಿಗೆ ಸಂಬಂಧಿಸಿದಂತೆ ಪ್ರಕಟಿಸಿ ಜಿಲ್ಲಾಧಿಕಾರಿಗಳ ಕಾರ್ಯಾಲಯಕ್ಕೆ ಸಲ್ಲಿಸಿರುತ್ತಾರೆ. ಈ ಪಟ್ಟಿಯನ್ನು ಗ್ರಾಮ ಪಂಚಾಯತ್ ಕಾರ್ಯಾಲಯದಲ್ಲಿ ಪ್ರಚುರಪಡಿಸಬೇಕು ಹಾಗೂ ಸಂಬಂಧಿಸಿದ ಗ್ರಾಮಗಳಲ್ಲಿರುವ ರೈತ ಮುಖಂಡರಿಗೆ ನೀಡಬೇಕು.

**ಫೀಲ್ಡ್ ಆಫೀಸರ್‌ಗಳ ಮೇಲೆ ಕಾನೂನು ಕ್ರಮ**

**ಪ್ಯಾರಿ ಕಾರ್ಖಾನೆಯವರು ಪ್ರಕಟಿಸಿರುವಂತೆ ಗ್ರಾಮವಾರು ಆದ್ಯತಾ ಪಟ್ಟಿಯನುಸಾರ ಕಬ್ಬು ಕಟಾವಣೆ ಮಾಡದೇ ಲಾಗಣಿ/ ಭಕ್ಷಿಸು ಪಡೆದು ರೈತರಿಗೆ ಗೊಂದಲ ಉಂಟುಮಾಡಿ ಕಬ್ಬು ಕಟಾವಣೆ ಮಾಡುವಂತಹ ಕಟಾವಣೆ ತಂಡಗಳು, ರೈತರು ಹಾಗೂ ಇದಕ್ಕೆ ಕಾರಣರಾಗುವ ಕಾರ್ಖಾನೆಯ ಫೀಲ್ಡ್ ಆಫೀಸರ್‌ಗಳ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗುವುದು.**

**ಧಾರವಾಡ ಜಿಲ್ಲೆಗೆ ಸಂಬಂಧಿಸಿದಂತೆ ಕಬ್ಬು ಕಟಾವು ಮಾಡುವ ಆದ್ಯತಾ ಪಟ್ಟಿಯ ಪ್ರತಿಯನ್ನು ಜಿಲ್ಲಾಧಿಕಾರಿಗಳು ಧಾರವಾಡ ಅವರ ಕಚೇರಿಗೆ ಸಲ್ಲಿಸಲು ನಿರ್ದೇಶನ ನೀಡಲಾಗಿದೆ. ಆದ್ಯತಾ ಪಟ್ಟಿಯನುಸಾರ ಕಬ್ಬು ಕಟಾವು ಮಾಡುವ ಪ್ರಕ್ರಿಯೆಯನ್ನು ಪ್ಯಾರಿ ಕಾರ್ಖಾನೆಯವರು ಕಟ್ಟುನಿಟ್ಟಾಗಿ ಪಾಲನೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದ್ದಾರೆ.**

ಉದಯ ವಾಹಿನಿ
ದೇಶ/ವಿದೇಶ
ಬುಧವಾರ 13 ನವೆಂಬರ್ 2024


# ರಕ್ಷಣಾ ಕ್ಷೇತ್ರದಲ್ಲಿ ಭಾರತ, ಅಮೆರಿಕ ನಡುವಿನ ಸಂಬಂಧ ಇನ್ನಷ್ಟು ವೃದ್ಧಿ

## ಅಮೆರಿಕಾದ ರಾಷ್ಟ್ರೀಯ ಭದ್ರತಾ ಸಲಹೆಗಾರರಾಗಿ ಮೈಕ್ ವಾಲ್ಡ್ಜ? ನೇಮಕ : ಭಾರತಕ್ಕೆ ಸಿಹಿ, ಚೀನಾಗೆ ಕಹಿ

**ವಾಷಿಂಗ್ಟನ್:** ಚೀನಾ ಮತ್ತು ನಿರ್ಗಮಿಸುತ್ತಿರುವ ಅಮೆರಿಕಾದ ಅಧ್ಯಕ್ಷ ಜೋ ಬೈಡನ್ ಅವರ ಕಟು ಟೀಕಾಕಾರರಾಗಿ ಗುರುತಿಸಿಕೊಂಡಿರುವ, ಫ್ಲೋರಿಡಾದ ಕಾಂಗ್ರೆಸ್ ಮ್ಯಾನ್ ಎಂದೇ ಹೆಸರಾಗಿರುವ ಮೈಕ್ ವಾಲ್ಡ್ಜ ಅವರನ್ನು ಡೊನಾಲ್ಡ್ ಟ್ರಂಪ್, ರಾಷ್ಟ್ರೀಯ ಭದ್ರತಾ ಸಲಹೆಗಾರರನ್ನಾಗಿ ನೇಮಕ ಮಾಡಿದ್ದಾರೆ ಎಂದು ವರದಿ ಮಾಡಿದೆ.



ನವದೆಹಲಿ ನಡುವಿನ ಸಂಬಂಧ ಇನ್ನಷ್ಟು ಗಟ್ಟಿ

ಅಮೆರಿಕಾದಲ್ಲಿ ಭಾರತ ಕಾಕಸ್ ನಾಯಕರೂ ಆಗಿರುವ ಮೈಕ್ ವಾಲ್ಡ್ಜ ಅಮೆರಿಕಾ - ಭಾರತ ನಡುವಿನ ಭದ್ರತಾ ಮತ್ತು ರಕ್ಷಣಾ ವಿಚಾರಕ್ಕೆ ಸಂಬಂಧಿಸಿದಂತೆ, ಸಕಾರಾತ್ಮಕ ಚಿಂತನೆಯನ್ನು ಹೊಂದಿವರಾಗಿದ್ದಾರೆ. ಅಫ್ಘಾನಿಸ್ತಾನ ಮತ್ತು ಮಧ್ಯಪ್ರಾಚ್ಯ ರಾಷ್ಟ್ರಗಳಲ್ಲಿ ಕೆಲಸ ಮಾಡಿರುವ ಅನುಭವವನ್ನೂ ಇವರು ಹೊಂದಿದ್ದಾರೆ. ಹಿಂದೆ, ಡೊನಾಲ್ಡ್ ರಮ್ಸ್‌ಫೀಲ್ಡ್ ಅವರು ರಕ್ಷಣಾ ಕಾರ್ಯದರ್ಶಿಯಾಗಿದ್ದ ವೇಳೆ, ಪೆಂಟಗಾನ್ ನಲ್ಲಿ ಅಫ್ಘಾನಿಸ್ತಾನದ ನೀತಿ ಸಲಹೆಗಾರರಾಗಿಯೂ ಮೈಕ್ ವಾಲ್ಡ್ಜ ಕೆಲಸ ನಿರ್ವಹಿಸಿದ್ದಾರೆ.

ಬೈಡನ್ ಅಧ್ಯಕ್ಷರಾಗಿದ್ದ ವೇಳೆ, ಅಮೆರಿಕಾದ ಸೇನೆಯನ್ನು ಅಫ್ಘಾನಿಸ್ತಾನದಿಂದ ವಾಪಸ್ ಕರೆಸಿಕೊಂಡಿದ್ದನ್ನು ಮೈಕ್ ವಾಲ್ಡ್ಜ ತೀವ್ರವಾಗಿ ಟೀಕಿಸಿದ್ದರು.

ಟ್ರಂಪ್ ಅವರ ಬೆಂಬಲಿಗರೂ ಆಗಿರುವ ಮೈಕ್ ವಾಲ್ಡ್ಜ ಚೀನಾ ಉತ್ಪಾದನೆಯ ಯಾವುದೇ ವಸ್ತುಗಳ ಮೇಲೆ ಅಮೆರಿಕಾ ಅವಲಂಬಿತವಾಗಬಾರದು ಎನ್ನುವ ನಿಲುವನ್ನು ಹಲವು ಬಾರಿ ಪ್ರತಿಪಾದಿಸಿದ್ದರು. ಕೋವಿಡ್ 19ನಲ್ಲಿ ಚೀನಾದ ಪಾತ್ರವನ್ನು ಪ್ರತಿಭಟಿಸಲು, ಬೀಜಿಂಗ್ ನಲ್ಲಿ ನಡೆದ 2022ರ ಚಳಿಗಾಲದ ಒಲಂಪಿಕ್ಸ್ ಅನ್ನು ಬಹಿಷ್ಕರಿಸಬೇಕೆಂದು ಒತ್ತಾಯಿಸಿದ್ದರು.

### ಸಕಾರಾತ್ಮಕ ಚಿಂತನೆ

**ಫ್ಲೋರಿಡಾದ ಕಾಂಗ್ರೆಸ್ ಮ್ಯಾನ್ ಎಂದೇ ಹೆಸರಾಗಿರುವ ಮೈಕ್ ವಾಲ್ಡ್ಜ್ ಅವರನ್ನು ಡೊನಾಲ್ಡ್ ಟ್ರಂಪ್, ರಾಷ್ಟ್ರೀಯ ಭದ್ರತಾ ಸಲಹೆಗಾರರನ್ನಾಗಿ ನೇಮಕ ಮಾಡಿದ್ದಾರೆ. ಅಮೆರಿಕಾದಲ್ಲಿ ಭಾರತ ಕಾಕಸ್ ನಾಯಕರೂ ಆಗಿರುವ ಮೈಕ್ ವಾಲ್ಡ್ಜ, ಅಮೆರಿಕಾ - ಭಾರತ ನಡುವಿನ ಭದ್ರತಾ ಮತ್ತು ರಕ್ಷಣಾ ವಿಚಾರಕ್ಕೆ ಸಂಬಂಧಿಸಿದಂತೆ, ಸಕಾರಾತ್ಮಕ ಚಿಂತನೆಯನ್ನು ಹೊಂದಿದವರಾಗಿದ್ದಾರೆ.**

ಮೈಕ್ ವಾಲ್ಡ್ಜ ಅವರ ನೇಮಕಾತಿ ಮುಂದಿನ ದಿನಗಳಲ್ಲಿ ಭಾರೀ ಮಹತ್ವವನ್ನು ಪಡೆಯಲಿದೆ. ಉಕ್ರೇನ್‌ನಲ್ಲಿ ನಡೆಯುತ್ತಿರುವ ಯುದ್ಧ, ಮಧ್ಯಪ್ರಾಚ್ಯ ರಾಷ್ಟ್ರಗಳಲ್ಲಿನ ಅಸ್ಥಿರತೆ, ರಷ್ಯಾ - ಉತ್ತರ ಕೊರಿಯಾದ ನಡುವೆ ಬೆಳೆಯುತ್ತಿರುವ ಸಂಬಂಧಗಳು ಮುಂತಾದ ವಿಚಾರಗಳಲ್ಲಿ ಅಮೆರಿಕಾದ ನಿಲುವು ಮುಖ್ಯವಾಗಿರುತ್ತದೆ.

- **ಅಮೆರಿಕಾದಲ್ಲಿ ಭಾರತ ಕಾಕಸ್ ನಾಯಕರೂ ಆಗಿರುವ ಮೈಕ್ ವಾಲ್ಡ್ಜ ಭದ್ರತಾ ಸಲಹೆಗಾರನಾಗಿ ನೇಮಕ**
- **ಚೀನಾ ಉತ್ಪಾದನೆಯ ಯಾವುದೇ ವಸ್ತುಗಳ ಮೇಲೆ ಅಮೆರಿಕಾ ಅವಲಂಬಿತವಾಗಬಾರದು**

ರಕ್ಷಣಾ ಕ್ಷೇತ್ರದಲ್ಲಿ ಭಾರತ ಮತ್ತು ಅಮೆರಿಕ ನಡುವಿನ ಸಂಬಂಧ ಇನ್ನಷ್ಟು ವೃದ್ಧಿಗೊಳ್ಳಬೇಕು ಎಂದು ಮೈಕ್ ವಾಲ್ಡ್ಜ ಪ್ರತಿಪಾದಿಸಿದ್ದರು. 2023ರಲ್ಲಿ ಭಾರತದ ಪ್ರಧಾನಿ ನರೇಂದ್ರ ಮೋದಿ ಅಮೆರಿಕಾಗೆ ಭೇಟಿ ನೀಡಿದ ಸಂದರ್ಭದಲ್ಲಿ, ಕ್ಯಾಪಿಟಲ್ ಹಿಲ್ ಭಾಷಣದಲ್ಲಿ ವಾಲ್ಡ್ಜ ಪ್ರಮುಖ ಪಾತ್ರವನ್ನು ವಹಿಸಿದ್ದರು. ವಿದೇಶಾಂಗ ನೀತಿಯ ಮೇಲೆ ಉತ್ತಮ ಹಿಡಿತವಿರುವ ವಾಲ್ಡ್ಜ, ರಾಷ್ಟ್ರೀಯ ಭದ್ರತಾ ವಿಚಾರಕ್ಕೆ ಸಂಬಂಧಿಸಿದಂತೆ, ಹಲವು ಏಜೆನ್ಸಿಗಳ ಜೊತೆ ನೇರ ಸಂಪರ್ಕದಲ್ಲಿ ಇರುತ್ತಾರೆ. ಜೊತೆಗೆ, ಡೊನಾಲ್ಡ್ ಟ್ರಂಪ್ ಜೊತೆ ಮಾಹಿತಿ ಹಂಚಿಕೊಳ್ಳುವುದು ಮತ್ತು ಸಮನ್ವಯ ಕೊಂಡಿಯೂ ಆಗಿರುತ್ತಾರೆ.

ನಿವೃತ್ತ ಮಿಲಿಟರಿಯೂ ಅಧಿಕಾರಿಯಾಗಿರುವ ಮೈಕ್ ವಾಲ್ಡ್ಜ, ಚೀನಾದ ಕಡು ವಿರೋಧಿಯಾಗಿ ಗುರುತಿಸಿಕೊಂಡವರು. ಚೀನಾದ ಕಮ್ಯೂನಿಸ್ಟ್ ಸರ್ಕಾರಕ್ಕೆ ಮೈಕ್ ವಾಲ್ಡ್ಜ ಅವರ ನೇಮಕ, ಎಚ್ಚರಿಕೆಯ ಗಂಟೆ ಎಂದು ವಿಶ್ಲೇಷಿಸಲಾಗುತ್ತಿದೆ. ತೈವಾನ್ ದೇಶದ ಮೇಲೆ ಚೀನಾದ ಹಿಡಿತವನ್ನು ಕಮ್ಮಿಗೊಳಿಸುವ ವಿಚಾರದಲ್ಲೂ ಮೈಕ್ ವಾಲ್ಡ್ಜ ತಮ್ಮ ನಿಲುವನ್ನು ಪ್ರಕಟಿಸಿದ್ದರು. ಮೈಕ್ ವಾಲ್ಡ್ಜ ಅವರ ನೇಮಕಾತಿ, ಭಾರತ ಮತ್ತು ಅಮೆರಿಕಾದ ನಡುವೆ ಸಕಾರಾತ್ಮಕ ಪರಿಣಾಮವನ್ನು ಬೀರುವ ಸಾಧ್ಯತೆಯಿದೆ. ಈಗಾಗಲೇ, ಇಂಡಿಯಾ ಕ್ಯಾಕಸ್ ಕಾಂಗ್ರೆಸ್ ಜವಾಬ್ದಾರಿಯನ್ನೂ ಹೊತ್ತಿರುವ ವಾಲ್ಡ್ಜ, ವಾಷಿಂಗ್ಟನ್ - ನವದೆಹಲಿ ನಡುವಿನ ಸಂಬಂಧ ಇನ್ನಷ್ಟು ಗಟ್ಟಿಗೊಳಿಸುತ್ತಾರೆ ಎಂದು ನಂಬಲಾಗಿದೆ.

---

# ರಾಮಮಂದಿರದ ಮೇಲೆ ದಾಳಿ ನಡೆಸುವುದಾಗಿ ಖಲಿಸ್ತಾನಿ ಉಗ್ರ ಗುರುಪತ್ವಂತ್ ಸಿಂಗ್ ಬೆದರಿಕೆ



**ನವದೆಹಲಿ:** ಕೆನಡಾದಲ್ಲಿರುವ ಹಿಂದೂ ದೇವಾಲಯಗಳ ಮೇಲೆ ದಾಳಿ ನಡೆಸುತ್ತಿದ್ದ ಖಲಿಸ್ತಾನಿಗಳ ಕಣ್ಣು ಇದೀಗ ಅಯೋಧ್ಯೆಯಲ್ಲಿರುವ ರಾಮಮಂದಿರದ ಮೇಲೆ ಬಿದ್ದಿದೆ. ಇತ್ತೀಚೆಗಷ್ಟೆ ಉದ್ಘಾಟನೆಗೊಂಡಿರುವ ರಾಮಮಂದಿರಕ್ಕೆ ದೇಶ ವಿದೇಶಗಳಿಂದ ಸಾವಿರಾರು ಭಕ್ತರು ಇಲ್ಲಿಗೆ ಭೇಟಿ ನೀಡುತ್ತಿರುವುದರಿಂದ ಖಲಿಸ್ತಾನಿಗಳ ಕಣ್ಣು ರಾಮಮಂದಿರದ ಮೇಲೆ ಬಿದ್ದಿದೆ. ಖಲಿಸ್ತಾನಿ ಉಗ್ರರು ಅಯೋಧ್ಯೆ ಶ್ರೀರಾಮಂದಿರ ಮೇಲೆ ಹಾಗೂ ಕೆನಡಾದ ಹಿಂದೂ ದೇವಾಲಯಗಳ ಮೇಲೆ ಇದೇ ನ. 16 ಮತ್ತು 17ರಂದು ದಾಳಿ ನಡೆಸುವುದಾಗಿ ಬೆದರಿಕೆ ನೀಡಿದ್ದಾರೆ. ಈ ಸಂಬಂಧ ಕೆನಡಾ ದೇವಾಲಯಗಳು ಹಾಗೂ ರಾಮಮಂದಿರ ದೇವಾಲಯದ ಸುತ್ತಮುತ್ತ ಕಟ್ಟೆಚ್ಚರ ವಹಿಸಲಾಗಿದೆ. ಅಯೋಧ್ಯೆ ರಾಮ ಮಂದಿರ ಮಾತ್ರವಲ್ಲದೇ ಕೆನಡಾ ಸೇರಿ ಇತರ ಹಿಂದೂ ದೇವಾಲಯಗಳ ಮೇಲೆ ಇದೇ ತಾರೀಖಿನಲ್ಲಿ ದಾಳಿ ಮಾಡುತ್ತೇವೆ ಎಂದು ಖಲಿಸ್ತಾನಿ ಉಗ್ರ ಗುರುಪತ್ವಂತ್ ಸಿಂಗ್ ಪನ್ನೂನ್ ಬೆದರಿಕೆ ಹಾಕಿದ್ದಾರೆನೆಂದು ವರದಿ ಆಗಿದೆ. ಇನ್ನೂ ಕರ್ನಾಟಕ ಮೂಲದ ಕೆನಡಾ ಸಂಸದ ಚಂದ್ರ ಆರ್ಯ ಅವರಿಗೂ ಸಹ ಅವರಿಗೆ ನೀವು ಕೆನಡಾ ಪರವಾಗಿರಿ ಇಲ್ಲವೇ ಕೆನಡಾ ಬಿಟ್ಟು ತೊಲಗಿ ಎಂದು ಬೆದರಿಕೆ ಒಡ್ಡಿದ್ದಾನೆ. ಈ ಹಿಂದಿನಿಂದಲೂ ಖಲಿಸ್ತಾನಿ ಉಗ್ರರು ಭಾರತದ ಮೇಲೆ ಒಂದಿಲ್ಲ ಒಂದು ಕಾರಣದಿಂದ ಧಮ್ಕಿ ಹಾಕುತ್ತಲೇ ಬಂದಿದ್ದಾರೆ. ಈ ಬಾರಿ ರಾಮ ಮಂದಿರ ಹಸರಿನಲ್ಲಿ ಬೆದರಿಕೆ ಒಡ್ಡಿದ್ದಾರೆ.

ರಾಮಮಂದಿರ ಸೇರಿ ಕೆನಡಾದ ಕಾಲಿಬರಿ ಮಂದಿರ, ತ್ರಿವೇಣಿ ಮಂದಿರ ಮೇಲೂ ದಾಳಿ ನಡೆಸಲಿದ್ದೇವೆ ಎಂದು ಉಗ್ರ ಪನ್ನೂನ್ ಸಂದೇಶ ರವಾನಿಸಿದ್ದಾನೆ. ಈ ಹಿಂದೆಯು ಇಂತ್ತೆ ಬೆದರಿಕೆ ಹಾಕಿ ವಿಡಿಯೋಗಳನ್ನು ಬಿಡುಗಡೆ ಮಾಡಿದ್ದ. ನಾನು ದಾಳಿ ಮಾಡುವ ದಿನ ಭಾರತೀಯರು ಈ ಮಂದಿರಗಳಿಗೆ ತೆರಳಬೇಡಿ ಎಂದು ಆತ ವಿಡಿಯೋದಲ್ಲಿ ಹೇಳಿದ್ದಾನೆ.

---

# ಜಾರ್ಖಂಡ್: ಸ್ತ್ರೀಯರಿಗೆ ಆರ್ಥಿಕ ನೆರವು ಏರಿಕೆ; ಇಂಡಿಯಾ ಮೈತ್ರಿಕೂಟ ನಿರ್ಧಾರ

**ನವದೆಹಲಿ:** ಬಿಜೆಪಿ ತನ್ನ ಶತ ಕೋಟ್ಯಧಿಪತಿ ಗೆಳೆಯರಿಗೆ ನೀಡಿದ್ದಕ್ಕಿಂತಲೂ ಹೆಚ್ಚಿನ ಆರ್ಥಿಕ ನೆರವನ್ನು ಕಾಂಗ್ರೆಸ್ ಪಕ್ಷವು ಮಹಿಳೆಯರು, ಯುವ ಜನರು, ರೈತರು, ಬಡಜನರಿಗೆ ನೀಡಲಿದೆ' ಎಂದು ಕಾಂಗ್ರೆಸ್ ನಾಯಕ ರಾಹುಲ್‌ಗಾಂಧಿ ಹೇಳಿದ್ದಾರೆ. ಜಾರ್ಖಂಡ್‌ನಲ್ಲಿ ಮಹಿಳೆಯರಿಗೆ ನೀಡಲಿರುವ ಗೌರವಧನವನ್ನು 2,500ಕ್ಕೆ ಏರಿಸಲು ಇಂಡಿಯಾ ಮೈತ್ರಿಕೂಟ ತೀರ್ಮಾನಿಸಿದೆ ಎಂದು ಹೇಳಿದ್ದಾರೆ.

ರಾಜ್ಯದಲ್ಲಿ ಕಾಂಗ್ರೆಸ್ -ಜಾರ್ಖಂಡ್ ಮುಕ್ತಿ ಮೋರ್ಚಾ ಮೈತ್ರಿ ಹೊಂದಿದ್ದು, ಅಧಿಕಾರ ಉಳಿಸಿಕೊಳ್ಳಲು ಯತ್ನಿಸುತ್ತಿದೆ. 81 ಸದಸ್ಯ ಬಲದ ವಿಧಾನಸಭೆಗೆ ನವೆಂಬರ್ 13, 20ರಂದು ಎರಡು ಹಂತದಲ್ಲಿ ಮತದಾನ ನಡೆಯಲಿದೆ. ನ.23ರಂದು ಮತಎಣಿಕೆ ನಡೆಯಲಿದೆ. ಮೈಯ್ಯಾ ಸಮ್ಮಾನ್ ಯೋಜನೆಯಡಿ ನೀಡುತ್ತಿರುವ ನೆರವಿನ 4ನೇ ಕಂತಿನ ಮೊತ್ತವು ಸೋಮವಾರ ಫಲಾನುಭವಿಗಳ ಖಾತೆಗೆ ಜಮೆಯಾಗಿದೆ. ಈ ಯೋಜನೆ ಮಹಿಳೆಯರಿಗೆ ಹಣದುಬ್ಬರದ ಪರಿಣಾಮ ಎದುರಿಸಲು ನೆರವಾಗಿದೆ.



ಯೋಜನೆಯಡಿ ನೆರವಿನ ಮೊತ್ತವನ್ನು ಇನ್ನಷ್ಟು ಏರಿಸಲು ನಿರ್ಧರಿಸಿದ್ದೇವೆ' ಎಂದು 'ಎಕ್ಸ್'ನಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ. ಡಿಸೆಂಬರ್‌ನಿಂದ ಜಾರಿಯಾಗುವಂತೆ ಮಾಸಿಕ 2,500 ಗೌರವಧನ ಸಿಗಲಿದೆ. ಇದರಿಂದ ಜಾರ್ಖಂಡ್‌ನ 53 ಲಕ್ಷ ಮಹಿಳೆಯರಿಗೆ ನೆರವಾಗಲಿದೆ ಎಂದೂ ತಿಳಿಸಿದ್ದಾರೆ. ನಾನು ಈ ಹಿಂದೆಯೂ ಹೇಳಿದ್ದೇನೆ. ಈಗಲೂ ಹೇಳುತ್ತಿದ್ದೇನೆ. ಬಿಜೆಪಿಯು ತನ್ನ ಶ್ರೀಮಂತ ಗೆಳೆಯರಿಗೆ ನೀಡಿದ್ದಕ್ಕಿಂತಲೂ ಹೆಚ್ಚಿನ ನೆರವನ್ನು ಇಂಡಿಯಾ ಮೈತ್ರಿಕೂಟವು ಮಹಿಳೆಯರು, ಯುವಜನರು, ರೈತರಿಗೆ, ನೀಡಲಿದೆ' ಎಂದು ಪುನರುಚ್ಚರಿಸಿದರು.

**'ಸೊಯಾಬೀನ್ ಹತ್ತಿ ಬೆಳೆಗಾರರ ಜೊತೆ ಸಂವಾದ ನಡೆಸಬೇಕಿತ್ತು. ಬಿಜೆಪಿ ಸರ್ಕಾರ ಸೂಕ್ತ ದರ ನೀಡುತ್ತಿಲ್ಲ ಎಂಬ ಅರಿವಿದೆ. 'ಇಂಡಿಯಾ' ಮೈತ್ರಿಕೂಟ ಅಧಿಕಾರಕ್ಕೆ ಬಂದ ಬಳಿಕ ನಿಮ್ಮ ಸಮಸ್ಯೆಗಳಿಗೆ ಸ್ಪಂದಿಸುತ್ತೇವೆ' ಎಂದಿದ್ದಾರೆ.**

ವಿಮಾನಯಾನಕ್ಕೆ ತಾಂತ್ರಿಕ ಸಮಸ್ಯೆ ರಾಹುಲ್ ಪ್ರಚಾರ ರ‍್ಯಾಲಿ ರದ್ದು ಬುಲ್‌ಧಾಣ (ಮಹಾರಾಷ್ಟ್ರ) ತಾಂತ್ರಿಕ ಸಮಸ್ಯೆಯಿಂದಾಗಿ ವಿಮಾನಯಾನ ರದ್ದಾದ ಕಾರಣ ಜಿಲ್ಲೆಯ ಚಿಕ್ಲಿಯಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಚುನಾವಣಾ ರ‍್ಯಾಲಿ ನಡೆಯಲಿಲ್ಲ. ಪಕ್ಷದ ಅಭ್ಯರ್ಥಿ ರಾಹುಲ್ ಬೊಂದ್ರೆ ಪರ ಪ್ರಚಾರ ನಡೆಸಲು ನಿಗದಿಯಂತೆ ರಾಹುಲ್‌ಗಾಂಧಿ ಅವರು ಮಧ್ಯಾಹ್ನ 12.30ಕ್ಕೆ ಬರಬೇಕಿತ್ತು. ಈ ಕುರಿತ ವಿಡಿಯೊ ಹೇಳಿಕೆಯಲ್ಲಿ ಅವರು ರ‍್ಯಾಲಿ ರದ್ದತಿಗೆ ಕಾರಣ ವಿವರಿಸಿದ್ದಾರೆ.

---

# ಜಾರ್ಖಂಡ್, ಪಶ್ಚಿಮ ಬಂಗಾಳದಲ್ಲಿ ಇಡಿ ದಾಳಿ




ಬಾಂಗ್ಲಾದೇಶಿಗರ ಅಕ್ರಮ ನುಸುಳುವಿಕೆ ಪ್ರಕರಣ


**ರಾಂಚಿ:** ಬಾಂಗ್ಲಾದೇಶಿ ಪ್ರಜೆಗಳ ಅಕ್ರಮ ಒಳನುಸುಳುವಿಕೆಗೆ ಸಂಬಂಧಿಸಿದಂತೆ ಪಶ್ಚಿಮ ಬಂಗಾಳ , ಜಾರ್ಖಂಡ್‌ನ ಹಲವು ಸ್ಥಳಗಳಲ್ಲಿ ಜಾರಿ ನಿರ್ದೇಶನಾಲಯ ಇಂದು ದಾಳಿ ನಡೆಸಿದೆ. ಒಟ್ಟು ಸುಮಾರು 17 ಸ್ಥಳಗಳಲ್ಲಿ ಕಾರ್ಯಾಚರನೆ ನಡೆದಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ. ಕೆಲವು ಬಾಂಗ್ಲಾದೇಶಿ ಮಹಿಳೆಯರನ್ನು ಜಾರ್ಖಂಡ್‌ಗೆ ಒಳನುಸುಳುವಿಕೆ ಮತ್ತು ಕಳ್ಳಸಾಗಣೆ ಮಾಡಲಾಗುತ್ತಿದೆ ಎಂಬ ಆರೋಪದ ಹಿನ್ನಲೆಯಲ್ಲಿ ಇಡಿ ಪ್ರಕರಣ ದಾಖಲಿಸಿದೆ. ಇತ್ತೀಚಿನ ಚುನಾವಣಾ ಪ್ರಚಾರದ ಸಂದರ್ಭದಲ್ಲಿ ಸಂತಾಲ್ ಪರಗಣ ಮತ್ತು ಕೊಲ್ಹಾನ್ ಪ್ರದೇಶಗಳ ಬುಡಕಟ್ಟು ಪ್ರಾಬಲ್ಯದ ಪ್ರದೇಶಗಳ ಜನಸಂಖ್ಯಾ ಭೂದೃಶ್ಯವನ್ನು ಬದಲಾಯಿಸಲು ರಾಜ್ಯ ಸರ್ಕಾರವು ಇಂತಹ ಒಳನುಸುಳುವಿಕೆಗೆ ಸಹಾಯ ಮಾಡುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಮತ್ತು ಇತರ ಬಿಜೆಪಿ ನಾಯಕರು ಆರೋಪಿಸಿದ್ದರು.

ಆಡಳಿತಾರೂಢ ಜೆಎಂಎಂ ನೇತೃತ್ವದ ಸರ್ಕಾರ ಜಾರ್ಖಂಡ್ ಅನ್ನು ರೋಹಿಂಗ್ಯಾಗಳು ಮತ್ತು ಬಾಂಗ್ಲಾದೇಶಿ ನುಸುಳುಕೋರರ ಧರ್ಮಶಾಲೆಯನ್ನಾಗಿ ಪರಿವರ್ತಿಸುತ್ತಿದೆ ಎಂದು ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಆರೋಪಿಸಿದ್ದರು.ಇದರ ಜೊತೆಗೆ ಜಾರ್ಖಂಡ್‌ನಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದ ನಂತರ ರಾಜ್ಯದಿಂದ ನುಸುಳುಕೋರರನ್ನು ಗುರುತಿಸಲು ಮತ್ತು ಗಡಿಪಾರು ಮಾಡಲು ಸಮಿತಿಯನ್ನು ರಚಿಸಲಾಗುವುದು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಘೋಷಿಸಿದರು. ನಾಳೆ ಮೊದಲ ಹಂತದ ವಿಧಾನಸಭೆ ಚುನಾವಣೆ 43 ಕ್ಷೇತ್ರಗಳಿಗೆ ನಡೆಯಲಿದ್ದು, ಎರಡನೇ ಹಂತದ 38 ಕ್ಷೇತ್ರಗಳಿಗೆ ನವೆಂಬರ್ 20ರಂದು ಮತದಾನ ನಡೆಯಲಿದೆ. ರಾಂಚಿಯ ಬರಿಯಾತು ಪೊಲೀಸ್ ಠಾಣೆಯಲ್ಲಿ ದಾಖಲಿಸಲಾದ ಎಫ್‌ಐಆರ್ ಅನ್ವಯ ಇಡಿ ಪಿಎಂಎಲ್‌ಎಯ ವಿವಿಧ ಸೆಕ್ಷನ್‌ಗಳ ಅಡಿಯಲ್ಲಿ ತನಿಖೆ ನಡೆಸುತ್ತಿದೆ. ಭಾರತ-ಬಾಂಗ್ಲಾದೇಶ ಗಡಿಯಿಂದ ಸ್ಥಳೀಯರ ಸಹಾಯದಿಂದ ದೇಶದೊಳಗೆ ನುಸುಳಿದ್ದ ಬಾಂಗ್ಲಾದೇಶದ ಮಹಿಳೆಯ ನೀಡಿದ್ದ ದೂರಿನನ್ವಯ ಪೊಲೀಸರು ಎಫ್‌ಐಆರ್ ದಾಖಲಿಸಿದ್ದು, ಸ್ಥಳೀಯರೊಬ್ಬರನ್ನು ನಂತರ ಬಂಧಿಸಿ ಸುಮಾರು ಆರು ಮಹಿಳೆಯರನ್ನು ಆರೋಪಿಗಳೆಂದು ಹೆಸರಿಸಲಾಗಿದೆ. ದೂರು ನೀಡಿದ ಮಹಿಳೆ ಇದೇ ಗೆಸ್ಟ್ ಹೌಸ್ ನಿಂದ ತಪ್ಪಿಸಿಕೊಂಡು ಠಾಣೆಗೆ ಬಂದಿದ್ದಾರೆ. ಈ ಮಹಿಳೆಯರಲ್ಲಿ ಒಬ್ಬರಿಂದ ನಕಲಿ ಆಧಾರ್ ಕಾರ್ಡ್ ಅನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

**ಬಾಂಗ್ಲಾದೇಶಿ ವಲಸಿಗರ ಒಳಹರಿವಿನ ಬಗ್ಗೆ ತನಿಖೆ ನಡೆಸಲು ಸ್ವತಂತ್ರ ಸಮಿತಿಯನ್ನು ಸ್ಥಾಪಿಸಲು ಹೈಕೋರ್ಟ್ ಆದೇಶದ ಹೊರತಾಗಿಯೂ ಜಾರ್ಖಂಡ್ ಸರ್ಕಾರವು ಒಳನುಸುಳುವಿಕೆ ಸಮಸ್ಯೆಯನ್ನು ಒಪ್ಪಿಕೊಳ್ಳಲು ನಿರಾಕರಿಸಿದೆ. ಅಕ್ರಮ ಬಾಂಗ್ಲಾ ವಲಸಿಗರು ರಾಜ್ಯದಲ್ಲಿ ನೆಲೆಸಿದ್ದಾರೆ ಎಂದು ಕೇಂದ್ರ ಸರ್ಕಾರ ಜಾರ್ಖಂಡ್ ಹೈಕೋರ್ಟ್ ಗೆ ಮಾಹಿತಿ ನೀಡಿತ್ತು. ಈ ಅಫಿಡವಿಟ್‌ಗೆ ಪ್ರತಿಕ್ರಿಯಿಸಿದ ಜೆಎಂಎಂ ಕೇಂದ್ರ ವಕ್ತಾರ ಸುಪ್ರಿಯೋ ಭಟ್ಟಾಚಾರ್ಯ ಅವರು, ಜಾರ್ಖಂಡ್‌ನಲ್ಲಿ ಒಳನುಸುಳುವಿಕೆ ನಡೆದಿದ್ದರೆ, ಕೇಂದ್ರ ಗೃಹ ಮತ್ತು ರಕ್ಷಣಾ ಸಚಿವಾಲಯಗಳು ಅದರ ಜವಾಬ್ದಾರಿಯನ್ನು ತೆಗೆದುಕೊಳ್ಳಬೇಕು ಎಂದರು.**

---

# ನಟ ಶಾರುಖ್ ಖಾನ್‌ಗೆ ಬೆದರಿಕೆ ಹಾಕಿದ್ದ ವಕೀಲನ ಬಂಧನ



**ಮುಂಬೈ:** ಬಾಲಿವುಡ್ ಬಾದ್ಶಾ ಶಾರುಖ್ ಖಾನ್‌ಗೆ ಕೊಲೆ ಬೆದರಿಕೆ ಹಾಕಿದ್ದ ವ್ಯಕ್ತಿಯನ್ನು ಛತ್ತೀಸ್ಗಢದಲ್ಲಿ ಬಂಧಿಸಲಾಗಿದೆ. ಶಾರುಖ್ಗೆ ಕರೆ ಮಾಡಿ 50 ಲಕ್ಷ ರೂ.ಗೆ ಬೇಡಿಕೆ ಇಟ್ಟಿದ್ದಕ್ಕಾಗಿ ಮೊಹಮದ್ ಫೈಜಾನ್ ಖಾನ್ ಎಂಬ ವಕೀಲನನ್ನು ಛತ್ತೀಸ್‌ಗಢದ ರಾಯ್ಪುರದ ಅವರ ನಿವಾಸದಲ್ಲಿ ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಮುಂಬೈ ಪೊಲೀಸರ ಮುಂದೆ ಹಾಜರಾಗಲು ವಿಫಲವಾದ ನಂತರ ಅವರನ್ನು ಬಂಧಿಸಲಾಯಿತು. ಕಳೆದ ವಾರ ಬೆದರಿಕೆ ಕರೆ ಮಾಡಲು ಬಳಸಲಾದ ತನ್ನ ಮೊಬೈಲ್ ಫೋನ್ನು ಯಾರೋ ಕದ್ದಿದ್ದಾರೆ ಎಂದು ಅವರು ಹೇಳಿದ್ದರು. ಪೊಲೀಸರು ಭಾರತೀಯ ನ್ಯಾಯ ಸಂಹಿತೆಯ (ಬಿಎನ್‌ಎಸ್) ಸೆಕ್ಷನ್ 308(4) (ಸಾವಿನ ಬೆದರಿಕೆ ಅಥವಾ ಗಂಭೀರ ಗಾಯದ ಬೆದರಿಕೆಗಳನ್ನು ಒಳಗೊಂಡ ಸುಲಿಗೆ) ಮತ್ತು 351(3)(4) (ಅಪರಾಧ ಬೆದರಿಕೆ) ಅಡಿಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಕಳೆದ ಅಕ್ಟೋಬರ್ನಲ್ಲಿ ಕೊಲೆ ಬೆದರಿಕೆ ಬಂದಿತ್ತು, ಇದಾದ ಬಳಿಕ ಶಾರುಖ್ಗೆ ವೈಪ್ಲಸ್ ಭದ್ರತೆ ಕಲ್ಪಿಸಲಾಗತ್ತು. ಕಳೆದ ವಾರ, ಸಲ್ಮಾನ್ ಖಾನ್ಗೆ ಜೀವ ಬೆದರಿಕೆ ಹಾಕಿದ ನಂತರ ರಾಜಸ್ಥಾನದ 32 ವರ್ಷದ ವ್ಯಕ್ತಿಯನ್ನು ಬಂಧಿಸಲಾಗಿತ್ತು. ಜೈಲಿನಲ್ಲಿರುವ ಗ್ಯಾಂಗ್ಸ್ಟರ್ ಲಾರೆನ್ಸ್ ಬಿಷ್ಣೋಯ್ ಅವರಿಂದ ಬೆದರಿಕೆಯನ್ನು ಸ್ವೀಕರಿಸಿದ ಒಂದು ದಿನದ ಬಳಿಕ ದೇವಸ್ಥಾನದಲ್ಲಿ ಸಲ್ಮಾನ್ ಖಾನ್ ಕ್ಷಮೆಯಾಚಿಸಬೇಕು ಅಥವಾ 5 ಕೋಟಿ ರೂ. ನೀಡಬೇಕು, ಇಲ್ಲವಾದರೆ ಬಾಬಾ ಸಿದ್ದಿಕಿಗಿಂತಲೂ ಭೀಕರ ಸಾವು ನಿಮದಾಗುತ್ತದೆ ಎಂದು ಬೆದರಿಕೆ ಹಾಕಿದ್ದರು. ಬಾಲಿವುಡ್ ನಟ ಸಲ್ಮಾನ್ ಖಾನ್ ಹಲವು ದಿನಗಳಿಂದ ಗ್ಯಾಂಗ್ಸ್ಟಾರ್‌ಗಳ ಕೆಂಗಣ್ಣಿಗೆ ಗುರಿ ಯಾಗಿದ್ದಾರೆ. ಸಲ್ಮಾನ್ ಹೆಸರಿನಲ್ಲಿ ಒಂದರ ಹಿಂದೆ ಒಂದರಂತೆ ಬೆದರಿಕೆಗಳು ಬರುತ್ತಿವೆ. ನಟನ ಭದ್ರತೆಯನ್ನು ಹೆಚ್ಚಿಸಲಾಗಿದೆ ಮತ್ತು ಪೊಲೀಸರು ಪ್ರಕರಣವನ್ನು ತ್ವರಿತವಾಗಿ ತನಿಖೆ ನಡೆಸುತ್ತಿದ್ದಾರೆ.

---

# ತೆಲಂಗಾಣ ಸಿಎಂ ರೇವಂತ್ ರೆಡ್ಡಿ ಭ್ರಷ್ಟಾಚಾರದ ವಿರುದ್ಧ ಖಟ್ಟರ್ ಅವರಿಗೆ ದೂರು



**ಹೈದರಾಬಾದ್:** ಅಮತ್ ಯೋಜನೆಗೆ ಸಂಬಂಧಿ ಸಿದ ಟೆಂಡರ್‌ಗಳಲ್ಲಿ ಮುಖ್ಯಮಂತ್ರಿ ಎ.ರೇವಂತ್ ರೆಡ್ಡಿ ಅವರ ಕುಟುಂಬ ಭ್ರಷ್ಟಾಚಾರ ನಡೆಸಿದೆ ಎಂದು ಆರೋಪಿಸಿ ಬಿಆರ್‌ಎಸ್ ಕಾರ್ಯಕಾರಿ ಅಧ್ಯಕ್ಷ ಕೆ. ಟಿ.ರಾಮರಾವ್ ಅವರು ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವ ಮನೋಹರ್ ಲಾಲ್ ಖಟ್ಟರ್ ಅವರನ್ನು ಭೇಟಿಯಾಗಿ ಪತ್ರ ಸಲ್ಲಿಸಿದರು. ರಾವ್ ಅವರು ದೆಹಲಿಯಲ್ಲಿ ಖಟ್ಟರ್ ಅವರನ್ನು ಭೇಟಿಯಾಗಿ ಸಿಎಂ ರೇವಂತ್ ರೆಡ್ಡಿ ಕುಟುಂಬ ನಡೆಸುತ್ತಿ ರುವ ಭ್ರಷ್ಟಾಚಾರದ ದಾಖಲೆಗಳನ್ನು ನೀಡಿದ್ದರೆ ಎಂದು ಬಿಆರ್‌ಎಸ್ ತಿಳಿಸಿದೆ.

ಏತನಧ್ಯೆ, ರಾವ್ ಅವರ ದೆಹಲಿ ಪ್ರವಾಸವು ವಾಸ್ತವವಾಗಿ ದೆಹಲಿ ಗಣ್ಯರ ಸಹಾಯವನ್ನು ಪಡೆಯುವ ಗುರಿಯನ್ನು ಹೊಂದಿದೆ ಎಂದು ರಾಜ್ಯ ಕಂದಾಯ ಸಚಿವ ಪೊಂಗುಲೇಟಿ ಶ್ರೀನಿವಾಸ್ ರೆಡ್ಡಿ ಆರೋಪಿಸಿದ್ದಾರೆ, ಏಕೆಂದರೆ ಅವರ ವಿರುದ್ಧ ಎಫ್‌ಐಆರ್ ದಾಖಲಿಸುವ ರಾಜ್ಯ ಸರ್ಕಾರದ ಮನವಿಗೆ ಶೀಘ್ರದಲ್ಲೇ ರಾಜ್ಯಪಾಲರ ಅನುಮೋದನೆ ಸಿಗುವ ನಿರೀಕ್ಷೆಯಿದೆ ಎಂದು ಆರೋಪಿಸಲಾಗಿದೆ.

ಹೈದರಾಬಾದ್ನಲ್ಲಿ ಫಾರ್ಮುಲಾ-ಇ ರೇಸ್ ನಡೆಸಲು ಸಂಬಂಧಿಸಿದಂತೆ ಹಿಂದಿನ ಬಿಆರ್‌ಎಸ್ ಆಡಳಿತಾವಧಿಯಲ್ಲಿ ನಡೆದ ಅಕ್ರಮಗಳ ಬಗ್ಗೆ ರಾವ್ ವಿರುದ್ಧ ಎಫ್‌ಐಆರ್ ದಾಖಲಿಸಲು ಅನುಮತಿ ಕೋರಿ ತೆಲಂಗಾಣ ಸರ್ಕಾರ ರಾಜ್ಯಪಾಲ ಜಿಷ್ಣು ದೇವ್ ವರ್ಮಾ ಅವರಿಗೆ ಪತ್ರ ಬರೆದಿತ್ತು. ಈಗ ಶಾಸಕರಾಗಿರುವ ರಾವ್ ಅವರು ಬಿಆರ್‌ಎಸ್ ಸರ್ಕಾರದಲ್ಲಿ ಪೌರಾಡಳಿತ ಸಚಿವರಾಗಿದ್ದರು.

---

# ಅಲಿಗಢ ಮುಸ್ಲಿಂ ವಿ.ವಿ.: ಮುಸ್ಲಿಮರಿಗೆ ಮೀಸಲಾತಿ ಇಲ್ಲ

**ಅಲಿಗಢ:** ಅಲಿಗಢ ಮುಸ್ಲಿಂ ವಿಶ್ವವಿದ್ಯಾಲಯದಲ್ಲಿ (ಎಎಂಯು) ಉದ್ಯೋಗದಲ್ಲಿ ಮತ್ತು ವಿವಿಧ ಕೋರ್ಸ್‌ಗಳಿಗೆ ಪ್ರವೇಶ ಕಲ್ಪಿಸುವಾಗ ಧರ್ಮದ ಆಧಾರದಲ್ಲಿ ಮುಸ್ಲಿಮರಿಗೆ ಮೀಸಲಾತಿ ನೀಡಲಾಗುತ್ತಿದೆ ಎಂಬ ಮಾತುಗಳನ್ನು ವಿಶ್ವವಿದ್ಯಾಲಯವು ಅಲ್ಲಗಳೆದಿದೆ. ಆ ರೀತಿಯಲ್ಲಿ ಮೀಸಲಾತಿ ನೀಡುವ ವ್ಯವಸ್ಥೆ ತನ್ನಲ್ಲಿಲ್ಲ ಎಂದು ಅದು ಸ್ಪಷ್ಟಪಡಿಸಿದೆ. ಎಎಂಯುವಿನ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆ ಸ್ಥಾನದ ಕುರಿತು ಹೊಸ ನ್ಯಾಯಪೀಠ ನಿರ್ಣಯಿಸಲಿದೆ ಎಂದು ಸುಪ್ರೀಂ ಕೋರ್ಟ್ ತೀರ್ಪು ನೀಡಿದ ಕೆಲವೇ ದಿನಗಳಲ್ಲಿ ವಿಶ್ವವಿದ್ಯಾಲಯವು ಈ ಸ್ಪಷ್ಟನೆ ನೀಡಿದೆ.

ಕೆಲವು ಮಾಧ್ಯಮಗಳಲ್ಲಿ ವರದಿಯಾಗಿರುವಂತೆ, ಅಲಿಗಢ ಮುಸ್ಲಿಂ ವಿಶ್ವವಿದ್ಯಾಲಯವು ಮುಸ್ಲಿಂ ಅಭ್ಯರ್ಥಿಗಳಿಗೆ ವಿವಿಧ ಕೋರ್ಸ್‌ಗಳಿಗೆ ಪ್ರವೇಶದಲ್ಲಿ ಅಥವಾ ನೇಮಕಾತಿಯಲ್ಲಿ ಮೀಸಲಾತಿ ನೀಡುವುದಿಲ್ಲ' ಎಂದು ವಿಶ್ವವಿದ್ಯಾಲಯದ ಸಾರ್ವಜನಿಕ ಸಂಪರ್ಕ ಕಚೇರಿಯ ಪ್ರೊ. ಮೊಹಮ್ಮದ್ ಆಸಿಂ ಸಿದ್ದಿಕಿ ಹೇಳಿದ್ದಾರೆ.



ನವೆಂಬರ್ 9ರಂದು ನಡೆದ ರ‍್ಯಾಲಿಯೊಂದರಲ್ಲಿ ಮಾತನಾಡಿದ್ದ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ ಅವರು, ದೇಶದ ಸಂಪನ್ಮೂಲಗಳಿಂದ ಬೆಳೆದ, ಜನರ ತೆರಿಗೆ ಹಣದಲ್ಲಿ ನಡೆಯುವ ಸಂಸ್ಥೆಯೊಂದು, ಹಿಂದುಳಿದ ವರ್ಗದವರಿಗೆ, ಪರಿಶಿಷ್ಟ ಜಾತಿಗಳಿಗೆ, ಬುಡಕಟ್ಟು ಸಮುದಾಯಗಳಿಗೆ ಮೀಸಲಾತಿ ನೀಡುತ್ತಿಲ್ಲ. ಆದರೆ ಅದು ಮುಸ್ಲಿಮರಿಗೆ ಶೇ 50ರಷ್ಟು ಮೀಸಲಾತಿ ಕಲ್ಪಿಸುತ್ತಿದೆ' ಎಂದು ದೂರಿದ್ದರು.


**ನಮ್ಮ ವಿಶ್ವವಿದ್ಯಾಲಯವು ನಡೆಸುವ ಶಾಲೆಗಳಿಂದ ಬರುವ ವಿದ್ಯಾರ್ಥಿಗಳಿಗಾಗಿ ಎಎಂಯು ಆಂತರಿಕ ಕೋಟಾ ವ್ಯವಸ್ಥೆ ಹೊಂದಿದೆ. ಈ ವಿದ್ಯಾರ್ಥಿಗಳು ಎಎಂಯುನಲ್ಲಿ ಪ್ರವೇಶ ಕೋರಿದಾಗ, ಅವರು ಯಾವುದೇ ಧರ್ಮಕ್ಕೆ ಸೇರಿರಲಿ ಅವರಿಗೆ ಶೇಕಡ 50ರಷ್ಟು ಸೀಟುಗಳನ್ನು ಮೀಸಲಾಗಿ ಇಡಲಾಗುತ್ತದೆ' ಎಂದು ಪ್ರಕಟಣೆಯಲ್ಲಿ ಅವರು ಹೇಳಿದ್ದಾರೆ.**

---

# ಅಜ್ಜಿ ಮೊಮ್ಮಗನಿಗೆ ರಾಮಾಯಣ ವಿವರಿಸುವ ಪರಿ ಮೆಚ್ಚುಗೆಗೆ ಪಾತ್ರ

## ವಿಮಾನಯಾನ ಸಂಸ್ಥೆಯಿಂದ ರಾಮಾಯಣ ಪೌರಾಣಿಕ ಸ್ಥಳಗಳ ದರ್ಶನ; 'ದಿ ರಾಮಾಯಣ ಟ್ರಯಲ್ ಜಾಹೀರಾತು ವೈರಲ್

**ಕೊಲೊಂಬೊ:** ಶ್ರೀಲಂಕಾ ವಿಮಾನಯಾನ ಸಂಸ್ಥೆಯೊಂದು ರಾಮಾಯಣವನ್ನು ಆಧರಿಸಿದ ಹಾಗೂ ಅದರಲ್ಲಿ ಉಲ್ಲೇಖಗೊಂಡಿರುವ ಪೌರಾಣಿಕ ಸ್ಥಳಗಳ ಕುರಿತು ಬಿತ್ತರಿಸಿರುವ ಜಾಹೀರಾತು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. 'ದಿ ರಾಮಾಯಣ ಟ್ರಯಲ್' ಎಂಬ ಜಾಹೀರಾತಿನಲ್ಲಿ ಅಜ್ಜಿಯೊಬ್ಬರು ರಾಮಾಯಣದ ಪುಸ್ತಕ ಹಿಡಿದು ಮೊಮ್ಮಗನಿಗೆ ಪೌರಾಣಿಕ ಕಥೆಯನ್ನು ವಿವರಿಸುತ್ತಾರೆ. ಹೀಗೆ ಸಾಗುತ್ತಿದ್ದಂತೆ, ಶ್ರೀಲಂಕಾದ ಹಲವು ಸ್ಥಳಗಳ ದರ್ಶನವಾಗುತ್ತಾ ಸಾಗುತ್ತದೆ. ಈ ಜಾಹೀರಾತನ್ನು ಶ್ರೀಲಂಕನ್ ಏರ್‌ಲೈನ್ಸ್ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದೆ.



ದಿ ರಾಮಾಯಣ ಟ್ರಯಲ್

ಮೊಮ್ಮಗನ ಕುತೂಹಲದ ಪ್ರಶ್ನೆಗಳಿಗೆ ಚಿತ್ರಗಳುಳ್ಳ ಪುಟಗಳ ತಿರುವಿ ಹಾಕುತ್ತಾ ವಿವರಿಸುವ ಅಜ್ಜಿ, ಸೀತೆಯನ್ನು ವಿಮಾನ ಮೂಲಕ ಅಪಹರಿಸಿದ ರಾವಣನಿಂದ ಆರಂಭಿಸಿ, ರಾವಣನನ್ನು ಕೊಂದು ಸೀತೆಯನ್ನು ಅಯೋಧ್ಯೆಗೆ ರಾಮ ಕರೆದೊಯ್ಯುವ, ವಿಭೀಷಣನ ಪಟ್ಟಾಭಿಷೇಕದವರೆಗೂ ಸಾಗುವ ರಾಮಾಯಣದ ಕಥೆಯನ್ನು ಸ್ಥಳ ಮಹಿಮೆ ಸಹಿತ ವಿವರಿಸುತ್ತಾ ಸಾಗುತ್ತಾರೆ. ಈ ಜಾಹೀರಾತಿಗೆ ಹಲವರು ಪ್ರತಿಕ್ರಿಯಿಸಿದ್ದಾರೆ.

**ಜಪಾನ್ ಬದಲಿಗೆ ಶ್ರೀಲಂಕಾದತ್ತ ಎಂದ ಟೆಕ್ಕಿ:** ಸ್ನೇಹಿತರೆಲ್ಲರೂ ಸೇರಿ ಟೋಕಿಯೊಗೆ ಹೋಗುವ ಯೋಜನೆ ರೂಪಿಸಿದ್ದೆವು. ಆದರೆ, ಈ ಜಾಹೀರಾತು ನಮ್ಮನ್ನು ಶ್ರೀಲಂಕಾದತ್ತ ನೋಡುವಂತೆ ಮಾಡಿದೆ, ಎಂದು ಟೆಕ್ಕಿಯೊಬ್ಬರು ಪ್ರತಿಕ್ರಿಯೆ ನೀಡಿದ್ದಾರೆ.

**ಕೇರಳದಲ್ಲಿ ಸಮುದ್ರ ವಿಮಾನಗಳು:** ಕೇರಳ ಪ್ರವಾಸೋದ್ಯಮ ಕನಸುಗಳಿಗೆ ಹೊಸ ಉತ್ತೇಜನ ನೀಡುತ್ತಿರುವ ಸಮುದ್ರ ವಿಮಾನಗಳು ಕೇರಳದಲ್ಲಿ ಹಾರಾಡುತ್ತಿವೆ. ಉದ್ಘಾಟನೆಯ ಅಂಗವಾಗಿ ಬೋಲ್ಗಟ್ಟಿಯಿಂದ ಸಮುದ್ರ ವಿಮಾನವು ಮಟ್ಟುಪೆಟ್ಟಿ ಅಣೆಕಟ್ಟಿನಲ್ಲಿಇಳಿಯಿತು. ಪ್ರಾಯೋಗಿಕ ಯಶಸ್ಸಿನೊಂದಿಗೆ ಕೇರಳ ಪ್ರವಾಸೋದ್ಯಮ ಕ್ಷೇತ್ರದಲ್ಲಿ ಭಾರಿ ಉತ್ತೇಜನ ನಿರೀಕ್ಷಿಸಲಾಗಿದೆ.

ಇತ್ತೀಚೆಗೆ ನಡೆದ ಉದ್ಘಾಟನಾ ಸಮಾರಂಭದಲ್ಲಿ ಕೇರಳ ಪ್ರವಾಸೋದ್ಯಮ ಖಾತೆ ಸಚಿವ ಮೊಹಮ್ಮದ್ ರಿಯಾಜ್, ಕಾನೂನು ಸಚಿವ ಪಿ. ರಾಜೀವ್ , ಸಾರ್ವಜನಿಕ ಶಿಕ್ಷಣ ಸಚಿವ ವಿ. ಶಿವನ್ ಕುಟ್ಟಿ ಉಪಸ್ಥಿತರಿದ್ದರು. ನಂತರ ಸಚಿವರೂ ಜಲ ವಿಮಾನದಲ್ಲಿ ಪ್ರಯಾಣಿಸಿದರು. ಈ ವೇಳೆ ಪ್ರವಾಸೋದ್ಯಮ ಖಾತೆ ಸಚಿವ ಮುಹಮ್ಮದ್ ರಿಯಾಝ್ ಮಾತನಾಡಿ, ರಾಜ್ಯದ ಅಭಿವೃದ್ಧಿಗೆ ಜನಸಾಂದ್ರತೆ ಅಡ್ಡಿಯಾಗಿದೆ. ಭೂ ಸ್ವಾಧೀನಪಡಿಸಿಕೊಳ್ಳುವುದು ಒಂದು ಸವಾಲಾಗಿದೆ. ಒಳನಾಡಿನ ಪ್ರವಾಸಿ ವಲಯ ತಲುಪುವುದೇ ಸವಾಲಾಗಿದೆ. ಸೀ ಪ್ಲೇನ್‌ನಿಂದ ಈ ಇತಿಮಿತಿಯನ್ನು ಮೀರಬಹುದು ಎಂದು ರಿಯಾಜ್ ಹೇಳಿದರು. ಮುಂದಿನ ದಿನಗಳಲ್ಲಿಸಮುದ್ರ ವಿಮಾನಗಳನ್ನು ಪರಿಚಯಿಸಲು ಸರಕಾರ ಎದುರು ನೋಡುತ್ತಿದೆ ಎಂದರು.

**ಅರಣ್ಯ ಇಲಾಖೆಯಿಂದ ಕಳವಳ:** ಉದ್ಘಾಟನೆ ಬಳಿಕ ಅರಣ್ಯ ಇಲಾಖೆ ಸೀ ಪ್ಲೇನ್ ಯೋಜನೆಗೆ ಕಳವಳ ವ್ಯಕ್ತಪಡಿಸಿದೆ. ಅರಣ್ಯ ಇಲಾಖೆ ಮಟ್ಟುಪೆಟ್ಟಿ ಅಣೆಕಟ್ಟನ್ನು ಯೋಜನೆಯ ಭಾಗವಾಗಿಸುವುದೇ ವಿರೋಧ ವ್ಯಕ್ತಪಡಿಸಿದೆ. ವಿಮಾನ ಇಳಿ ಯುವುದರಿಂದ ಕಾಡಾನೆಗಳ ಉಪಟಳ ಹೆಚ್ಚಾಗಲಿದೆ, ಈ ಹಿಂದೆ ನಡೆಸಿದ ಜಂಟಿ ತಪಾಸಣೆ ವೇಳೆ ಅರಣ್ಯ ಇಲಾಖೆ ಆತಂಕ ವ್ಯಕ್ತಪಡಿಸಿತ್ತು. ಪ್ರಸ್ತುತ ಪ್ರಾಯೋಗಿಕವಾಗಿ ಇಳಿಯಲು ಯಾವುದೇ ಅಭ್ಯಂತರವಿಲ್ಲ ಎಂದು ಅರಣ್ಯ ಇಲಾಖೆಯೂ ಮಾಹಿತಿ ನೀಡಿದೆ. ಅಣೆಕಟ್ಟಿನ ಮೇಲೆ ಸೀ ಪ್ಲೇನ್ ಓಡಿಸುವುದು ಸಮಸ್ಯೆಯಾಗುವುದಿಲ್ಲ ಎಂದು ಸಚಿವರು ತಿಳಿಸಿದರು. ಸೀ ಪ್ಲೇನ್ ಯೋಜನೆಯು ಪ್ರವಾಸೋದ್ಯಮ ಕ್ಷೇತ್ರದ ಮುಖವನ್ನು ಬದಲಾಯಿಸಲಿದೆ. ಜನ ಸಾಮಾನ್ಯ ಸಹ ಸಮುದ್ರ ವಿಮಾನದಲ್ಲಿ ತಂಡವಾಗಿ ಪ್ರವಾಸವಾಗಿ ಪ್ರಯಾಣಿಸಬಹುದು. ಕಡಿಮೆ ದರದಲ್ಲಿ ವಿಮಾನ ಪ್ರಯಾಣವನ್ನು ಪರಿಚಯಿಸುವುದು ಸರಕಾರದ ಉದ್ದೇಶವಾಗಿದೆ ಎಂದು ಮಹಮ್ಮದ್ ರಿಯಾಜ್ ಹೇಳಿದರು.

### ಜಾಲತಾಣದಲ್ಲಿ ವೈರಲ್

**ಶ್ರೀಲಂಕಾ ವಿಮಾನಯಾನ ಸಂಸ್ಥೆಯೊಂದು ರಾಮಾಯಣವನ್ನು ಆಧರಿಸಿದ ಪೌರಾಣಿಕ ಸ್ಥಳಗಳ ಕುರಿತು ಪ್ರವಾಸದ ಜಾಹೀರಾತು ಬಿತ್ತರಿಸಿದೆ. ಅದರಲ್ಲಿ ಬರುವ ಅಜ್ಜಿ ಮೊಮ್ಮಗನ ಸಂಭಾಷಣೆ ಹಾಗೂ ಅಜ್ಜಿ ಮೊಮ್ಮಗನಿಗೆ ರಾಮಾಯಣ ವಿವರಿಸುವ ಪರಿ ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದೆ. ಸದ್ಯ ಜಾಹೀರಾತು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.**

- **ಶ್ರೀಲಂಕಾ ವಿಮಾನಯಾನ ಸಂಸ್ಥೆಯೊಂದು ರಾಮಾಯಣವನ್ನು ಆಧರಿಸಿದ ಟೂರ್ ಪ್ಯಾಕೇಜ್ ಆಯೋಜನೆ.**
- **ರಾಮಾಯಣದ ಪೌರಾಣಿಕ ಸ್ಥಳಗಳ ಕುರಿತು ಬಿತ್ತರಿಸಿರುವ ಜಾಹೀರಾತು ಸಾಮಾಜಿಕ ಜಾಲತಾಣದಲ್ಲಿ ವೈರಲ್**

---

## ಮಿನಿ ನ್ಯೂಸ್

### ವಿಶ್ವಸಂಸ್ಥೆಯಲ್ಲಿ ಭದ್ರತಾ ಮಂಡಳಿಯ ಚೌಕಟ್ಟು ತಿರುಚುವ ಪ್ರಯತ್ನ

**ವಿಶ್ವಸಂಸ್ಥೆ:** ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಚೌಕಟ್ಟನ್ನು ತಿರುಚುವ ಪ್ರಯತ್ನಗಳ ವಿರುದ್ಧ ಭಾರತ ಎಚ್ಚರಿಕೆ ನೀಡಿದೆ. ಇಂತಹ ಕ್ರಮಗಳು ಶಾಶ್ವತ ಸದಸ್ಯತ್ವದ ವಿಸ್ತರಣೆ ಮತ್ತು ಏಷ್ಯಾ, ಆಫ್ರಿಕಾ ಮತ್ತು ಲ್ಯಾಟಿನ್ ಅಮೆರಿಕದ ಕಡಿಮೆ ಪ್ರಾತಿನಿಧ್ಯವನ್ನು ಪರಿಹರಿಸುವಂತಹ ಮಹತ್ವದ ಅಂಶಗಳನ್ನು ಅನಿರ್ದಿಷ್ಟವಾಗಿ ಮುಂದೂಡುವ ಹುನ್ನಾರವಾಗಿದೆ ಎಂದು ಆರೋಪಿಸಿದೆ. ಭದ್ರತಾ ಮಂಡಳಿಯ ಸದಸ್ಯತ್ವದಲ್ಲಿ ಸಮಾನ ಪ್ರಾತಿನಿಧ್ಯ ಮತ್ತು ಹೆಚ್ಚಳದ ಪ್ರಶ್ನೆ ಕುರಿತು ವಿಶ್ವಸಂಸ್ಥೆಯ ವಾರ್ಷಿಕ ಸಾಮಾನ್ಯ ಸಭೆಯಲ್ಲಿ ಭಾರತದ ಖಾಯಂ ಪ್ರತಿನಿಧಿ ಪಿ.ಹರೀಶ್ ಈ ಹೇಳಿಕೆ ನೀಡಿದ್ದಾರೆ.

ಯುಎನ್‌ಎಸ್ಸಿ ಸುಧಾರಣೆಯ ತುರ್ತು ಅಗತ್ಯವನ್ನು ಹಲವಾರು ದಶಕಗಳಿಂದ ಸಾಮೂಹಿಕವಾಗಿ ಪುನರುಚ್ಚರಿಸಿದರೂ, 1965ರಿಂದ ಕೌನ್ಸಿಲ್ ಅನ್ನು ಕೊನೆಯದಾಗಿ ಶಾಶ್ವತವಲ್ಲದ ವಿಭಾಗದಲ್ಲಿ ವಿಸ್ತರಿಸಿದಾಗಿನಿಂದ ಈ ನಿಟ್ಟಿನಲ್ಲಿ ತೋರಿಸಲು ನಮಗೆ ಯಾವುದೇ ಫಲಿತಾಂಶಗಳಿಲ್ಲ ಎಂಬುದು ನಿರಾಶಾದಾಯಕವಾಗಿದೆ ಎಂದು ಅವರು ಹೇಳಿದರು. ಪರಿಷತ್ತಿನ ಸದಸ್ಯತ್ವವನ್ನು 1965 ರಲ್ಲಿ ಆರು ಚುನಾಯಿತ ಸದಸ್ಯರಿಂದ 10 ಕ್ಕೆ ವಿಸ್ತರಿಸಲಾಯಿತು.

### ಮಲ್ಲಿಕಾರ್ಜುನ ಖರ್ಗೆಗೆ ಪ್ರಮೋದ್ ಕೃಷ್ಣಂ ತಿರುಗೇಟು

**ಸಂಭಾಲ್:** ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರ ಬಗ್ಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೀಡಿರುವ ಹೇಳಿಕೆಗೆ ಮಾಜಿ ಕಾಂಗ್ರೆಸ್ ನಾಯಕ ಹಾಗೂ ಕಲ್ಕಿ ಪೀಠಾಧೀಶ್ವರ ಆಚಾರ್ಯ ಪ್ರಮೋದ್ ಕಷ್ಣಂ ತಿರುಗೇಟು ನೀಡಿದ್ದಾರೆ. ನಾಗ್ಪುರದಲ್ಲಿ ನಡೆದ ಚುನಾವಣಾ ರ‍್ಯಾಲಿಯಲ್ಲಿ ಆದಿತ್ಯನಾಥ್ ಅವರ ಬಟೆಂಗೆ ತೋ ಕಟೆಂಗೆ ಘೋಷಣೆಗಾಗಿ ಖರ್ಗೆ ಅವರನ್ನು ತರಾಟೆಗೆ ತೆಗೆದುಕೊಂಡಿದ್ದರು. ಒಂದು ದಿನದ ನಂತರ ಜಾರ್ಖಂಡ್ ಚುನಾವಣಾ ರ‍್ಯಾಲಿಯಲ್ಲಿ ಮಾತನಾಡಿದ ಖರ್ಗೆ ಅವರು, ನಿಜವಾದ ಯೋಗಿ ಬಟೆಂಗೆ ತೋ ಕಟೆಂಗೆ ನಂತಹ ಭಾಷೆಯನ್ನು ಬಳಸಲು ಸಾಧ್ಯವಿಲ್ಲ. ಈ ಭಾಷೆಯನ್ನು ಭಯೋತ್ಪಾದಕರು ಬಳಸುತ್ತಾರೆ. ಯೋಗಿ ಮಠವೊಂದರ ಮುಖ್ಯಸ್ಥರು, ಕೇಸರಿ ಬಟ್ಟೆಗಳನ್ನು ಧರಿಸುತ್ತಾರೆ, ಆದರೆ ಮುಖ್ ಮೇ ರಾಮ್ ಬಾಗಲ್ ಮೇ ಛುರಿಅನ್ನು ನಂಬುತ್ತಾರೆ ಎಂದು ಹೇಳಿದ್ದರು. ನಿಜವಾಗಿಯೂ ಅಖಂಡ ದೇಶವನ್ನು ಬಯಸುವವರು ಇಂತಹ ಹೇಳಿಕೆಗಳಿಂದ ದೂರವಿರಬೇಕು ಎಂದು ಖರ್ಗೆ ಹೇಳಿದರು. ಖರ್ಗೆ ಹೇಳಿಕೆಗೆ ಪ್ರತಿಕ್ರಿಯಿಸಿದ ಕಷ್ಣಂ, ಮಲ್ಲಿಕಾರ್ಜುನ ಖರ್ಗೆ ಅವರ ಹೆಸರು ಅವರು ಹಿಂದೂ ಎಂದು ಸೂಚಿಸುತ್ತದೆ, ಆದರೆ ಅವರ ಕಾರ್ಯಗಳು ಅದನ್ನು ಪ್ರತಿಬಿಂಬಿಸುವುದಿಲ್ಲ ಎಂದು ತಿರುಗೇಟು ನೀಡಿದ್ದಾರೆ

### ಥಾಣೆಯಲ್ಲಿ ವ್ಯಾನ್‌ನಲ್ಲಿ ಸಾಗಿಸುತ್ತಿದ್ದ 3.7 ಕೋಟಿ ನಗದು ವಶ

**ಥಾಣೆ:** ಚುನಾವಣಾ ಅಧಿಕಾರಿಗಳು ಬಿಲ್ಡರ್ ಬಂಗಲೆ ಮತ್ತು ವ್ಯಾನ್‌ನಲ್ಲಿ ಸಾಗಿಸುತ್ತಿದ್ದ 3.7 ಕೋಟಿ ರೂಪಾಯಿ ಹಣವನ್ನು ಇಲ್ಲಿ ವಶಪಡಿಸಿಕೊಂಡಿದ್ದಾರೆ. ಮಾಹಿತಿ ಸುಳಿವಿನ ಮೇರೆಗೆ ಪೊಲೀಸರು ಹಾಗು ಚುನಾವಣಾ ಅಧಿಕಾರಿಗಳ ತಂಡ ಕಳೆದ ರಾತ್ರಿ ನವಿ ಮುಂಬೈನ ನೆರೂಲ್ ಪ್ರದೇಶದಲ್ಲಿರುವ ಮನೆಯೊಂದರ ಮೇಲೆ ಮೇಲೆ ದಾಳಿ ನಡೆಸಿ ಅಲ್ಲಿಂದ 2.5 ಕೋಟಿ ರೂಪಾಯಿ ಹಣವನ್ನು ವಶಪಡಿಸಿಕೊಂಡಿದ್ದಾರೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಹಣದ ಮೂಲ ಮತ್ತು ಅದು ಯಾರಿಗೆ ಸೇರಿದ್ದು ಎಂಬ ಬಗ್ಗೆ ತನಿಖೆ ನಡೆಸಲಾಗುತ್ತಿದೆ ಎಂದು ಅವರು ಹೇಳಿದರು. ಮತ್ತೊಂದು ಕಾರ್ಯಾಚರಣೆಯಲ್ಲಿ, ಫ್ಲೈಯಿಂಗ್ ಸ್ಕ್ವಾಡ್ ಮತ್ತು ಪೊಲೀಸರು ಭಿವಂಡಿಯಿಂದ ಕಲ್ಯಾಣ್ ಕಡೆಗೆ ಹೋಗುತ್ತಿದ್ದಾಗ ವಾಹನವು ಬಾಪಗಾಂವ್ ಬಳಿ ನಿಲ್ಲಿಸಿ ತಪಾಸನೆ ನಡೆಸಿದಾಗ 1.2 ಕೋಟಿ ರೂಪಾಯಿ ನಗದು ಹಣ ಪತ್ತೆಯಾಗಿದೆ ಎಂದು ಚುನಾವಣಾ ಅಧಿಕಾರಿಗಳು ತಿಳಿಸಿದ್ದಾರೆ. ವಾಹನದಲ್ಲಿದ್ದವರು ಹಣದ ಬಗ್ಗೆ ತೃಪ್ತಿಕರ ಪುರಾವೆಗಳನ್ನು ನೀಡಲು ಸಾಧ್ಯವಾಗದ ಕಾರಣ ಹಣವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅವರು ಹೇಳಿದರು. ಇದೇ ನವೆಂಬರ್ 20 ರಂದು ರಾಜ್ಯ ವಿಧಾನಸಭಾ ಚುನಾವಣೆ ನಿಗದಿಯಾಗಿದ್ದು ಭಾರಿ ಪ್ರಮಾಣದಲ್ಲಿ ಅಕ್ರಮ ಹಣ ಸಾಗಾಣಿಕೆ ಪತ್ತೆಯಾಗಿದೆ.

### ನಿರ್ಮಾಣ ಹಂತದ ಮೋರಿಗೆ ಬಿದ್ದ ಕಾರು ನಾಲ್ವರು ಸಾವು, ಇಬ್ಬರು ಗಂಭೀರ



**ಗುವಾಹಟಿ:** ನಿರ್ಮಾಣ ಹಂತದಲ್ಲಿದ್ದ ಮೋರಿಗೆ ಕಾರೊಂದು ಬಿದ್ದ ಪರಿಣಾಮ ಕಾರಿನಲ್ಲಿದ್ದ ನಾಲ್ವರು ಪ್ರಯಾಣಿಕರು ಸಾವನ್ನಪ್ಪಿದ್ದು, ಇಬ್ಬರು ಗಂಭೀರ ಗಾಯಗೊಂಡಿರುವ ಘಟನೆ ಅಸ್ಸಾಂನ ತಿನ್ಸುಕಿಯಾದಲ್ಲಿ ನಡೆದಿದೆ. ಒಂದೇ ಕುಟುಂಬದ ಆರು ಮಂದಿ ಬಿಹಾರದಿಂದ ಮದುವೆಗೆಂದು ತಿನ್ಸುಕಿಯಾಗೆ ತೆರಳುತ್ತಿದ್ದ ವೇಳೆ ಅಪಘಾತ ಸಂಭವಿಸಿದೆ. ಮಂಗಳವಾರ ಮುಂಜಾನೆ 4 ಗಂಟೆಯ ವೇಳೆಗೆ ಘಟನೆ ಸಂಭವಿಸಿದೆ. ತಿನ್ಸುಕಿಯಾ-ದಿಬ್ರುಗಢ್ ಮಾರ್ಗದ ದಿಹಿಂಗಿಯಾ ಗಾಂವ್‌ನ ಬೈಪಾಸ್‌ನಲ್ಲಿ ಅಪಘಾತ ಸಂಭವಿಸಿದೆ. ದಿಬ್ರುಗಢದಿಂದ ತಿನ್ಸುಕಿಯಾಗೆ ಪ್ರಯಾಣಿಸುತ್ತಿದ್ದ ಕಾರು ಇದ್ದಕ್ಕಿದ್ದಂತೆ ನಿರ್ಮಾಣ ಹಂತದಲ್ಲಿರುವ ಮೋರಿಗೆ ಬಿದ್ದಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಕಾರಿನಲ್ಲಿ ಐದು ವರ್ಷದ ಮಗು ಸೇರಿದಂತೆ ಒಟ್ಟು ಆರು ಮಂದಿ ಪ್ರಯಾಣಿಕರಿದ್ದರು. ಘಟನೆಯಲ್ಲಿ ಮಗು ಸೇರಿದಂತೆ ನಾಲ್ವರು ಮೃತಪಟ್ಟಿದ್ದಾರೆ. ಮೃತರನ್ನು ಮೋಹನ್ ಶಾ, ರಾಜೇಶ್ ಗುಪ್ತಾ, ಮೊಂಟು ಶಾ ಮತ್ತು ಮಗು ಅರ್ಥವ್ ಗುಪ್ತಾ ಎಂದು ಗುರುತಿಸಲಾಗಿದೆ. ಘಟನೆಯಲ್ಲಿ ಗಂಭೀರ ಗಾಯಗೊಂಡ ಇಬ್ಬರನ್ನು ಚಿಕಿತ್ಸೆಗಾಗಿ ದಿಬ್ರುಗಢ್‌ನಲ್ಲಿರುವ ಅಸ್ಸಾಂ ವೈದ್ಯಕೀಯ ಕಾಲೇಜಿಗೆ ರವಾನಿಸಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ದಟ್ಟವಾದ ಮಂಜು ಮತ್ತು ಸರಿಯಾದ ಸೂಚನಾ ಫಲಕಗಳಿಲ್ಲದ ಕಾರಣ ಈ ಘಟನೆ ಸಂಭವಿಸಿರಬಹುದು. ಸ್ಥಳೀಯರು ರಕ್ಷಣಾ ಕಾರ್ಯಾಚರಣೆ ನಡೆಸಿ ಗಾಯಾಳುಗಳನ್ನು ಆಸ್ಪತ್ರೆಗೆ ತಲುಪಿಸಲು ನೆರವಾಗಿದ್ದಾರೆ. ಈ ಕುರಿತು ಹೆಚ್ಚಿನ ತನಿಖೆ ನಡೆಸುತ್ತಿದ್ದೇವೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

# ಆಲಿಯಾ ಭಟ್‌ಗೆ ನಾಗ್ ಅಶ್ವಿನ್ ಆಯಕ್ಷನ್ ಕಟ್



ಕಲ್ಕಿ 2898 ಎಡಿ ಚಿತ್ರ ಸಕ್ಸಸ್


ಖುಷಿಯಲ್ಲಿದ್ದಾರೆ ನಾಗ್ ಅಶ್ವಿನ್. ದೀಪಿಕಾ ಪಡುಕೋಣೆಗೆ ನಿರ್ದೇಶನ ಮಾಡಿ ಸೈ ಎನಿಸಿಕೊಂಡಿದ್ದ ನಾಗ್ ಅಶ್ವಿನ್ ಅವರು ಆಲಿಯಾ ಭಟ್‌ಗೆ ಡೈರೆಕ್ಷನ್ ಮಾಡಲು ಸಜ್ಜಾಗಿದ್ದಾರೆ ಎನ್ನಲಾದ ವಿಚಾರವೊಂದು ಸೋಶಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿದೆ. 'ಕಲ್ಕಿ 2898 ಎಡಿ' ಚಿತ್ರ ಸಕ್ಸಸ್ ಕಂಡಿದೆ. ಈ ಚಿತ್ರದಲ್ಲಿ ಸ್ಟಾರ್ ನಟಿ ದೀಪಿಕಾ ಅವರು ಪ್ರಭಾಸ್ ಜೊತೆ ಪ್ರಮುಖ ಪಾತ್ರದಲ್ಲಿ ನಟಿಸಿದರು. ಈ ಚಿತ್ರವನ್ನು ನಾಗ್ ಅಶ್ವಿನ್ ನಿರ್ದೇಶನ ಮಾಡಿದರು. ಈ ಬೆನ್ನಲ್ಲೇ, ಮಹಿಳಾ ಪ್ರಧಾನ ಚಿತ್ರ ಮಾಡಲು ಅವರು ಮುಂದಾಗಿದ್ದಾರೆ. ಇದರಲ್ಲಿ ಪ್ರಮುಖ ಪಾತ್ರದಲ್ಲಿ ನಟಿಸಲು ಆಲಿಯಾರನ್ನು ಸಂಪರ್ಕಿಸಿದ್ದಾರೆ ಎನ್ನಲಾಗಿದೆ. ಈಗಾಗಲೇ ಆಲಿಯಾ ಜೊತೆ ನಾಗ್ ಅಶ್ವಿನ್ ಒಂದು ಹಂತದ ಮಾತುಕತೆ ಮಾಡಿದ್ದಾರೆ ಎನ್ನಲಾಗಿದೆ. ಸಿನಿಮಾ ಕಥೆ ಕುರಿತು ಚರ್ಚಿಸಿದ್ದಾರೆ.

ಆದರೆ ನಟಿ ಸಿನಿಮಾ ಮಾಡಲು ಗ್ರೀನ್ ಸಿಗ್ನಲ್ ಕೊಟ್ರಾ ಎಂಬುದು ಖಾತ್ರಿಯಾಗಿಲ್ಲ. ಅಧಿಕೃತವಾಗಿ ಚಿತ್ರತಂಡದಿಂದ ಅಪ್‌ಡೇಟ್ ಬರುವವರೆಗೂ ಕಾಯಬೇಕಿದೆ. ಈಗಾಗಲೇ ಕೀರ್ತಿ ಸುರೇಶ್ ಜೊತೆ 'ಮಹಾನಟಿ', ದೀಪಿಕಾ ಜೊತೆ 'ಕಲ್ಕಿ 2898 ಎಡಿ' ಸಿನಿಮಾ ಮಾಡಿ ಸೈ ಎನಿಸಿಕೊಂಡಿದ್ದಾರೆ. 2 ಸೂಪರ್ ಹಿಟ್ ಚಿತ್ರಗಳನ್ನು ಕೊಟ್ಟಿರುವ ನಾಗ್ ಅಶ್ವಿನ್ ಮುಂಬರುವ ಸಿನಿಮಾಗಳ ಮೇಲೆ ಫ್ಯಾನ್ಸ್‌ಗೆ ಭಾರೀ ನಿರೀಕ್ಷೆಯಿದೆ.

# ಅಮರನ್ ಚಿತ್ರದ ಅಬ್ಬರ

## ಶಿವಕಾರ್ತಿಕೇಯನ್, ಸಾಯಿ ಪಲ್ಲವಿ ಸಿನಿಮಾಗೆ ಪ್ರೇಕ್ಷಕ ಜೈಕಾರ





ತಮಿಳು ನಟ ಶಿವ ಕಾರ್ತಿಕೇಯನ್ ಹಾಗೂ ನಟಿ ಸಾಯಿ ಪಲ್ಲವಿ ನಟನೆಯ 'ಅಮರನ್' ಸಿನಿಮಾ ಭರ್ಜರಿ ಪ್ರದರ್ಶನ ಕಾಣುತ್ತಿದೆ. ಬಾಕ್ಸಾಫೀಸ್ ನಲ್ಲೂ ಗಳಿಕೆಯಲ್ಲಿ ಸಖತ್ ಸದ್ದು ಮಾಡ್ತಿದೆ. ಹುತಾತ್ಮರಾದ ಭಾರತೀಯ ಸೇನಾ ಅಧಿಕಾರಿ ಮೇಜರ್ ಮುಕುಂದ್ ವರದರಾಜನ್ ಅವರ ಸ್ಪೂರ್ತಿದಾಯಕ ಕಥೆ ಹೇಳುವ ಬಹುನಿರೀಕ್ಷಿತ ಬಯೋಪಿಕ್‌ಗೆ ಉತ್ತಮ ರೆಸ್ಪಾನ್ಸ್ ಸಿಕ್ಕಿದೆ. ಅಕ್ಟೋಬರ್ 31ರಂದು ತೆರೆಕಂಡ 'ಅಮರನ್ ಸಿನಿಮಾ' ಎಲ್ಲಾ ಕಡೆಗಳಿಂದಲೂ ಮೆಚ್ಚುಗೆಗೆ ಪಾತ್ರವಾಗಿದೆ. ಸೋನಿ ಪಿಕ್ಚರ್ಸ್ ಸಹಯೋಗದಲ್ಲಿ ನಟ ಕಮಲ್ ಹಾಸನ್ ಅವರ ರಾಜ ಕಮಲ್ ಫಿಲ್ಮ್ಸ್ ಇಂಟರ್ನ್ಯಾಷನಲ್ ಈ ಚಿತ್ರವನ್ನು ನಿರ್ಮಿಸಿದೆ. ಚಿತ್ರದಲ್ಲಿ ಶಿವಕಾರ್ತಿಕೇಯನ್ ಸೇನಾ ಯೋಧನ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ನಟಿ ಸಾಯಿ ಪಲ್ಲವಿ ಅದ್ಭುತವಾಗಿ ನಟಿಸಿದ್ದಾರೆ. ಈ ಚಿತ್ರಕ್ಕೆ ಮ್ಯೂಸಿಕ್ ಡೈರೆಕ್ಟರ್ ಜಿವಿ ಪ್ರಕಾಶ್ ಕುಮಾರ್ ಸಂಗೀತ ನೀಡಿದ್ದಾರೆ.

ಈ ಚಿತ್ರವು ದಿವಂಗತ ಸೇನಾ ಮೇಜರ್ ಮುಕುಂದ್ ವರದರಾಜನ್ ಅವರ ಜೀವನವನ್ನು ಆಧರಿಸಿದೆ. ಶಿವಕಾರ್ತಿಕೇಯನ್ ಅವರು ಮೇಜರ್ ಮುಕುಂದ್ ಪಾತ್ರದಲ್ಲಿ ಕಾಣಿಸಿಕೊಂಡ್ರೆ. ಪತ್ನಿ ಇಂದೂ ರೆಬೆಕಾ ವರ್ಗೀಸ್ ಪಾತ್ರದಲ್ಲಿ ಸಾಯಿ ಪಲ್ಲವಿ ನಟಿಸಿದ್ದಾರೆ. ಈ ಚಿತ್ರವನ್ನು ರಾಜ್‌ಕುಮಾರ್ ಪೆರಿಯಸಾಮಿ ನಿರ್ದೇಶನ ಮಾಡಿದ್ದಾರೆ. ದೀಪಾವಳಿ ಹಬ್ಬದ ದಿನದಂದು ತಮಿಳು ಸೇರಿದಂತೆ ಬಹುಭಾಷೆಗಳಲ್ಲಿ 'ಅಮರನ್' ಎಲ್ಲೆಡೆ ಅಬ್ಬರಿಸುತ್ತಿದ್ದು, ಇದೀಗ ಪ್ರೇಕ್ಷಕರು ಸಿನಿಮಾವನ್ನು ಮೆಚ್ಚಿಕೊಂಡಿದ್ದಕ್ಕೆ ಚಿತ್ರತಂಡದ ಖುಷಿಗೆ ಕಾರಣವಾಗಿದೆ.



# 2 ಕೋಟಿ ಸಂಭಾವನೆ ಚಾರ್ಜ್ ಮಾಡಿದ್ರಾ ಶ್ರೀಲೀಲಾ

ಕನ್ನಡದ 'ಭರಾಟೆ' ಬೆಡಗಿ ಶ್ರೀಲೀಲಾ ಅವರು ಅಲ್ಲು ಅರ್ಜುನ್ ಜೊತೆ ಸೊಂಟ ಬಳುಕಿಸಿರುವ ವಿಚಾರ ಈಗಾಗಲೇ ಚಿತ್ರತಂಡ ಅಧಿಕೃತವಾಗಿ ತಿಳಿಸಿದೆ. ಈ ಬೆನ್ನಲ್ಲೇ 'ಪುಷ್ಪ 2'ನಲ್ಲಿ ಐಟಂ ಹಾಡಿಗೆ ಹೆಜ್ಜೆ ಹಾಕಲು ನಟಿ, 2 ಕೋಟಿ ರೂ. ಸಂಭಾವನೆಯನ್ನು ಚಾರ್ಜ್ ಮಾಡಿದ್ದಾರೆ ಎನ್ನಲಾದ ಸುದ್ದಿಯೊಂದು ಸೋಶಿಯಲ್ ಮೀಡಿಯಾದಲ್ಲಿ ಚರ್ಚೆಗೆ ಗ್ರಾಸವಾಗಿದೆ. ಈ ಹಿಂದೆ 'ಪುಷ್ಪ' ಸಿನಿಮಾದಲ್ಲಿ ಸಮಂತಾ ಸೊಂಟ ಬಳುಕಿಸಿದ್ದಕ್ಕೆ 5 ಕೋಟಿ ರೂ. ಸಂಭಾವನೆ ಪಡೆದಿದ್ದಾರೆ ಎಂಬ ಸುದ್ದಿ ಹರಿದಾಡಿತ್ತು. ಈಗ ಪಾರ್ಟ್ 2ನಲ್ಲಿ ಅಲ್ಲು ಅರ್ಜುನ್ ಜೊತೆ ಹೆಜ್ಜೆ ಹಾಕಿದ್ದಕ್ಕೆ ಡ್ಯಾನ್ಸಿಂಗ್ ಕ್ವೀನ್ ಶ್ರೀಲೀಲಾ 2 ಕೋಟಿ ರೂ. ಸಂಭಾವನೆ ಚಾರ್ಜ್ ಮಾಡಿದ್ದಾರೆ ಎನ್ನಲಾಗಿದೆ. ಈ ವಿಷ್ಯ ಸೋಶಿಯಲ್ ಮೀಡಿಯಾದಲ್ಲಿ ನೆಟ್ಟಿಗರ ಚರ್ಚೆಗೆ ಗ್ರಾಸವಾಗಿದೆ. ಅಷ್ಟಕ್ಕೂ ಈ ಸುದ್ದಿ ನಿಜನಾ ಎಂದು ಕಾದುನೋಡಬೇಕಿದೆ.ಇನ್ನೂ ನ.10ರಂದು ನಟಿಯ ಪೋಸ್ಟರ್ ಅನ್ನು ಚಿತ್ರತಂಡ ರಿಲೀಸ್ ಮಾಡಿತ್ತು. ಸದ್ಯದಲ್ಲೇ ಶ್ರೀಲೀಲಾ ಐಟಂ ಸಾಂಗ್ ರಿಲೀಸ್ ಬಗ್ಗೆಯೂ ಅಪ್‌ಡೇಟ್ ಸಿಗಲಿದೆ.


# ಮುದ್ದಾದ ಗಂಡು ಮಗುವಿಗೆ ಜನ್ಮ ಕೊಟ್ಟ ಅವಿವಾ

ಅಭಿಷೇಕ್ ಅಂಬರೀಶ್ ಪತ್ನಿ ಅವಿವಾ ಮಂಗಳವಾರ ಮುಂಜಾನೆ 8:30ರ ಸುಮಾರಿಗೆ ಮುದ್ದಾದ ಗಂಡು ಮಗುವಿಗೆ ಜನ್ಮ ನೀಡಿದ್ದು.

## ರೆಬೆಲ್ ಸ್ಟಾರ್ ಮನೆಯಲ್ಲಿ ಸಂಭ್ರಮ



ತಾಯಿ ಮಗು ಇಬ್ಬರೂ ಕೂಡ ಆರೋಗ್ಯವಾಗಿದ್ದಾರೆ ಎಂದು ತಿಳಿದು ಬಂದಿದೆ. ಇತ್ತೀಚೆಗಷ್ಟೇ ಅದ್ದೂರಿಯಾಗಿ ಸೀಮಂತ ಕಾರ್ಯವನ್ನು ಮಾಡಿಸಿಕೊಂಡಿದ್ದ ಆವಿವಾ ಅಭಿಷೇಕ್ ಸದ್ಯದಲ್ಲಿಯೇ ಹೊಸ ಅತಿಥಿ ಬರಲಿದ್ದಾನೆ ಎಂಬ ಸಿಹಿ ಸುದ್ದಿಯನ್ನು ಕೊಟ್ಟಿದ್ದರು. ಈಗ ಅವಿವಾ ಗಂಡು ಮಗುವಿಗೆ ಜನ್ಮ ನೀಡಿದ್ದು. ಮಂಡ್ಯದ ಗಂಡು ಅಂಬರೀಶ್ ಮತ್ತೆ ಹುಟ್ಟಿ ಬಂದಿದ್ದಾರೆ ಎಂದು ಅವರ ಅಭಿಮಾನಿಗಳು ಫುಲ್ ಖುಷಿಯಾಗಿದ್ದಾರೆ. ಅಭಿಷೇಕ್ ಮತ್ತು ಅವಿವಾ ಅವರ ಮದುವೆಯು ಕಳೆದ ವರ್ಷ ಜೂ.5ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ಅದ್ದೂರಿಯಾಗಿ ನಡೆದಿತ್ತು.



# ಸಂಜು ಮತ್ತು ಗೀತಾ 2 ಸಾಂಗ್ ರಿಲೀಸ್

ಪವಿತ್ರ ಇಂಟರ್‌ನ್ಯಾಷನಲ್ ಮೂವೀಮೇಕರ್ಸ್ ಅಡಿಯಲ್ಲಿ ಛಲವಾದಿ ಕುಮಾರ್ ಅವರ ನಿರ್ಮಾಣದ, ನಾಗಶೇಖರ್ ಅವರ ನಿರ್ದೇಶನದ ಈ ವರ್ಷದ ಬಹುನಿರೀಕ್ಷಿತ ಚಿತ್ರ ಸಂಜು ವೆಡ್ಸ್ ಗೀತಾ-2.

ನಾಗಶೇಖರ್ ಅವರ ಹುಟ್ಟುಹಬ್ಬದ ಪ್ರಯುಕ್ತ ಈ ಚಿತ್ರದ 'ಅವನು ಸಂಜು ಅವಳು ಗೀತಾ ಅವರಿಬ್ಬರು ಸೇರಲು ಸಂಗೀತ' ಎಂಬ ಹಾಡಿನ ಬಿಡುಗಡೆ ಕಾರ್ಯಕ್ರಮ ಅದ್ದೂರಿಯಾಗಿ ನೆರವೇರಿತು.ಅಲ್ಲಿ ನಟ ಉಪೇಂದ್ರ, ಫಿಲಂ ಚೇಂಬರ್ ಅಧ್ಯಕ್ಷ ಎನ್.ಎಂ.ಸುರೇಶ್, ನಿರ್ಮಾಪಕರ ಸಂಘದ ಅಧ್ಯಕ್ಷ ಉಮೇಶ್ ಬಣಕಾರ್ ಕೂಡ ಹಾಜರಿದ್ದರು. ಕವಿರಾಜ್ ಅವರ ಸಾಹಿತ್ಯ ರಚನೆಯ ಈ ಹಾಡಿಗೆ ಶ್ರೀಧರ್ ವಿ.ಸಂಭ್ರಮ್ ಅದ್ಭುತವಾದ ಟ್ಯೂನ್ ಹಾಕಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ನಿರ್ದೇಶಕ ನಾಗಶೇಖರ್ ನಾನು ಈ ಸಿನಿಮಾ ಮಾಡಬೇಕೆಂದು ನಿರ್ಧರಿಸಿದಾಗ ಮೊದಲು ಹಾಡುಗಳನ್ನು ರೆಡಿ ಮಾಡಿಕೊಳ್ಳಬೇಕಾಗಿತ್ತು. ಒಟ್ಟು 6 ಸುಂದರ ಹಾಡುಗಳು ಚಿತ್ರದಲ್ಲಿದ್ದು, ಈ ಹಾಡಿನಲ್ಲಿ ಒಬ್ಬ ಸೈನಿಕನ ಪ್ರೇಮಕಥೆಯನ್ನು ಹೇಳಿದ್ದೇನೆ. ಸ್ವಿಟ್ಜರ್ ಲ್ಯಾಂಡ್ ಸೈನಿಕನೊಬ್ಬ ತನ್ನ ರಾಣಿ ಸೆಲ್ವಿಕ್‌ಳನ್ನು ತನ್ನ ಹೃದಯದಲ್ಲಿಟ್ಟುಕೊಂಡು ಪ್ರೀತಿ ಮಾಡ್ತಿರ್ತಾನೆ. ಆತನಿಗೆ ತನ್ನ ಪ್ರೀತಿಯನ್ನು ಹೇಳಿಕೊಳ್ಳಲಿಕ್ಕೆ ಆಗ್ತಿರಲಿಲ್ಲ, ಏಕೆಂದರೆ ಆಕೆ ಮಹಾರಾಣಿ. ಆತನದು ಒನ್ ವೇ ಲವ್, ಒಮ್ಮೆ ಜರ್ಮನ್ ಸೈನಿಕರು ಸ್ವಿಟ್ಜರ್ ಲ್ಯಾಂಡ್ ಮೇಲೆ ಅಟ್ಯಾಕ್ ಮಾಡ್ತಾರೆ. ಆಗ ವೀರಾವೇಶದಿಂದ ಹೋರಾಡಿದ ಆ ಸೈನಿಕ ಅವರನ್ನು ಸೋಲಿಸಿ ವೀರಮರಣವನ್ನಪ್ಪುತ್ತಾನೆ, ತನ್ನ ರಾಣಿಗೆ ಆಕೆಯ ಕಿರೀಟವನ್ನು ಮತ್ತೆ ತಂದುಕೊಡುತ್ತಾನೆ. ಸಾಯೋ ಸಮಯದಲ್ಲಿ ಆತ ರಾಣಿಗೆ ತನ್ನ ರಕ್ತದಲ್ಲಿ ''ಐ ಲವ್ ಯು ಫಾರೆವರ್'' ಅಂತ ಒಂದು ಪತ್ರ ಬರೆಯುತ್ತಾನೆ. ಈ ಹಾಡು ಚಿತ್ರಕಥೆಯಲ್ಲಿ ಬಹಳ ಮುಖ್ಯವಾದ ಭಾಗವಾಗಿರುತ್ತದೆ. ಈ ಸಾಂಗ್‌ನಲ್ಲಿ ಮೊದಲಬಾರಿಗೆ ಆಕ್ಷನ್ ಇಟ್ಟಿದ್ದೇನೆ ಎಂದು ಹೇಳಿದರು.

# ಟೀಮ್ ಇಂಡಿಯಾಗೆ ಗುಡ್ ನ್ಯೂಸ್: ಮೊಹಮ್ಮದ್ ಶಮಿ ರಿಟರ್ನ್ಸ್

2023ರ ಏಕದಿನ ವಿಶ್ವಕಪ್‌ನಲ್ಲಿ ಕರಾರುವಾಕ್ ದಾಳಿ ಮೂಲಕ ಮೊಹಮ್ಮದ್ ಶಮಿ ಸಂಚಲನ ಸೃಷ್ಟಿಸಿದ್ದರು. 7 ಪಂದ್ಯಗಳಲ್ಲಿ ಮಾತ್ರ ಕಣಕ್ಕಿಳಿದಿದ್ದ ಶಮಿ ಒಟ್ಟು 24 ವಿಕೆಟ್ ಕಬಳಿಸಿದ್ದರು. ಇದೀಗ ಒಂದು ವರ್ಷದ ಬಳಿಕ ಟೀಮ್ ಇಂಡಿಯಾ ವೇಗಿ ರಣಜಿ ಟೂರ್ನಿಯಲ್ಲಿ ಕಣಕ್ಕಿಳಿಯುತ್ತಿದ್ದಾರೆ.

ಟೀಮ್ ಇಂಡಿಯಾ ವೇಗಿ ಮೊಹಮ್ಮದ್ ಶಮಿ ಕಂಬ್ಯಾಕ್ ಮಾಡಲು ಸಜ್ಜಾಗಿದ್ದಾರೆ. ನಾಳೆಯಿಂದ ಶುರುವಾಗಲಿರುವ ರಣಜಿ ಟ್ರೋಫಿಯ ಗ್ರೂಪ್-ಸಿ ಪಂದ್ಯದಲ್ಲಿ ಬಂಗಾಳ ಪರ ಶಮಿ ಕಣಕ್ಕಿಳಿಯುವುದು ಖಚಿತವಾಗಿದೆ. ಇದರೊಂದಿಗೆ ಟೀಮ್ ಇಂಡಿಯಾ ವೇಗಿ ಸ್ಪರ್ಧಾತ್ಮಕ ಕ್ರಿಕೆಟ್‌ಗೆ ಮರಳುತ್ತಿರುವುದು ಕೂಡ ಕನ್ಫರ್ಮ್ ಆದಂತಾಗಿದೆ.

ಮೊಹಮ್ಮದ್ ಶಮಿ ಕಳೆದೊಂದು ವರ್ಷದಿಂದ ಮೈದಾನದಿಂದ ದೂರ ಉಳಿದಿದ್ದರು. ಪಾದದ ನೋವಿನ ಕಾರಣ ಟೀಮ್ ಇಂಡಿಯಾದಿಂದ ಹೊರಗುಳಿದಿದ್ದ ಶಮಿ, ಇದೀಗ ಇಂದೋರ್‌ನಲ್ಲಿ ನಡೆಯಲಿರುವ ಮಧ್ಯ ಪ್ರದೇಶ್ ವಿರುದ್ಧದ ಪಂದ್ಯದ ಮೂಲಕ ಮತ್ತೆ ಕಣಕ್ಕಿಳಿಯಲು ಸಜ್ಜಾಗಿದ್ದಾರೆ.

2023 ರ ಏಕದಿನ ವಿಶ್ವಕಪ್ ವೇಳೆ ಮೊಹಮ್ಮದ್ ಶಮಿ ಅವರ ಪಾದದಲ್ಲಿ ನೋವು ಕಾಣಿಸಿಕೊಂಡಿತ್ತು. ಈ ನೋವಿನ ನಡುವೆಯೂ ಅವರು ನೋವು ನಿವಾರಕ ಮಾತ್ರೆಗಳನ್ನು ತೆಗೆದುಕೊಂಡು ಟೀಮ್ ಇಂಡಿಯಾ ಪರ ಕಣಕ್ಕಿಳಿದಿದ್ದರು. ಇದರಿಂದ ಅವರ ಪಾದದ ಸಮಸ್ಯೆಯು ಬಿಗಡಾಯಿಸಿದೆ.

ಹೀಗಾಗಿ ಅವರು ಏಕದಿನ ವಿಶ್ವಕಪ್ ಬಳಿಕ ಯಾವುದೇ ಪಂದ್ಯವಾಡಿರಲಿಲ್ಲ. ಅಲ್ಲದೆ ವೈದ್ಯಕೀಯ ಪರಿಶೀಲನೆ ವೇಳೆ ಶಸ್ತ್ರಚಿಕಿತ್ಸೆ ಮಾಡಬೇಕಾದ ಅನಿವಾರ್ಯತೆ ಕಂಡು ಬಂದಿತ್ತು. ಅದರಂತೆ ಕಳೆದ ಫೆಬ್ರವರಿ ತಿಂಗಳಲ್ಲಿ ಮೊಹಮ್ಮದ್ ಶಮಿ ಸರ್ಜರಿಗೆ ಒಳಗಾಗಿದ್ದರು. ಇದೇ ಕಾರಣದಿಂದಾಗಿ ಐಪಿಎಲ್‌ನಲ್ಲೂ ಕಾಣಿಸಿಕೊಂಡಿರಲಿಲ್ಲ.

ಅಲ್ಲದೆ ಸಂಪೂರ್ಣ ಫಿಟ್‌ನೆಸ್ ಸಾಧಿಸದ ಕಾರಣ ಅವರನ್ನು ಆಸ್ಟ್ರೇಲಿಯಾ ವಿರುದ್ಧದ ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಗೂ ಆಯ್ಕೆ ಮಾಡಿರಲಿಲ್ಲ. ಇದೀಗ ಫಿಟ್‌ನೆಸ್ ಸಾಧಿಸಿರುವ ಶಮಿ ದೇಶೀಯ ಅಂಗಳದಲ್ಲಿ ಕಣಕ್ಕಿಳಿಯಲು ಸಜ್ಜಾಗಿದ್ದಾರೆ. ಇನ್ನು ರಣಜಿ ಟೂರ್ನಿಯಲ್ಲಿ ಎರಡು ಮೂರು ಪಂದ್ಯಗಳ ಮೂಲಕ ತಮ್ಮ ಫಿಟ್‌ನೆಸ್ ಅನ್ನು ಸಾಬೀತುಪಡಿಸಿದರೆ, ಅವರನ್ನು ಆಸ್ಟ್ರೇಲಿಯಾ ವಿರುದ್ಧದ 3ನೇ ಟೆಸ್ಟ್ ಪಂದ್ಯದ ವೇಳೆ ತಂಡಕ್ಕೆ ಸೇರ್ಪಡೆಗೊಳಿಸಬಹುದು.

ಹೀಗಾಗಿ ಮೊಹಮ್ಮದ್ ಶಮಿ ಅವರ ಕಂಬ್ಯಾಕ್ ಟೀಮ್ ಇಂಡಿಯಾ ಪಾಲಿಗೆ ಶುಭ ಸುದ್ದಿ ಎನ್ನಬಹುದು.

# ಕ್ರಿಕೆಟ್ ಇತಿಹಾಸದಲ್ಲೇ ಅತ್ಯಂತ ಕೆಟ್ಟ ದಾಖಲೆ ಬರೆದ ಆಸ್ಟ್ರೇಲಿಯಾ



ಪಾಕಿಸ್ತಾನ್ ವಿರುದ್ಧದ ಮೂರು ಪಂದ್ಯಗಳ ಸರಣಿಯಲ್ಲಿ ಆಸ್ಟ್ರೇಲಿಯಾದ ಯಾವುದೇ ಬ್ಯಾಟರ್ ಅರ್ಧಶತಕ ಬಾರಿಸಿಲ್ಲ. ಈ ಸರಣಿಯ ಮೊದಲ ಪಂದ್ಯದಲ್ಲಿ ಜೋಶ್ ಇಂಗ್ಲಿಸ್ 49 ರನ್ ಬಾರಿಸಿದ್ದು ಗರಿಷ್ಠ ಸ್ಕೋರ್. ಇದರೊಂದಿಗೆ ಕೆಟ್ಟ ದಾಖಲೆಯೊಂದು ಆಸ್ಟ್ರೇಲಿಯಾ ತಂಡದ ಪಾಲಾಗಿದೆ.


ಆಸ್ಟ್ರೇಲಿಯಾ ತಂಡವು ಏಕದಿನ ಸರಣಿ ಆಡಲು ಶುರುವಾಗಿ 54 ವರ್ಷಗಳೇ ಕಳೆದಿವೆ. ಆದರೆ ಹಿಂದೆಂದೂ ಕಂಡರಿಯದ, ಕೇಳರಿಯದ ರೀತಿಯಲ್ಲಿ ಇದೇ ಮೊದಲ ಬಾರಿಗೆ ಕೆಟ್ಟ ದಾಖಲೆಯೊಂದನ್ನು ಬರೆದಿದೆ. ಅದು ಕೂಡ ಪಾಕಿಸ್ತಾನ್ ಬೌಲರ್‌ಗಳ ಮುಂದೆ ಮಂಡಿಯೂರು ಮೂಲಕ ಎಂಬುದೇ ಅಚ್ಚರಿ.

1970 ರಿಂದ ಏಕದಿನ ಸರಣಿ ಆಡುತ್ತಿರುವ ಆಸ್ಟ್ರೇಲಿಯಾ ಇದೇ ಮೊದಲ ಬಾರಿಗೆ ಒಂದೇ ಒಂದು ಅರ್ಧಶತಕ ಬಾರಿಸದೇ ಸರಣಿಯೊಂದನ್ನು ಕೊನೆಗೊಳಿಸಿದೆ. ಅಂದರೆ ಪಾಕಿಸ್ತಾನ್ ವಿರುದ್ಧದ ಮೂರು ಪಂದ್ಯಗಳ ಸರಣಿಯಲ್ಲಿ ಆಸ್ಟ್ರೇಲಿಯಾದ ಯಾವುದೇ ಬ್ಯಾಟರ್ ಅರ್ಧಶತಕ ಬಾರಿಸಿಲ್ಲ.

ಆಸ್ಟ್ರೇಲಿಯಾ ತಂಡವು ಈವರೆಗೆ 200 ಕ್ಕೂ ಅಧಿಕ ಏಕದಿನ ಸರಣಿಗಳನ್ನಾಡಿದೆ. ಈ ಪ್ರತಿ ಸರಣಿಗಳಲ್ಲೂ ಆಸ್ಟ್ರೇಲಿಯಾದ ಯಾವುದಾದರೂ ಒಬ್ಬ ಬ್ಯಾಟರ್ ಅರ್ಧಶತಕ ಬಾರಿಸಿದ್ದಾರೆ. ಆದರೆ ಇದೇ ಮೊದಲ ಬಾರಿಗೆ ಸರಣಿಯೊಂದರಲ್ಲಿ ಹಾಫ್ ಸೆಂಚುರಿ ಸಿಡಿಸುವಲ್ಲಿ ಆಸ್ಟ್ರೇಲಿಯಾ ಬ್ಯಾಟರ್‌ಗಳು ವಿಫಲರಾಗಿದ್ದಾರೆ. ಈ ಮೂಲಕ ಏಕದಿನ ಕ್ರಿಕೆಟ್ ಇತಿಹಾಸದಲ್ಲಿ ಅತ್ಯಂತ ಕೆಟ್ಟ ದಾಖಲೆ ಬರೆದಿದೆ. ಇಂತಹದೊಂದು ಕೆಟ್ಟ ದಾಖಲೆ ಬರೆಸಿರುವುದು ಪಾಕ್ ವೇಗಿಗಳು. ಏಕೆಂದರೆ ಆಸ್ಟ್ರೇಲಿಯಾ ವಿರುದ್ಧದ ಮೂರು ಪಂದ್ಯಗಳಲ್ಲಿ ಪಾಕಿಸ್ತಾನ್ ತಂಡದ ವೇಗಿಗಳಾದ ಹ್ಯಾರಿಸ್ ರೌಫ್, ಶಾಹೀನ್ ಶಾ ಅಫ್ರಿದಿ, ನಸೀಮ್ ಶಾ ಹಾಗೂ ಮೊಹಮ್ಮದ್ ಹಸ್ನೈನ್ ಜೊತೆಗೂಡಿ ಒಟ್ಟು 26 ವಿಕೆಟ್ ಕಬಳಿಸಿದ್ದಾರೆ. ಅಲ್ಲದೆ ಎರಡು ಬಾರಿ ಆಸೀಸ್ ಪಡೆಯನ್ನು 165 ರನ್‌ಗಳ ಒಳಗೆ ಆಲೌಟ್ ಮಾಡಿದೆ. ಈ ಸರಣಿಯ ಮೊದಲ ಮ್ಯಾಚ್‌ನಲ್ಲಿ ಆಸ್ಟ್ರೇಲಿಯಾ ತಂಡವು 2 ವಿಕೆಟ್‌ಗಳ ರೋಚಕ ಜಯ ಸಾಧಿಸಿದರೆ, ಎರಡನೇ ಪಂದ್ಯದಲ್ಲಿ ಪಾಕಿಸ್ತಾನ್ ತಂಡವು 9 ವಿಕೆಟ್‌ಗಳ ಅಮೋಘ ಗೆಲುವು ದಾಖಲಿಸಿತ್ತು. ಇನ್ನು ಮೂರನೇ ಪಂದ್ಯದಲ್ಲಿ 8 ವಿಕೆಟ್‌ಗಳ ಜಯ ಸಾಧಿಸಿತು.

# ಗೊಡ್ಡು ಬೆದರಿಕೆಯೊಡ್ಡಿ ಸಂಕಷ್ಟಕ್ಕೆ ಸಿಲುಕಿದ ಪಾಕಿಸ್ತಾನ್

ಈ ಬಾರಿಯ ಚಾಂಪಿಯನ್ಸ್ ಟ್ರೋಫಿ ಆಯೋಜನೆಯ ಹಕ್ಕು ಪಾಕಿಸ್ತಾನ್ ಕ್ರಿಕೆಟ್ ಮಂಡಳಿ ಕೈಯಲ್ಲಿದೆ. ಆದರೆ ಪಾಕ್‌ನಲ್ಲಿ ಟೂರ್ನಿ ನಡೆದರೆ ಭಾರತ ತಂಡ ತೆರಳುವುದಿಲ್ಲ ಎಂದು ಬಿಸಿಸಿಐ ಸ್ಪಷ್ಟಪಡಿಸಿದೆ. ಹೀಗಾಗಿಯೇ ಇದೀಗ ಟೂರ್ನಿಯ ಆಯೋಜನೆಯಲ್ಲಿ ಮಹತ್ವದ ಬದಲಾವಣೆ ಕಂಡು ಬರುವ ಸಾಧ್ಯತೆಯಿದೆ. 2025ರ ಚಾಂಪಿಯನ್ಸ್ ಟ್ರೋಫಿ ಎಲ್ಲಿ ನಡೆಯಲಿದೆ ಎಂಬುದೇ ಈಗ ಪ್ರಶ್ನೆ. ಏಕೆಂದರೆ ಚಾಂಪಿಯನ್ಸ್ ಟ್ರೋಫಿ ಆಯೋಜನೆಯ ಹಕ್ಕನ್ನು ಹೊಂದಿರುವ ಪಾಕಿಸ್ತಾನಕ್ಕೆ ಇದೀಗ ಆತಿಥ್ಯದ ಹಕ್ಕು ಕೈ ತಪ್ಪುವ ಭೀತಿ ಎದುರಾಗಿದೆ. ಇದಕ್ಕೆ ಮುಖ್ಯ ಕಾರಣ ಪಾಕಿಸ್ತಾನದಲ್ಲಿ ಆಡಲು ಟೀಮ್ ಇಂಡಿಯಾ ಹಿಂದೇಟು ಹಾಕಿರುವುದು. ಹೀಗಾಗಿ ಹೈಬ್ರಿಡ್ ಮಾದರಿಯಲ್ಲಿ ಟೂರ್ನಿಯನ್ನು ಆಯೋಜಿಸಬೇಕಾದ ಅನಿವಾರ್ಯತೆ ಪಿಸಿಬಿ ಮುಂದಿದೆ. ಆದರೆ ಹೈಬ್ರಿಡ್ ಮಾದರಿಯಲ್ಲಿ ಟೂರ್ನಿ ಆಯೋಜನೆಗೆ ಪಾಕಿಸ್ತಾನ್ ಕ್ರಿಕೆಟ್ ಬೋರ್ಡ್ ಆಸಕ್ತಿ ತೋರಿಸುತ್ತಿಲ್ಲ. ಬದಲಾಗಿ ಪಾಕ್‌ನಲ್ಲೇ ಟೂರ್ನಿ ಆಯೋಜಿಸುವುದಾಗಿ ಪಟ್ಟು ಹಿಡಿದಿದೆ. ಆದರೆ ಪಾಕಿಸ್ತಾನದಲ್ಲಿ ಪಂದ್ಯಾವಳಿ ನಡೆದರೆ, ಭಾರತ ತಂಡ ಹಿಂದೆ ಸರಿಯುವುದು ಖಚಿತ. ಹೀಗಾಗಿಯೇ ಇದೀಗ ಐಸಿಸಿ ಪರ್ಯಾಯ ಮಾರ್ಗಗಳನ್ನು ಎದುರು ನೋಡುತ್ತಿದೆ.ಇತ್ತ ಪಾಕಿಸ್ತಾನ್ ಹೈಬ್ರಿಡ್ ಮಾದರಿಯಲ್ಲಿ ಚಾಂಪಿಯನ್ಸ್ ಟ್ರೋಫಿ ಆಯೋಜಿಸದಿದ್ದರೆ, ಟೂರ್ನಿಯು ಬೇರೊಂದು ದೇಶಕ್ಕೆ ಸ್ಥಳಾಂತರವಾಗುವುದು ಖಚಿತ. ಈ ಅವಕಾಶವನ್ನು ಬಳಸಿಕೊಳ್ಳಲು ಇದೀಗ ಸೌತ್ ಆಫ್ರಿಕಾ ಕ್ರಿಕೆಟ್ ಮಂಡಳಿ ಮುಂದಾಗಿದೆ ಎಂದು ವರದಿಯಾಗಿದೆ.







# ಟೀಮ್ ಇಂಡಿಯಾಗೆ ಕಂಬ್ಯಾಕ್ ಮಾಡ್ತೀನಿ: ಕೆಎಲ್ ರಾಹುಲ್

ಭಾರತದ ಪರ 72 ಟಿ20 ಪಂದ್ಯಗಳನ್ನಾಡಿರುವ ಕೆಎಲ್ ರಾಹುಲ್ 68 ಇನಿಂಗ್ಸ್‌ಗಳಲ್ಲಿ ಒಟ್ಟು 2265 ರನ್ ಕಲೆಹಾಕಿದ್ದಾರೆ. ಈ ವೇಳೆ 2 ಶತಕ ಹಾಗೂ 22 ಅರ್ಧಶತಕಗಳನ್ನು ಬಾರಿಸಿದ್ದಾರೆ. ಇದೀಗ ಮತ್ತೆ ಭಾರತ ಟಿ20 ತಂಡದಲ್ಲಿ ಸ್ಥಾನ ಪಡೆಯುವ ವಿಶ್ವಾಸವನ್ನು ರಾಹುಲ್ ವ್ಯಕ್ತಪಡಿಸಿದ್ದಾರೆ.

ಕೆಎಲ್ ರಾಹುಲ್ ಭಾರತ ಟಿ20 ತಂಡದಿಂದ ಹೊರಬಿದ್ದು 2 ವರ್ಷಗಳೇ ಕಳೆದಿವೆ. 2022ರಲ್ಲಿ ಕೊನೆಯ ಬಾರಿ ಟೀಮ್ ಇಂಡಿಯಾ ಟಿ20 ತಂಡದಲ್ಲಿ ಕಾಣಿಸಿಕೊಂಡಿದ್ದ ಕನ್ನಡಿಗ ಇದೀಗ ಮತ್ತೆ ಬ್ಲೂ ಜೆರ್ಸಿಯಲ್ಲಿ ಕಾಣಿಸಿಕೊಳ್ಳಲು ಪಣತೊಟ್ಟಿದ್ದಾರೆ. ಅದು ಕೂಡ ಇಂಡಿಯನ್ ಪ್ರೀಮಿಯರ್ ಲೀಗ್ ಮೂಲಕ ಎಂಬುದು ವಿಶೇಷ. ಐಪಿಎಲ್ 2025 ರಲ್ಲಿ ಭರ್ಜರಿ ಪ್ರದರ್ಶನ ನೀಡುವ ಮೂಲಕ ನಾನು ಮತ್ತೆ ಭಾರತ ಟಿ20 ತಂಡದಲ್ಲಿ ಸ್ಥಾನ ಪಡೆಯುವ ಗುರಿ ಹೊಂದಿದ್ದೇನೆ. ಹಾಗಾಗಿ ಈ ಬಾರಿಯ ಐಪಿಎಲ್‌ನೊಂದಿಗೆ ನಾನು ಮತ್ತೆ ಟೀಮ್ ಇಂಡಿಯಾಗೆ ಕಂಬ್ಯಾಕ್ ಮಾಡುವ ವಿಶ್ವಾಸವಿದೆ ಎಂದು ಕೆಎಲ್ ರಾಹುಲ್ ಹೇಳಿದ್ದಾರೆ. ಸ್ವಲ್ಪ ಸಮಯದಿಂದ ನಾನು ಟಿ20 ತಂಡದಿಂದ ಹೊರಗಿದ್ದೇನೆ. ತಂಡಕ್ಕೆ ಕಂಬ್ಯಾಕ್ ಮಾಡಲು ನಾನು ಏನು ಮಾಡಬೇಕೆಂದು ನನಗೆ ತಿಳಿದಿದೆ. ಹಾಗಾಗಿ, ಈ ಬಾರಿಯ ಐಪಿಎಲ್ ಸೀಸನ್‌ನಲ್ಲಿ ಅದ್ಭುತ ಪ್ರದರ್ಶನ ನೀಡಿ ಮತ್ತೆ ಭಾರತ ಟಿ20 ತಂಡದಲ್ಲಿ ಕಾಣಿಸಿಕೊಳ್ಳುತ್ತೇನೆ ಎಂದು ರಾಹುಲ್ ಹೇಳಿದ್ದಾರೆ.

ವಿಶೇಷ ಎಂದರೆ ಈ ಬಾರಿಯ ಐಪಿಎಲ್‌ನಲ್ಲಿ ಕೆಎಲ್ ರಾಹುಲ್ ಯಾವ ತಂಡದ ಪರ ಕಣಕ್ಕಿಳಿಯಲಿದ್ದಾರೆ ಎಂಬುದು ಇನ್ನೂ ಸಹ ನಿರ್ಧಾರವಾಗಿಲ್ಲ. ಏಕೆಂದರೆ ಲಕ್ನೋ ಸೂಪರ್ ಜೈಂಟ್ಸ್ ತಂಡದಿಂದ ಹೊರಬಂದಿರುವ ಕೆಎಲ್ ಆರ್ ಮುಂಬರುವ ಮೆಗಾ ಹರಾಜಿನಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಹೀಗಾಗಿ ಐಪಿಎಲ್ ಸೀಸನ್-18 ರಲ್ಲಿ ರಾಹುಲ್ ಹೊಸ ತಂಡದ ಪರ ಕಣಕ್ಕಿಳಿಯುವುದು ಖಚಿತ. ಇನ್ನು ಭಾರತದ ಪರ 72 ಟಿ20 ಪಂದ್ಯಗಳನ್ನಾಡಿರುವ ಕೆಎಲ್ ರಾಹುಲ್ 68 ಇನಿಂಗ್ಸ್‌ಗಳಲ್ಲಿ ಒಟ್ಟು 2265 ರನ್‌ಕಲೆಹಾಕಿದ್ದಾರೆ. ಈ ವೇಳೆ 2 ಶತಕ ಹಾಗೂ 22 ಅರ್ಧಶತಕಗಳನ್ನು ಬಾರಿಸಿದ್ದಾರೆ. ಇದೀಗ ಭಾರತ ಟಿ20 ತಂಡದಿಂದ ಹೊರಗುಳಿದಿರುವ ರಾಹುಲ್ ಮುಂಬರುವ ಐಪಿಎಲ್ ಮೂಲಕ ಮತ್ತೆ ಟೀಮ್ ಇಂಡಿಯಾಗೆ ಕಂಬ್ಯಾಕ್ ಮಾಡಲಿದ್ದಾರಾ ಕಾದು ನೋಡಬೇಕಿದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966